ಸಂಪುಟ: 11 ಸಂಚಿಕೆ: 205 ಪುಟಗಳು: 4+2 ಬೆಲೆ: ₹ 3.00 ಶನಿವಾರ, ಸೆಪ್ಟೆಂಬರ್ 19, 2026 Mob : 9448326533- 9019256545 ಗದಗ

ಸಂಪಾದಕರು : ಎಚ್.ಎಮ್ ಶರೀಫನವರ್

# ವಿಜಯ ಸಾಕ್ಷಿ

ವಾಸ್ತವ, ವಸ್ತುನಿಷ್ಠ, ವಿಭಿನ್ನ... VIJAYA SAKSHI KANNADA DAILY ಕನ್ನಡ ದಿನಪತ್ರಿಕೆ




Volume : 11 Issue : 205 Pages : 4+2 Rate : 3.00 Saturday, September 19, 2026 Gadag RNI No : KARKAN/2015/63412 E-mail: vijayasakshidaily@gmail.com Post Regn.No: GDG/72/2020-22

## ಇಂದು ಹೆಸ್ಕಾಂ ಗ್ರಾಹಕರ ಸಂವಾದ ಸಭೆ

**ವಿಜಯಸಾಕ್ಷಿ ಸುದ್ದಿ, ಗದಗ**

ಗ್ರಾಹಕರ ವಿದ್ಯುತ್ ಸಮಸ್ಯೆಗಳನ್ನು ನೇರವಾಗಿ ಆಲಿಸಿ ಪರಿಹರಿಸುವ ಉದ್ದೇಶದಿಂದ ಹೆಸ್ಕಾಂನ ಕಾರ್ಯ ಮತ್ತು ಪಾಲನಾ ವಿಭಾಗ, ರೋಣ ವತಿಯಿಂದ ಸೆ.19ರಂದು ಗ್ರಾಹಕರ ಸಂವಾದ ಸಭೆ ಆಯೋಜಿಸಲಾಗಿದೆ. ಸೆ.19ರಂದು ಮಧ್ಯಾಹ್ನ 3ರಿಂದ ಸಂಜೆ 5.30ರವರೆಗೆ ರೋಣ, ಗಜೇಂದ್ರಗಡ ಹಾಗೂ ನರಗುಂದದ ಕಾರ್ಯ ಮತ್ತು ಪಾಲನಾ ಉಪವಿಭಾಗೀಯ ಕಚೇರಿಗಳಲ್ಲಿ ಏಕಕಾಲದಲ್ಲಿ ಸಭೆ ನಡೆಯಲಿದೆ ಎಂದು ಹೆಸ್ಕಾಂ ಪ್ರಕಟಣೆ ತಿಳಿಸಿದೆ. ವಿದ್ಯುತ್ ಪೂರೈಕೆ, ಬಿಲ್, ಸಂಪರ್ಕ ಸೇರಿದಂತೆ ವಿವಿಧ ಸಮಸ್ಯೆಗಳನ್ನು ಹೊಂದಿರುವ ಗ್ರಾಹಕರು ಸಭೆಯಲ್ಲಿ ಭಾಗವಹಿಸಿ ತಮ್ಮ ಅಹವಾಲುಗಳನ್ನು ನೇರವಾಗಿ ಅಧಿಕಾರಿಗಳ ಗಮನಕ್ಕೆ ತರಬಹುದು. ಸಮಸ್ಯೆಗಳನ್ನು ಆಲಿಸಿ ಸೂಕ್ತ ಪರಿಹಾರ ಕಲ್ಪಿಸುವ ಉದ್ದೇಶದಿಂದ ಸಭೆ ಹಮ್ಮಿಕೊಳ್ಳಲಾಗಿದೆ ಎಂದು ಪ್ರಕಟಣೆ ತಿಳಿಸಿದೆ.

## ಇಂದು ವಿದ್ಯುತ್ ಅದಾಲತ್

**ವಿಜಯಸಾಕ್ಷಿ ಸುದ್ದಿ, ಗದಗ**

ಗದಗ ಜಿಲ್ಲೆಯ ಶಹರ ಹಾಗೂ ಗ್ರಾಮೀಣ ಪ್ರದೇಶಗಳಲ್ಲಿನ ವಿದ್ಯುತ್ ಸಮಸ್ಯೆಗಳನ್ನು ಪರಿಹ–ರಿಸುವ ಉದ್ದೇಶದಿಂದ ಸೆ.19ರಂದು ವಿದ್ಯುತ್ ಅದಾಲತ್ ಆಯೋಜಿಸಲಾಗಿದೆ. ಪ್ರತಿ ತಿಂಗಳ ಮೂರನೇ ಶನಿವಾರ ವಿದ್ಯುತ್ ಅದಾಲತ್ ನಡೆಸಿ, ಗ್ರಾಹಕರ ಸಮಸ್ಯೆಗಳನ್ನು ಸ್ಥಳದಲ್ಲಿಯೇ ಆಲಿಸಿ ಪರಿಹಾರ ಕಲ್ಪಿಸುವಂತೆ ಸರ್ಕಾರ ಆದೇಶಿಸಿರುವ ಹಿನ್ನೆಲೆಯಲ್ಲಿ ಗದಗ ಶಹರ, ಗದಗ ಗ್ರಾಮೀಣ, ಮುಂಡರಗಿ ಹಾಗೂ ಲಕ್ಷ್ಮೇಶ್ವರ ಕಾರ್ಯ ಮತ್ತು ಪಾಲನಾ ಉಪವಿಭಾಗಗಳಲ್ಲಿ ಸೆ.19ರಂದು ಮಧ್ಯಾಹ್ನ 3 ಗಂಟೆಗೆ ವಿದ್ಯುತ್ ಅದಾಲತ್ ನಡೆಯಲಿದೆ.

ಗದಗ ಶಹರ ಉಪವಿಭಾಗದಲ್ಲಿ ಹೆಸ್ಕಾಂ ಕಾರ್ಯ ಮತ್ತು ಪಾಲನಾ ವೃತ್ತದ ಅಧೀಕ್ಷಕ ಇಂಜಿನಿಯರ್ (ವಿ.) ಅವರ ಅಧ್ಯಕ್ಷತೆಯಲ್ಲಿ ಅದಾಲತ್ ನಡೆಯಲಿದೆ. ಗದಗ ಜಿಲ್ಲೆಯ ವಿವಿಧ ಭಾಗಗಳ ಗ್ರಾಹಕರು ತಮ್ಮ ವಿದ್ಯುತ್ ಸಮಸ್ಯೆ, ಅಹವಾಲುಗಳನ್ನು ಅಧಿಕಾ–ರಿಗಳ ಗಮನಕ್ಕೆ ತಂದು ಸ್ಥಳದಲ್ಲಿಯೇ ಪರಿಹಾರ ಪಡೆಯಲು ಅವಕಾಶವಿದೆ. ಸಾರ್ವಜನಿಕರು ಪ್ರಕಟಣೆಯನ್ನು ಗಮನಿಸಿ, ವಿದ್ಯುತ್ ಸಮಸ್ಯೆಗಳಿಗೆ ಪರಿಹಾರ ಕಂಡುಕೊಳ್ಳಲು ವಿದ್ಯುತ್ ಅದಾಲತ್‌ನಲ್ಲಿ ಭಾಗವಹಿಸುವಂತೆ ಹೆಸ್ಕಾಂ ಪ್ರಕಟಣೆ ತಿಳಿಸಿದೆ.

## ಬರ ಘೋಷಣೆಗೆ ಆಗ್ರಹಿಸಿ ಸೆ.26ರ ಬಂದ್‌ಗೆ ಬೆಂಬಲ

**ವಿಜಯಸಾಕ್ಷಿ ಸುದ್ದಿ, ಗದಗ**

ಗದಗ ತಾಲೂಕನ್ನು ಬರಪೀಡಿತ ಪ್ರದೇಶವೆಂದು ಘೋಷಿಸುವಂತೆ ಆಗ್ರಹಿಸಿ ಸೆ.26ರಂದು ಕರೆ ನೀಡಿರುವ ಗದಗ ಬಂದ್‌ಗೆ ಕರ್ನಾಟಕ ರಾಜ್ಯ ರೈತ ಸಂಘ ಹಾಗೂ ಹಸಿರು ಸೇನೆ (ವಿ.ಆರ್. ನಾರಾಯಣರೆಡ್ಡಿ ಬಣ) ಬೆಂಬಲ ಘೋಷಿಸಿದೆ ಎಂದು ಸಂಘದ ಗದಗ ಜಿಲ್ಲಾ ಅಧ್ಯಕ್ಷ ಯಲ್ಲಪ್ಪ ಎಚ್. ಬಾಬರಿ ತಿಳಿಸಿದ್ದಾರೆ. ಗದಗ ತಾಲೂಕಿನಲ್ಲಿ ಮಳೆ ಕೊರತೆಯಿಂದ ರೈತರು ಸಂಕಷ್ಟಕ್ಕೆ ಸಿಲುಕಿದ್ದರೂ ತಾಲೂಕನ್ನು ಬರಪೀಡಿತ ಪಟ್ಟಿಗೆ ಸೇರಿಸದಿರುವುದು ರೈತರಿಗೆ ಅನ್ಯಾಯವಾಗಿದೆ ಎಂದು ಅವರು ಹೇಳಿಕೆಯಲ್ಲಿ ತಿಳಿಸಿದ್ದಾರೆ. ರೈತರ ಹಿತಕ್ಕಾಗಿ ಹಮ್ಮಿಕೊಂಡಿರುವ ಬಂದ್‌ಗೆ ಸಂಘದ ಎಲ್ಲಾ ಪದಾಧಿಕಾರಿಗಳು ಹಾಗೂ ಸದಸ್ಯರು ಭಾಗವಹಿಸಿ ಯಶಸ್ವಿಗೊಳಿಸಬೇಕು ಎಂದು ಕರೆ ನೀಡಿದ್ದಾರೆ.

ಗದಗ ಜಿಲ್ಲಾ ರೈತ ಹಿತಾಭಿವೃದ್ಧಿ ಸಂಘದ ಕಾರ್ಯಾಧ್ಯಕ್ಷ ಪರಮೇಶ್ವರಪ್ಪ ಜಂತ್ಲಿ ನೇತೃತ್ವದಲ್ಲಿ ನಡೆಯಲಿರುವ ಹೋರಾಟಕ್ಕೆ ಜಿಲ್ಲೆಯ ಎಲ್ಲ ರೈತಪರ ಸಂಘಟನೆಗಳು, ಸಂಘ–ಸಂಸ್ಥೆಗಳು ಬೆಂಬಲ ನೀಡಬೇಕು ಎಂದು ಯಲ್ಲಪ್ಪ ಬಾಬರಿ ಮನವಿ ಮಾಡಿದ್ದಾರೆ.

## ಸೆ.19, 20ರಂದು ಮತದಾರರ ನೋಂದಣಿಗೆ ವಿಶೇಷ ಅಭಿಯಾನ

**ವಿಜಯಸಾಕ್ಷಿ ಸುದ್ದಿ, ಗದಗ**

ಮತದಾರರ ಪಟ್ಟಿಯಲ್ಲಿ ಹೆಸರು ಸೇರ್ಪಡೆ, ತಿದ್ದುಪಡಿ ಸೇರಿದಂತೆ ಮತದಾರರ ನೋಂದಣಿ ಪ್ರಕ್ರಿಯೆಗೆ ಉತ್ತೇಜನ ನೀಡುವ ಉದ್ದೇಶದಿಂದ ಸೆ.19 ಮತ್ತು 20ರಂದು ಜಿಲ್ಲಾದ್ಯಂತ ವಿಶೇಷ ಅಭಿಯಾನ ಹಮ್ಮಿಕೊಳ್ಳಲಾಗಿದೆ ಎಂದು ಜಿಲ್ಲಾಧಿಕಾರಿ ಸಿ.ಎನ್. ಶ್ರೀಧರ್ ತಿಳಿಸಿದ್ದಾರೆ. ಸೆ.5, 2026ರ ವೇಳೆಗೆ ಗದಗ ಜಿಲ್ಲೆಯಲ್ಲಿ ಒಟ್ಟು 7,84,325 ಮತದಾರರು ಮತದಾರರ ಪಟ್ಟಿಯಲ್ಲಿದ್ದಾರೆ. ಈ ಪೈಕಿ 3,93,459 ಪುರುಷರು, 3,90,818 ಮಹಿಳೆಯರು ಹಾಗೂ 48 ತೃತೀಯ ಲಿಂಗಿ ಮತದಾರರು ಇದ್ದಾರೆ ಎಂದು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

ಮತದಾರರ ಪಟ್ಟಿಗೆ ಸಂಬಂಧಿಸಿದಂತೆ ಒಟ್ಟು 25,973 ನೋಟಿಸ್‌ಗಳನ್ನು ಜಾರಿ ಮಾಡಲಾಗಿದ್ದು, ಈ ಪೈಕಿ 24,941 ಮತದಾರರಿಗೆ ನೋಟಿಸ್‌ಗಳನ್ನು ಕಳುಹಿಸಲಾಗಿದೆ. ಇನ್ನೂ 1,032 ನೋಟಿಸ್‌ಗಳು ಬಾಕಿ ಇದ್ದು, 11,773 ನೋಟಿಸ್‌ಗಳ ವಿಚಾರಣೆ ಪೂರ್ಣಗೊಂಡಿದೆ.

ಮೊದಲ ಹಂತದ ವಿಚಾರಣೆ ಸೆ.5ರಂದು ಆರಂಭವಾಗಿದ್ದು, ಕೊನೆಯ ವಿಚಾರಣೆಯನ್ನು ಅ.6ರಂದು ನಡೆಸಲಾಗುವುದು ಎಂದು ಜಿಲ್ಲಾಧಿಕಾರಿ ಸಿ.ಎನ್. ಶ್ರೀಧರ್ ತಿಳಿಸಿದ್ದಾರೆ.

### ಅರ್ಹ ಫಲಾನುಭವಿಗಳನ್ನು ಗುರುತಿಸಿ ಸೌಲಭ್ಯ ಮುಂದುವರಿಸಲು ಬಿ.ಬಿ. ಆಸೂಟಿ ಸೂಚನೆ

# ಗೃಹಲಕ್ಷ್ಮೀ ಹಣ ಸೋರಿಕೆಗೆ ಕಡಿವಾಣ

**ವಿಜಯಸಾಕ್ಷಿ ಸುದ್ದಿ, ಗದಗ**

ಗೃಹಲಕ್ಷ್ಮೀ ಯೋಜನೆಯಡಿ ಅರ್ಹ ಫಲಾನುಭವಿಗಳಿಗೆ ಸೌಲಭ್ಯ ಮುಂದುವರಿಸಿ, ಅನರ್ಹರ ಹೆಸರಿನಲ್ಲಿ ಸರ್ಕಾರದ ಹಣ ಸೋರಿಕೆಯಾಗದಂತೆ ಕಡಿವಾಣ ಹಾಕಲು ಫಲಾನುಭವಿಗಳ ಮರುಪರಿಶೀಲನೆ ಕಾರ್ಯವನ್ನು ಪಾರದರ್ಶಕವಾಗಿ ನಡೆಸಬೇಕು ಎಂದು ಜಿಲ್ಲಾ ಮಟ್ಟದ ಗ್ಯಾರಂಟಿ ಯೋಜನೆಗಳ ಅನುಷ್ಠಾನ ಪ್ರಾಧಿಕಾರದ ಅಧ್ಯಕ್ಷ ಬಿ.ಬಿ. ಆಸೂಟಿ ಅಧಿಕಾರಿಗಳಿಗೆ ಸೂಚಿಸಿದರು.

ನಗರದ ಜಿಲ್ಲಾ ಪಂಚಾಯತ್ ಸಭಾಂಗಣದಲ್ಲಿ ಜಿಲ್ಲಾಡಳಿತ, ಜಿಲ್ಲಾ ಪಂಚಾಯತ್, ಜಿಲ್ಲಾ ಮಟ್ಟದ ಗ್ಯಾರಂಟಿ ಯೋಜನೆಗಳ ಅನುಷ್ಠಾನ ಪ್ರಾಧಿಕಾರ ಹಾಗೂ ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ ಸಹಯೋಗದಲ್ಲಿ ಸೆ.18ರಂದು ಆಯೋಜಿಸಿದ್ದ ಗೃಹಲಕ್ಷ್ಮೀ ಯೋಜನೆಯ ಮರುಪರಿಶೀಲನಾ ಅರ್ಜಿಗಳ ಕುರಿತು ಜಿಲ್ಲಾ ಮಟ್ಟದ ತರಬೇತುದಾರರ ತರಬೇತಿ ಕಾರ್ಯಕ್ರಮ ಉದ್ಘಾಟಿಸಿ ಅವರು ಮಾತನಾಡಿದರು.

ಗೃಹಲಕ್ಷ್ಮೀ ಯೋಜನೆಯಡಿ ಪ್ರತಿ ತಿಂಗಳು ಫಲಾನುಭವಿಗಳಿಗೆ ನೀಡಲಾಗುತ್ತಿರುವ ₹2,000 ಆರ್ಥಿಕ ನೆರವು ಮಹಿಳೆಯರ ಸ್ವಾವಲಂಬನೆ, ಮಕ್ಕಳ ವಿದ್ಯಾಭ್ಯಾಸ, ಕೃಷಿ ಚಟುವಟಿಕೆ, ಹೈನುಗಾರಿಕೆ, ವೈದ್ಯಕೀಯ ವೆಚ್ಚ ಸೇರಿದಂತೆ ವಿವಿಧ ಅಗತ್ಯಗಳಿಗೆ ಬಳಕೆಯಾಗುತ್ತಿದೆ. ಗದಗ ಜಿಲ್ಲೆಯಲ್ಲಿ ಸುಮಾರು 2.74 ಲಕ್ಷ ಫಲಾನುಭವಿಗಳು ಯೋಜನೆಯ ಸೌಲಭ್ಯ ಪಡೆಯುತ್ತಿದ್ದಾರೆ ಎಂದು ತಿಳಿಸಿದರು.

ಯೋಜನೆ ಜಾರಿಯಾಗಿ ಮೂರು ವರ್ಷಗಳು ಕಳೆದಿರುವ ಹಿನ್ನೆಲೆಯಲ್ಲಿ




ಫಲಾನುಭವಿಗಳ ವಿವರಗಳನ್ನು ಮರುಪ–ರಿಶೀಲಿಸುವ ಅಗತ್ಯವಿದೆ. ಈ ಅವಧಿಯಲ್ಲಿ ಕೆಲವು ಫಲಾನುಭವಿಗಳು ಮೃತಪಟ್ಟಿದ್ದರೂ ಅವರ ಕುಟುಂಬದ ಸದಸ್ಯರು ಯೋಜನೆಯ ಹಣ ಪಡೆಯುತ್ತಿರುವ ಪ್ರಕರಣಗಳು ಗಮನಕ್ಕೆ ಬಂದಿವೆ. ಇಂತಹ ಪ್ರಕರಣಗಳನ್ನು ಪರಿಶೀಲಿಸಿ, ಅರ್ಹತೆ ಹೊಂದಿರುವ ಫಲಾನುಭವಿಗಳಿಗೆ ಮಾತ್ರ ಸೌಲಭ್ಯ ಮುಂದುವರಿಸುವಂತೆ ಕ್ರಮವಹಿಸಬೇಕು ಎಂದರು.

ಬೇರೆ ರಾಜ್ಯದವರು ಸೇರಿದಂತೆ ವಿವಿಧ ಕಾರಣಗಳಿಂದ ಯೋಜನೆಗೆ ಅನರ್ಹರಾಗಿರುವವರು ಸೌಲಭ್ಯ ಪಡೆಯುತ್ತಿರುವ ಪ್ರಕರಣಗಳ ಬಗ್ಗೆಯೂ ಸಮಗ್ರ ಪರಿಶೀಲನೆ ನಡೆಸಬೇಕು. ಸರ್ಕಾರದ ಹಣ ದುರ್ಬಳಕೆಯಾಗದಂತೆ ನಿಯಮಾನುಸಾರ ಕ್ರಮ ಕೈಗೊಳ್ಳಬೇಕು ಎಂದು ಸೂಚಿಸಿದರು.

ಫಲಾನುಭವಿಗಳ ಮನೆಗಳಿಗೆ ಭೇಟಿ ನೀಡಿ ಶಾಂತ ಹಾಗೂ ಸೌಹಾರ್ದಯುತ ರೀತಿಯಲ್ಲಿ ಮಾಹಿತಿ ಸಂಗ್ರಹಿಸಬೇಕು. ಅಗತ್ಯ ದಾಖಲೆಗಳನ್ನು ಪರಿಶೀಲಿಸಿ ಫಲಾನುಭವಿಗಳ ನೈಜ ಸ್ಥಿತಿಗತಿಯನ್ನು ಖಚಿತಪಡಿಸಿಕೊಳ್ಳಬೇಕು. ಈ ವೇಳೆ ಅರ್ಹ ಫಲಾನುಭವಿಗಳಿಗೆ ಯಾವುದೇ ರೀತಿಯ ತೊಂದರೆ ಅಥವಾ ಅನ್ಯಾಯವಾಗದಂತೆ ಅಧಿಕಾ–ರಿಗಳು ಹಾಗೂ ಸಿಬ್ಬಂದಿ ಎಚ್ಚರಿಕೆಯಿಂದ ಕಾರ್ಯನಿರ್ವಹಿಸಬೇಕು ಎಂದರು.

ಜಿಲ್ಲಾಧಿಕಾರಿ ಸಿ.ಎನ್. ಶ್ರೀಧರ್ ಮಾತನಾಡಿ, ಗೃಹಲಕ್ಷ್ಮೀ ಯೋಜನೆಯಡಿ ಅರ್ಹ ಮಹಿಳೆಯರಿಗೆ ದೊರೆಯುತ್ತಿರುವ ಆರ್ಥಿಕ ನೆರವು ಕುಟುಂಬದ ಜೀವನಮಟ್ಟ ಸುಧಾರಣೆಗೆ ಸಹಕಾರಿಯಾಗಿದೆ. ಯೋಜನೆಯ ಉದ್ದೇಶಕ್ಕೆ ಧಕ್ಕೆಯಾಗದಂತೆ ಅರ್ಹ ಫಲಾನುಭವಿಗಳನ್ನು ಗುರುತಿಸಿ, ಅವರಿಗೆ ಸಕಾಲದಲ್ಲಿ ಸೌಲಭ್ಯ ದೊರೆಯುವಂತೆ ಕ್ರಮವಹಿಸಬೇಕು ಎಂದರು.

ಯೋಜನೆಯಡಿ ಅನರ್ಹ ಫಲಾನುಭವಿಗಳಿಗೆ ಸೌಲಭ್ಯ ದೊರೆಯುತ್ತಿರುವುದು ಕಂಡುಬಂದಲ್ಲಿ ಅಂತಹ ಪ್ರಕರಣಗಳನ್ನು ನಿಯಮಾನುಸಾರ ಮರುಪರಿಶೀಲಿಸಿ ಸರಿಪಡಿಸಬೇಕು. ಈ ಪ್ರಕ್ರಿಯೆಯಲ್ಲಿ ಯಾವುದೇ ಅರ್ಹ ಫಲಾನುಭವಿಗೆ ಅನ್ಯಾಯವಾಗದಂತೆ ಅಧಿಕಾರಿಗಳು ಹಾಗೂ ಸಿಬ್ಬಂದಿ ಜವಾಬ್ದಾ–ರಿಯುತವಾಗಿ ಕಾರ್ಯನಿರ್ವಹಿಸಬೇಕು ಎಂದು ಸೂಚಿಸಿದರು.

ಮರುಪರಿಶೀಲನಾ ಅರ್ಜಿಗಳ ಪರಿಶೀಲನೆ ಸಂದರ್ಭದಲ್ಲಿ ಫಲಾನುಭವಿಗಳ ದಾಖಲೆಗಳು ಹಾಗೂ ಅರ್ಹತಾ ಮಾನದಂಡಗಳನ್ನು ಸಮಗ್ರವಾಗಿ ಪರಿಶೀಲಿಸಬೇಕು. ಸಾರ್ವಜನಿಕರಿಗೆ ಅಗತ್ಯ ಮಾಹಿತಿಯನ್ನು ನೀಡಿ, ಅರ್ಜಿಗಳನ್ನು ಪಾರದರ್ಶಕವಾಗಿ ವಿಲೇವಾರಿ ಮಾಡುವ ಮೂಲಕ ಯೋಜನೆಯ ಸದುಪಯೋಗವನ್ನು ಖಚಿತಪಡಿಸಬೇಕು ಎಂದರು.

> ಅರ್ಹ ಪ್ರತಿಯೊಬ್ಬ ಫಲಾನುಭವಿಗೂ ಗೃಹಲಕ್ಷ್ಮೀ ಯೋಜನೆಯ ಪ್ರಯೋಜನ ತಲುಪಿಸುವುದು ಅಧಿಕಾರಿಗಳ ಜವಾಬ್ದಾರಿ. ಮರುಪ-ರಿಶೀಲನೆ ವೇಳೆ ಅರ್ಹರಿಗೆ ಯಾವುದೇ ಅನ್ಯಾಯವಾಗದಂತೆ ಎಚ್ಚರಿಕೆ ವಹಿಸಬೇಕು.
>
> – ಸಿ.ಎನ್. ಶ್ರೀಧರ್, ಜಿಲ್ಲಾಧಿಕಾರಿ

> ಮರುಪರಿಶೀಲನೆ ಕಾರ್ಯವನ್ನು ಜವಾಬ್ದಾರಿಯುತವಾಗಿ ಮತ್ತು ಪಾರದರ್ಶಕವಾಗಿ ನಡೆಸಬೇಕು. ಅರ್ಹ ಫಲಾನುಭವಿಗಳಿಗೆ ಸೌಲಭ್ಯ ತಪ್ಪಬಾರದು; ಅನರ್ಹರಿಗೆ ಸರ್ಕಾರದ ಹಣ ಸೋರಿಕೆಯಾಗದಂತೆ ನಿಯಮಾನುಸಾರ ಕ್ರಮ ಕೈಗೊಳ್ಳಬೇಕು.
>
> – ಬಿ.ಬಿ. ಆಸೂಟಿ

ಕಾರ್ಯಕ್ರಮದಲ್ಲಿ ಜಿಲ್ಲಾ ಪಂಚಾಯತ್ ಉಪಕಾರ್ಯದರ್ಶಿ ಸಿ.ಆರ್. ಮುಂಡರಗಿ, ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆಯ ಉಪನಿರ್ದೇಶಕಿ ರಾಧಾ ಮಣ್ಣೂರು, ಜಿಲ್ಲಾ ಗ್ಯಾರಂಟಿ ಯೋಜನೆಗಳ ಅನುಷ್ಠಾನ ಪ್ರಾಧಿಕಾರದ ಉಪಾಧ್ಯಕ್ಷ ಪಿ.ಬಿ. ಅಳಗವಾಡಿ, ತಾಲೂಕು ಗ್ಯಾರಂಟಿ ಯೋಜನೆಗಳ ಅನುಷ್ಠಾನ ಪ್ರಾಧಿಕಾರದ ಅಧ್ಯಕ್ಷರಾದ ಅಶೋಕ್ ಮಂದಾಲಿ, ದೇವಪ್ಪ ಮುರನಾಳ, ನಾಗರಾಜ ಮಡಿವಾಳರ ಸೇರಿದಂತೆ ವಿವಿಧ ಇಲಾಖೆಗಳ ಅಧಿಕಾರಿಗಳು ಉಪಸ್ಥಿತರಿದ್ದರು. ನೇತ್ರಾ ಹರ್ತಿ ನಿರೂಪಿಸಿ ವಂದಿಸಿದರು.

### ಒಂದೇ ಜಲ್ಲಿಗೆ ಎರಡು ಹಂತದ ರಾಯಲ್ಟಿ; ಸ್ಪಷ್ಟ ನೀತಿಗೆ ಆಗ್ರಹಿಸಿ ಅನಿರ್ದಿಷ್ಟಾವಧಿ ಧರಣಿ

## ರಾಜಧನ ವಸೂಲಿ ವಿರೋಧಿಸಿ ಸ್ಟೋನ್ ಕ್ರಷರ್ ಬಂದ್

**ವಿಜಯಸಾಕ್ಷಿ ಸುದ್ದಿ, ಗದಗ**

ಒಂದೇ ನಿರ್ಮಾಣ ಸಾಮಗ್ರಿಗೆ ಎರಡು ಹಂತದಲ್ಲಿ ರಾಜಧನ (ರಾಯಲ್ಟಿ) ಸಂಗ್ರಹಿಸುತ್ತಿರುವುದನ್ನು ವಿರೋಧಿಸಿ ಗದಗ ಕ್ವಾರಿ ಮತ್ತು ಸ್ಟೋನ್ ಕ್ರಷರ್ ಮಾಲೀಕರ ಸಂಘದ ನೇತೃತ್ವದಲ್ಲಿ ಜಿಲ್ಲೆಯ ಸ್ಟೋನ್ ಕ್ರಷರ್‌ಗಳನ್ನು ಬಂದ್ ಮಾಡಿ ಶುಕ್ರವಾರದಿಂದ ಅನಿರ್ದಿಷ್ಟಾವಧಿ ಧರಣಿ ಆರಂಭಿಸಲಾಗಿದೆ ಎಂದು ಸಂಘದ ಅಧ್ಯಕ್ಷ ರಾಮಣ್ಣ ಕಮಾಜಿ ತಿಳಿಸಿದರು.

ನಗರದ ಪತ್ರಿಕಾ ಭವನದಲ್ಲಿ ಶುಕ್ರವಾರ ನಡೆದ ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಅವರು, ಸರ್ಕಾರದ ಇಮ್ಮಡಿ ರಾಜಧನ ಸಂಗ್ರಹಣಾ ವ್ಯವಸ್ಥೆಯನ್ನು ತಕ್ಷಣ ರದ್ದುಪಡಿಸಿ, ಒಂದೇ ಹಂತದಲ್ಲಿ ರಾಜಧನ ಸಂಗ್ರಹಿಸುವ ವ್ಯವಸ್ಥೆ ಜಾರಿಗೆ ತರಬೇಕು ಎಂದು ಆಗ್ರಹಿಸಿದರು.

ಕಲ್ಲುಗಣಿ ಹಾಗೂ ಕ್ರಷರ್ ಮಾಲೀಕರು ಈಗಾಗಲೇ ರಾಜಧನ ಪಾವತಿಸುತ್ತಿದ್ದಾರೆ. ಆದರೆ ಅದೇ ಜಲ್ಲಿಯನ್ನು ಖರೀದಿಸುವ ಅಂತಿಮ ಬಳಕೆದಾರರು ಅಥವಾ ಸರ್ಕಾರಿ ಇಲಾಖೆಗಳ ಮೂಲಕವೂ ರಾಜಧನ ಕಡಿತ ಮಾಡಲಾಗುತ್ತಿದೆ. ಒಂದೇ ನಿರ್ಮಾಣ ಸಾಮಗ್ರಿಗೆ ಎರಡು ಬಾರಿ ರಾಜಧನ ವಸೂಲಿ ಮಾಡುವುದು ಅನ್ಯಾಯವಾಗಿದೆ ಎಂದು ರಾಮಣ್ಣ ಕಮಾಜಿ ಆರೋಪಿಸಿದರು.

ಕ್ರಷರ್ ಮಾಲೀಕರಿಂದ ಅಥವಾ ಜಲ್ಲಿ ಖರೀದಿಸುವ ಅಂತಿಮ ಬಳಕೆದಾರರಿಂದ ಯಾವುದೇ ಒಂದು ಹಂತದಲ್ಲಿ ಮಾತ್ರ ರಾಜಧನ ಸಂಗ್ರಹಿಸಬೇಕು. ಎರಡು ಹಂತದಲ್ಲಿ ರಾಜಧನ ವಸೂಲಿ ಮಾಡುವ ಪದ್ಧತಿ ಕೈಬಿಟ್ಟು ಸ್ಪಷ್ಟ ನಿಯಮಾವಳಿ ರೂಪಿಸಬೇಕು ಎಂದು ಒತ್ತಾಯಿಸಿದರು.

ಜಿಲ್ಲೆಯಲ್ಲಿ ಉತ್ಪಾದನೆಯಾಗುವ




> ಒಂದೇ ನಿರ್ಮಾಣ ಸಾಮಗ್ರಿಗೆ ಎರಡು ಹಂತದಲ್ಲಿ ರಾಜಧನ ವಸೂಲಿ ಮಾಡುವ ವ್ಯವಸ್ಥೆಯನ್ನು ತಕ್ಷಣ ಕೈಬಿಟ್ಟು, ಒಂದೇ ಹಂತದಲ್ಲಿ ರಾಜಧನ ಸಂಗ್ರಹಿಸುವ ಸ್ಪಷ್ಟ ನಿಯಮ ರೂಪಿಸಬೇಕು. ಸಮಸ್ಯೆ ಬಗೆಹರಿಯುವವರೆಗೆ ಹೋರಾಟ ಮುಂದುವರಿಯಲಿದೆ.
>
> – ರಾಮಣ್ಣ ಕಮಾಜಿ, ಅಧ್ಯಕ್ಷರು, ಗದಗ ಕ್ವಾರಿ ಮತ್ತು ಸ್ಟೋನ್ ಕ್ರಷರ್ ಮಾಲೀಕರ ಸಂಘ

ಜಲ್ಲಿಯಲ್ಲಿ ಸುಮಾರು 80ರಷ್ಟು ಮಾಲು ಸರ್ಕಾರಿ ಕಾಮಗಾರಿಗಳಿಗೆ ಪೂರೈಕೆಯಾಗುತ್ತದೆ. ಕ್ರಷರ್ ಮಾಲೀಕರು ಪರವಾನಗಿ ಪಡೆದು ಸರ್ಕಾರಕ್ಕೆ ರಾಜಧನ ಪಾವತಿಸಿದ ಬಳಿಕವೂ ಗ್ರಾಹಕರಿಂದ ಮತ್ತೊಮ್ಮೆ ರಾಜಧನ ಸಂಗ್ರಹಿಸುವ ವ್ಯವಸ್ಥೆಯಿಂದ ಉದ್ಯಮಕ್ಕೆ ತೀವ್ರ ತೊಂದರೆಯಾಗಿದೆ. ಈ ಕುರಿತು ಈ ಹಿಂದೆಯೂ ಸರ್ಕಾರಕ್ಕೆ ಮನವಿ ಸಲ್ಲಿಸಿದ್ದರೂ ಸಮಸ್ಯೆ ಬಗೆಹರಿಯದ ಹಿನ್ನೆಲೆಯಲ್ಲಿ ಅನಿರ್ದಿಷ್ಟಾವಧಿ ಧರಣಿ ಆರಂಭಿಸಲಾಗಿದೆ ಎಂದರು.

ಸಂಘದ ಮುಖಂಡ ವಿಜಯಕುಮಾರ್ ಗಡ್ಡಿ ಮಾತನಾಡಿ, ಸರ್ಕಾರಿ ಕಾಮಗಾ–ರಿಗಳಿಗೆ ಪೂರೈಸುವ ಜಲ್ಲಿಗೂ ರಾಜಧನ ಕಡಿತ ಮಾಡಲಾಗುತ್ತಿದೆ. ಹೀಗಾಗಿ ಒಂದೇ ಜಲ್ಲಿಗೆ ಕ್ರಷರ್ ಮಾಲೀಕರ ಹಂತದಲ್ಲಿಯೂ ಹಾಗೂ ಸರ್ಕಾರಿ ಇಲಾಖೆಗಳ ಹಂತದಲ್ಲಿಯೂ ರಾಜಧನ ಪಾವತಿಯಾಗುವ ಪರಿಸ್ಥಿತಿ ನಿರ್ಮಾಣವಾಗಿದೆ ಎಂದು ಹೇಳಿದರು.

ರಾಜ್ಯದಲ್ಲಿ ಹೆಚ್ಚುವರಿಯಾಗಿ ಸುಮಾರು ₹900 ಕೋಟಿ ರಾಜಧನ ಸಂಗ್ರಹವಾಗಿದೆ ಎನ್ನಲಾಗುತ್ತಿದ್ದು, ಈ ಕುರಿತು ಸರ್ಕಾರ ಯಾವುದೇ ಸ್ಪಷ್ಟ ಮಾಹಿತಿ ನೀಡುತ್ತಿಲ್ಲ. ಇಲಾಖೆಯ ಅಧಿಕಾರಿಗಳು ಸರ್ವೆ ನಡೆಸಿ ನಿಗದಿತ ಪ್ರಮಾಣಕ್ಕಿಂತ ಹೆಚ್ಚುವರಿ ಜಲ್ಲಿ ತೆಗೆದಿರುವುದಾಗಿ ಹೇಳುತ್ತಿದ್ದಾರೆ. ಹೆಚ್ಚುವರಿ ಜಲ್ಲಿ ತೆಗೆದಿದ್ದರೂ ಅದನ್ನು ಸ್ಥಳೀಯವಾಗಿಯೇ ಕಾಮಗಾರಿಗಳಿಗೆ ಪೂರೈಸಲಾಗಿದೆ. ಹೀಗಿರುವಾಗ ಕ್ರಷರ್ ಮಾಲೀಕರಿಗೆ ಕಿರಿಕಿರಿ ಉಂಟುಮಾಡುವ ರೀತಿಯಲ್ಲಿ ಕ್ರಮ ಕೈಗೊಳ್ಳುವುದು ಸರಿಯಲ್ಲ ಎಂದು ಅವರು ಹೇಳಿದರು.

ಸ್ಟೋನ್ ಕ್ರಷರ್‌ಗಳ ಬಂದ್‌ನಿಂದ ಗ್ರಾಹಕರು, ಕಾರ್ಮಿಕರು ಹಾಗೂ ವಾಹನ ಮಾಲೀಕರಿಗೂ ತೊಂದರೆಯಾಗಲಿದೆ. ಆದರೂ ಸರ್ಕಾರ ಸ್ಪಷ್ಟ ನೀತಿ ರೂಪಿಸುವವರೆಗೆ ತಮ್ಮ ಹೋರಾಟಕ್ಕೆ ಎಲ್ಲರೂ ಸಹಕಾರ ನೀಡಬೇಕು ಎಂದು ಸಂಘದ ಮುಖಂಡರು ಮನವಿ ಮಾಡಿದರು. ಸುದ್ದಿಗೋಷ್ಠಿಯಲ್ಲಿ ಎಂ.ಎಂ. ದಾಯಮ್ಮನವರ, ಸುರೇಂದ್ರ ರೆಡ್ಡಿ, ಅಶೋಕ ಸೊನಗೊಜಿ, ಗೌಸಸಾಬ ದೋಟಿಹಾಳ, ನಾಗರಾಜ ನೀಲಗುಂದ, ಗಣೇಶ ಸೇರಿದಂತೆ ಸಂಘದ ಮುಖಂಡರು ಉಪಸ್ಥಿತರಿದ್ದರು.

## ಸೆ.19–20ರಂದು ಎಸ್‌ಐಆರ್ ವಿಶೇಷ ಅಭಿಯಾನ

**ವಿಜಯಸಾಕ್ಷಿ ಸುದ್ದಿ, ಗದಗ**

ಮತದಾರರ ನೋಂದಣಿ, ಆಕ್ಷೇಪಣೆ ಹಾಗೂ ತಿದ್ದುಪಡಿ ಪ್ರಕ್ರಿಯೆಯನ್ನು ನಿಯಮಾನುಸಾರ ಮತ್ತು ಪಾರದರ್ಶಕವಾಗಿ ನಡೆಸಿ, ಯಾವುದೇ ಅರ್ಹ ಮತದಾರರು ಮತದಾರರ ಪಟ್ಟಿಯಿಂದ ಹೊರಗುಳಿಯದಂತೆ ಅಗತ್ಯ ಕ್ರಮ ಕೈಗೊಳ್ಳಬೇಕು ಎಂದು ಜಿಲ್ಲಾಧಿಕಾರಿ ಸಿ.ಎನ್. ಶ್ರೀಧರ ಅಧಿಕಾರಿಗಳಿಗೆ ಸೂಚಿಸಿದರು.

ಜಿಲ್ಲೆಯಲ್ಲಿ ಸೆಪ್ಟೆಂಬರ್ 19 ಮತ್ತು 20ರಂದು ನಡೆಯಲಿರುವ ಖುಖು ಮತದಾರರ ನೋಂದಣಿ ಹಾಗೂ ಆಕ್ಷೇಪಣೆ ಸಲ್ಲಿಕೆಯ ವಿಶೇಷ ಅಭಿಯಾನದ ಹಿನ್ನೆಲೆಯಲ್ಲಿ ಜಿಲ್ಲಾಡಳಿತ ಭವನದಲ್ಲಿ ಶುಕ್ರವಾರ ನಡೆದ ರಾಜಕೀಯ ಪಕ್ಷಗಳ ಪ್ರತಿನಿಧಿಗಳ ಪೂರ್ವಭಾವಿ ಸಭೆಯ ಅಧ್ಯಕ್ಷತೆ ವಹಿಸಿ ಅವರು ಮಾತನಾಡಿದರು.

ವಿಶೇಷ ಅಭಿಯಾನದ ಸಂದರ್ಭದಲ್ಲಿ ಸಾರ್ವಜನಿಕರಿಗೆ ಅಗತ್ಯ ಮಾಹಿತಿ ಹಾಗೂ ಸೂಕ್ತ ಮಾರ್ಗದರ್ಶನ ಒದಗಿಸಬೇಕು.

ಅರ್ಹ ಮತದಾರರ ಹೆಸರುಗಳು ಪಟ್ಟಿಗೆ ಸೇರ್ಪಡೆಯಾಗುವಂತೆ ಹಾಗೂ ಮತದಾರರ ಪಟ್ಟಿಗೆ ಸಂಬಂಧಿಸಿದ ಆಕ್ಷೇಪಣೆಗಳು ಮತ್ತು ಅಗತ್ಯ ತಿದ್ದುಪಡಿಗಳನ್ನು ನಿಯಮಾನುಸಾರ ಸ್ವೀಕರಿಸಬೇಕು



ಎಂದು ಸೂಚಿಸಿದರು.

ಎಸ್‌ಐಆರ್ ವಿಶೇಷ ಅಭಿಯಾನದ ಕುರಿತು ರಾಜ–ಕೀಯ ಪಕ್ಷಗಳ ಪ್ರತಿನಿಧಿಗಳಿಗೆ ಅಗತ್ಯ ಮಾಹಿತಿ ನೀಡಲಾಯಿತು. ಅಭಿಯಾನದ ಉದ್ದೇಶವನ್ನು ಸಾರ್ವಜನಿಕರಿಗೆ ಪರಿಣಾಮಕಾರಿಯಾಗಿ ತಲುಪಿಸಿ, ಹೆಚ್ಚಿನ ಸಂಖ್ಯೆಯಲ್ಲಿ ಅರ್ಹ ಮತದಾರರು ಇದರ ಸದುಪಯೋಗ ಪಡೆದುಕೊಳ್ಳುವಂತೆ ಎಲ್ಲರೂ ಸಹಕ–ರಿಸಬೇಕು ಎಂದು ಜಿಲ್ಲಾಧಿಕಾರಿ ಮನವಿ ಮಾಡಿದರು.

ಸಭೆಯಲ್ಲಿ ಅಪರ ಜಿಲ್ಲಾಧಿಕಾರಿ ಡಾ. ದುರಗೇಶ್ ಕೆ.ಆರ್., ಉಪವಿಭಾಗಾಧಿಕಾರಿ ಗಂಗಪ್ಪ ಎಂ., ಸಮಾಜ ಕಲ್ಯಾಣ ಇಲಾಖೆ ಉಪನಿರ್ದೇಶಕಿ ಡಾ. ನಂದಾ ಹಣ್ಣಬರಟ್ಟಿ ಸೇರಿದಂತೆ ವಿವಿಧ ಇಲಾಖೆಗಳ ಅಧಿಕಾರಿಗಳು ಹಾಗೂ ವಿವಿಧ ರಾಜಕೀಯ ಪಕ್ಷಗಳ ಪ್ರತಿನಿಧಿಗಳು ಉಪಸ್ಥಿತರಿದ್ದರು.

## ಗದಗ ತಾಲೂಕನ್ನು ಬರಪಟ್ಟಿಗೆ ಸೇರಿಸಿ: ಗೋವಿಂದಗೌಡ್ರ

**ವಿಜಯಸಾಕ್ಷಿ ಸುದ್ದಿ, ಗದಗ**

ಗದಗ ತಾಲೂಕನ್ನು ಬರಪೀಡಿತ ಪಟ್ಟಿಯಿಂದ ಹೊರಗಿಟ್ಟಿರುವ ರಾಜ್ಯ ಸರ್ಕಾರದ ಕ್ರಮವನ್ನು ಜೆಡಿಎಸ್ ರಾಜ್ಯ ವಕ್ತಾರ ವೆಂಕನಗೌಡ ಆರ್. ಗೋವಿಂದಗೌಡ್ರ ಖಂಡಿಸಿದ್ದಾರೆ. ಗದಗಕ್ಕೆ ಭೇಟಿ ನೀಡಿದ್ದ ಮುಖ್ಯಮಂತ್ರಿ ಡಿ.ಕೆ. ಶಿವಕುಮಾರ್ ಅವರು ತಾಲೂಕಿನಲ್ಲಿ ಬರ ಪರಿಸ್ಥಿತಿ ಕುರಿತು ಪರಿಶೀಲನೆ ನಡೆಸಿ, ಬರಪೀಡಿತ ಪ್ರದೇಶಗಳ ಘೋಷಣೆ ಸಂಬಂಧ ಕ್ರಮ ಕೈಗೊಳ್ಳುವುದಾಗಿ ರೈತರಿಗೆ ಭರವಸೆ ನೀಡಿದ್ದರು. ಆದರೆ, ಗದಗ ತಾಲೂಕನ್ನು ಬರಪೀಡಿತ ಪಟ್ಟಿಯಲ್ಲಿ ಸೇರಿಸದಿರುವುದು ರೈತರಲ್ಲಿ ಅಸಮಾಧಾನ ಮೂಡಿಸಿದೆ ಎಂದು ಅವರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

ಗದಗ ತಾಲೂಕಿನಲ್ಲಿ ಮಳೆ ಕೊರತೆ ಹಾಗೂ ಬೆಳೆ ಪರಿಸ್ಥಿತಿ ಗಂಭೀರವಾಗಿದ್ದರೂ ತಾಲೂಕನ್ನು ಪಟ್ಟಿಯಿಂದ ಹೊರಗಿಟ್ಟಿರುವುದಕ್ಕೆ ಸರ್ಕಾರ ಯಾವ ಮಾನದಂಡ ಅನುಸರಿಸಿದೆ ಎಂಬುದನ್ನು ರೈತ–ರಿಗೆ ಸ್ಪಷ್ಟಪಡಿಸಬೇಕು ಎಂದು ಗೋವಿಂದಗೌಡ್ರ ಆಗ್ರಹಿಸಿದ್ದಾರೆ. ಬರಪೀಡಿತ ತಾಲೂಕುಗಳ ಘೋಷಣೆ ವೈಜ್ಞಾನಿಕ ಹಾಗೂ ತಾಂತ್ರಿಕ ವರದಿಗಳ ಆಧಾರದಲ್ಲಿ ಹಂತ ಹಂತವಾಗಿ ನಡೆಯಲಿದೆ ಎಂದು ಮುಖ್ಯಮಂತ್ರಿ ಡಿ.ಕೆ. ಶಿವಕುಮಾರ್ ಸೆ.1ರಂದು ಗದಗದಲ್ಲಿ ತಿಳಿಸಿದ್ದರು.

ಗದಗ ತಾಲೂಕನ್ನು ಬರಪೀಡಿತ ಪ್ರದೇಶವೆಂದು ಘೋಷಿಸಲು ಸರ್ಕಾರದ ಮೇಲೆ ಒತ್ತಡ ತರುವಲ್ಲಿ ಸ್ಥಳೀಯ ಜನಪ್ರತಿನಿಧಿಗಳು ವಿಫಲರಾಗಿದ್ದಾರೆ ಎಂದು ಗೋವಿಂದಗೌಡ್ರ ಆರೋಪಿಸಿದ್ದಾರೆ. ಗದಗ ಮತಕ್ಷೇತ್ರದ ಶಾಸಕ ಎಚ್.ಕೆ. ಪಾಟೀಲರು ರೈತರ ಸಮಸ್ಯೆಯನ್ನು ಸರ್ಕಾರದ ಗಮನಕ್ಕೆ ತಂದು ಪರಿಹಾರ ಕಲ್ಪಿಸಲು ಮುಂದಾಗಬೇಕು ಎಂದು ಒತ್ತಾಯಿಸಿದ್ದಾರೆ.

## ಸೆ.20ರಂದು ಬಸವ ಭವನ ಲೋಕಾರ್ಪಣೆ

**ವಿಜಯಸಾಕ್ಷಿ ಸುದ್ದಿ, ಗದಗ**

ಬಸವದಳ ಗದಗ–ಬೆಟಗೇರಿ ವತಿಯಿಂದ ನಿರ್ಮಿಸಿರುವ ಬಸವ ಸಮುದಾಯ ಭವನದ ಲೋಕಾರ್ಪಣೆ ಕಾರ್ಯಕ್ರಮ ಸೆ.20ರಂದು ಕಳಸಾಪುರ ರಸ್ತೆಯ ಶಿವಾನಂದ ನಗರದ ಬಸವ ಭವನದಲ್ಲಿ ನಡೆಯಲಿದೆ ಎಂದು ಬಸವದಳದ ಅಧ್ಯಕ್ಷ ವಿ.ಕೆ. ಕರಿಗೌಡ್ರ ತಿಳಿಸಿದರು.

ನಗರದ ಪತ್ರಿಕಾ ಭವನದಲ್ಲಿ ಸುದ್ದಿಗೋಷ್ಠಿಯಲ್ಲಿ ಮಾತನಾಡಿದರುಮುಖ್ಯ ಅತಿಥಿಗಳಾಗಿ ಸಂಸದ ಬಸವರಾಜ ಬೊಮ್ಮಾಯಿ, ಶಾಸಕ ಡಾ. ಎಚ್.ಕೆ. ಪಾಟೀಲ, ವಿಧಾನ ಪರಿಷತ್ ಸದಸ್ಯ ಎಸ್.ವಿ. ಸಂಕನೂರ, ಮಾಜಿ ಶಾಸಕ ಡಿ.ಆರ್. ಪಾಟೀಲ ಆಗಮಿಸಲಿದ್ದಾರೆ. ಎಸ್.ಎಸ್. ಹರ್ಲಾಪೂರ ಉಪನ್ಯಾಸ ನೀಡಲಿದ್ದು, ಚಂದ್ರಶೇಖರ



ತಡಸದ, ವಿದ್ಯಾವತಿ ಎ. ಗಡಗಿ, ಬಿ.ಬಿ. ಅಸೂಟಿ ಅತಿಥಿಗಳಾಗಿ ಪಾಲ್ಗೊಳ್ಳಲಿದ್ದಾರೆ ಎಂದರು.

ಸುದ್ದಿಗೋಷ್ಠಿಯಲ್ಲಿ ಎಂ.ಬಿ. ಲಿಂಗದಾಳ, ಪ್ರಕಾಶ ಅಸೂಟಿ, ಎಸ್.ಎ. ಮುಗದಣ್ಣನವರ, ಗೌರಮ್ಮ ಬಡಿಗಣ್ಣವರ, ಪದ್ಮಾವತಿ ಗಂಜಿಗಿ, ರತ್ನಕ್ಕ ಅಸುಂಡಿ, ನಾಗಭೂಷಣ ಬಡಿಗಣ್ಣನವರ, ಲೀಲಾವತಿ, ಕಾವೇರಿ ಗೋಡಿ, ಗಂಗಮ್ಮ ಹೂಗಾರ ಸೇರಿದಂತೆ ಹಲವರು ಉಪಸ್ಥಿತರಿದ್ದರು.

## 20ರಂದು ರಾಜ್ಯಮಟ್ಟದ ಶಿಕ್ಷಕರ ಸಮ್ಮೇಳನ

**ವಿಜಯಸಾಕ್ಷಿ ಸುದ್ದಿ, ಗದಗ**

ಕಪ್ಪತ್ತಗಿರಿ ಫೌಂಡೇಶನ್ ಕಳಸಾಪುರ–ಗದಗ ವತಿಯಿಂದ ಸೆ.20ರಂದು ಬೆಳಗ್ಗೆ 10 ಗಂಟೆಗೆ ವಿದ್ಯಾದಾನ ಶಿಕ್ಷಣ ಸಂಸ್ಥೆಯಲ್ಲಿ ಶಿಕ್ಷಕರ ದಿನಾಚರಣೆ, ರಾಜ್ಯಮಟ್ಟದ ಶಿಕ್ಷಕರ ಸಮ್ಮೇಳನ, ವಿಚಾರ ಸಂಕಿರಣ, ಪ್ರಶಸ್ತಿ ಪ್ರದಾನ ಹಾಗೂ ಪುಸ್ತಕ ಬಿಡುಗಡೆ ಕಾರ್ಯಕ್ರಮ ಹಮ್ಮಿಕೊಳ್ಳಲಾಗಿದೆ ಎಂದು ಫೌಂಡೇಶನ್ ಅಧ್ಯಕ್ಷೆ ಚಂದ್ರಕಲಾ ಇಟಗಿಮಠ ತಿಳಿಸಿದರು.

ಶುಕ್ರವಾರ ನಗರದ ಪತ್ರಿಕಾ ಭವನದಲ್ಲಿ ನಡೆದ ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಅವರು, ಸಮ್ಮೇಳನದ ಸರ್ವಾಧ್ಯಕ್ಷರಾಗಿ ಮಕ್ಕಳ ಸಾಹಿತಿ ಡಾ. ನಿಂಗು ಸೊಲಗಿ ಆಯ್ಕೆಯಾಗಿದ್ದಾರೆ. ಓಂಕಾರೇಶ್ವರ ಮಠದ ಫಕೀರೇಶ್ವರ



ಶಿವಾಚಾರ್ಯ ಸ್ವಾಮೀಜಿ ಸಾನ್ನಿಧ್ಯ ವಹಿಸಲಿದ್ದು, ಬಾಗಲಕೋಟೆ ವಿಶ್ವವಿದ್ಯಾಲಯದ ಕುಲಸಚಿವ ಸೋಮಲಿಂಗ ಗೆಣ್ಣೂರು ಕಾರ್ಯಕ್ರಮ ಉದ್ಘಾಟಿಸುವರು ಎಂದರು. ಸುದ್ದಿಗೋಷ್ಠಿಯಲ್ಲಿ ನಿರ್ಮಲಾ ಪಾಟೀಲ, ಮಲ್ಲಿಕಾರ್ಜುನ ಖಂಡಮ್ಮನವರ, ಸಿ.ವಿ. ಪಲ್ಲೇದ, ಶಾಂತಾ ಅಂಗಡಿ, ಕಾವೇರಿ ಸೇರಿದಂತೆ ಇತರರು ಉಪಸ್ಥಿತರಿದ್ದರು.

## ಸಾರಿಗೆ ಸೇವೆಗೆ ಡಿಜಿಟಲ್ ಸ್ಪರ್ಶ

# ಕೌಂಟರ್‌ನಿಂದ ಮೊಬೈಲ್‌ಗೆ

ಟಿಕೆಟ್ ಕಾಯ್ದಿರಿಸುವುದರಿಂದ ಹಿಡಿದು ರದ್ದುಗೊಳಿಸುವವರೆಗೆ ಹಲವು ಸಾರಿಗೆ ಸೇವೆಗಳು ಇದೀಗ ಡಿಜಿಟಲ್ ವೇದಿಕೆಗೆ ಬರುತ್ತಿವೆ. ಅದರಲ್ಲೂ ವಾಟ್ಸ್ಯಾಪ್‌ನಲ್ಲೇ ಬಸ್ ಟಿಕೆಟ್ ಕಾಯ್ದಿರಿಸುವ ಸೌಲಭ್ಯದಿಂದ ಕೆಎಸ್‌ಆರ್‌ಟಿಸಿ ಸೇವೆ ಪ್ರಯಾಣಿಕರ ಕೈಬೆರಳ ತುದಿಗೆ ತಲುಪಿದೆ. ಕೌಂಟರ್‌ನಲ್ಲಿ ಸರತಿ ಸಾಲಿನಲ್ಲಿ ನಿಲ್ಲುವ ಬದಲು ಮೊಬೈಲ್‌ನಲ್ಲೇ ಟಿಕೆಟ್ ಬುಕ್, ಪಾವತಿ, ಇ-ಟಿಕೆಟ್ ಪಡೆಯುವುದು ಹಾಗೂ ಅಗತ್ಯವಿದ್ದರೆ ರದ್ದುಗೊಳಿಸುವ ಅವಕಾಶ ಕಲ್ಪಿಸಲಾಗಿದೆ.




### ಒಂದೇ ವೇದಿಕೆಯಲ್ಲಿ ನಾಲ್ಕು ಸಂಸ್ಥೆಗಳು

ರಾಜ್ಯದ ಸಾರ್ವಜನಿಕ ಸಾರಿಗೆ ವ್ಯವಸ್ಥೆಯನ್ನು ಸಮಗ್ರಗೊಳಿಸುವ ಉದ್ದೇಶದಿಂದ 'ಒಂದು ಕರ್ನಾಟಕ ಮೊಬಿಲಿಟಿ ಆಪ್' ಅಭಿವೃದ್ಧಿಪಡಿಸಲಾಗಿದೆ. ಕೆಎಸ್‌ಆರ್‌ಟಿಸಿ, ವಾಯವ್ಯ ಕರ್ನಾಟಕ ರಸ್ತೆ ಸಾರಿಗೆ ಸಂಸ್ಥೆ (ಎನ್‌ಡಬ್ಲ್ಯೂಕೆಆರ್‌ಟಿಸಿ), ಕಲ್ಯಾಣ ಕರ್ನಾಟಕ ರಸ್ತೆ ಸಾರಿಗೆ ನಿಗಮ (ಕೆಕೆಆರ್‌ಟಿಸಿ) ಹಾಗೂ ಬೆಂಗಳೂರು ಮಹಾನಗರ ಸಾರಿಗೆ ಸಂಸ್ಥೆ (ಬಿಎಂಟಿಸಿ)ಗಳನ್ನು ಒಂದೇ ವೇದಿಕೆಯಲ್ಲಿ ಒಗ್ಗೂಡಿಸಲಾಗಿದೆ.

ಸೆ.10ರಂದು ವಿಧಾನಸೌಧದಲ್ಲಿ ನಡೆದ ಸರ್ಕಾರದ 100 ದಿನಗಳ ಕಾರ್ಯಕ್ರಮದ ಅಂಗವಾಗಿ ನವೀಕೃತ ಆಪ್ ಹಾಗೂ ವಾಟ್ಸ್ಯಾಪ್ ಟಿಕೆಟ್ ಬುಕ್ಕಿಂಗ್ ಸೌಲಭ್ಯವನ್ನು ಲೋಕಾರ್ಪಣೆಗೊಳಿಸಲಾಯಿತು.

### ವಾಟ್ಸ್ಯಾಪ್‌ನಲ್ಲೇ ಟಿಕೆಟ್

ಕೆಎಸ್‌ಆರ್‌ಟಿಸಿಯ AWATAR (Advanced Web and Android Ticketing and Reservation) ವ್ಯವಸ್ಥೆಯ ಮೂಲಕ ಮುಂಗಡ ಟಿಕೆಟ್ ಕಾಯ್ದಿರಿಸಬಹುದು. ಪ್ರಯಾಣದ ವಿವರ, ಬಸ್ ಹಾಗೂ ಆಸನ ಆಯ್ಕೆ ಮಾಡಿಕೊಂಡು ಡಿಜಿಟಲ್ ಪಾವತಿ ಪೂರ್ಣಗೊಳಿಸಿದ ಬಳಿಕ ಇ-ಟಿಕೆಟ್ ವಾಟ್ಸ್ಯಾಪ್ ಹಾಗೂ ಇ-ಮೇಲ್ ಮೂಲಕ ದೊರೆಯುತ್ತದೆ.

ಪ್ರಯಾಣಿಕರು 30 ದಿನಗಳ ಮುಂಚಿತವಾಗಿ ಟಿಕೆಟ್ ಕಾಯ್ದಿರಿಸಬಹುದಾಗಿದೆ. ಯುಪಿಐ, ಕ್ರೆಡಿಟ್ ಕಾರ್ಡ್, ಡೆಬಿಟ್ ಕಾರ್ಡ್ ಹಾಗೂ ವಾಲೆಟ್ ಮೂಲಕ ಪಾವತಿ ಮಾಡುವ ಅವಕಾಶವಿದೆ.

### ರದ್ದತಿಗೂ ಕೌಂಟರ್ ಬೇಕಿಲ್ಲ

ವಾಟ್ಸ್ಯಾಪ್ ಮೂಲಕ ಕಾಯ್ದಿರಿಸಿದ ಟಿಕೆಟ್ ಅನ್ನು ಅದೇ ಸಂಖ್ಯೆಯ ಮೂಲಕ ರದ್ದುಗೊಳಿಸಬಹುದು. 'Ticket Cancellation' ಆಯ್ಕೆ ಮಾಡಿಕೊಂಡು ಕಓಖ ಸಂಖ್ಯೆ, ಮೊಬೈಲ್ ಸಂಖ್ಯೆ ಹಾಗೂ ಖಿಡಿಚಿಟಿಚಿಛಿಣಟಿಂಟಿ ಕಛಿತಿಂಡಿಜ ನಮೂದಿಸಿದರೆ ರದ್ದತಿ ಪ್ರಕ್ರಿಯೆ ಪೂರ್ಣಗೊಳ್ಳುತ್ತದೆ.

### ದೂರುಗಳಿಗೂ ಡಿಜಿಟಲ್ ದಾರಿ

'ಒಂದು ಕರ್ನಾಟಕ ಮೊಬಿಲಿಟಿ ಆಪ್'ನಲ್ಲಿ ನಾಲ್ಕೂ ಸಾರಿಗೆ ಸಂಸ್ಥೆಗಳಿಗೆ ಸಂಬಂಧಿಸಿದ ದೂರುಗಳನ್ನು ದಾಖಲಿಸಬಹುದು. ದೂರು ಯಾವ ಹಂತದಲ್ಲಿದೆ, ಪರಿಹಾರದ ಪ್ರಗತಿ ಏನು ಎಂಬುದನ್ನೂ ಪ್ರಯಾಣಿಕರು ಪರಿಶೀಲಿಸಬಹುದಾಗಿದೆ. ವಾಟ್ಸ್ಯಾಪ್ ಬುಕ್ಕಿಂಗ್‌ಗಳನ್ನು ಪ್ರತ್ಯೇಕವಾಗಿ ಗುರುತಿಸಿ, Mode-wise Booking Report, Trip Sheet ಹಾಗೂ Track Ticket ವರದಿಗಳಲ್ಲಿ ದಾಖಲಿಸುವ ವ್ಯವಸ್ಥೆಯೂ ಇದೆ. ಇದರಿಂದ ಬುಕ್ಕಿಂಗ್ ಹಾಗೂ ಕಾರ್ಯಾಚರಣೆಯ ಮಾಹಿತಿಯನ್ನು ವ್ಯವಸ್ಥಿತವಾಗಿ ನಿರ್ವಹಿಸಲು ನೆರವಾಗಲಿದೆ.

### ಮುಂದಿನ ಹೆಜ್ಜೆ: ಡಿಜಿಟಲ್ ಬಸ್ ಪಾಸ್

ಸಾರ್ವಜನಿಕ ಸಾರಿಗೆಯ ಡಿಜಿಟಲೀಕರಣ ಟಿಕೆಟ್ ಬುಕ್ಕಿಂಗ್‌ಗೆ ಸೀಮಿತವಾಗಿಲ್ಲ. ಮುಂದಿನ ಹಂತದಲ್ಲಿ ಆನ್‌ಲೈನ್ ಬಸ್ ಪಾಸ್ ಬುಕ್ಕಿಂಗ್, ವಿತರಣೆ ಹಾಗೂ ನಿರ್ವಹಣೆಗೆ ಡಿಜಿಟಲ್ ಮಾಸಿಕ ಬಸ್ ಪಾಸ್ ವ್ಯವಸ್ಥೆ ಜಾರಿಗೆ ತರಲು ಉದ್ದೇಶಿಸಲಾಗಿದೆ. QR ಕೋಡ್ ಆಧಾರಿತ ಪರಿಶೀಲನೆಗೂ ಅವಕಾಶ ಕಲ್ಪಿಸುವ ಯೋಜನೆಯಿದೆ.

ಕೌಂಟರ್‌ಗೆ ತೆರಳುವ ಸಮಯ ಉಳಿಸಿ, ಪ್ರಯಾಣವನ್ನು ಮುಂಚಿತವಾಗಿ ಯೋಜಿಸಲು ನೆರವಾಗುವ ಈ ಡಿಜಿಟಲ್ ಸೇವೆಗಳು ಸಾರ್ವಜನಿಕ ಸಾರಿಗೆಯನ್ನು ಮತ್ತಷ್ಟು ಸರಳ, ವೇಗದ ಹಾಗೂ ಪ್ರಯಾಣಿಕ ಸ್ನೇಹಿಯಾಗಿಸುವತ್ತ ಹೆಜ್ಜೆಯಾಗಿದೆ. 'ಪ್ರಯಾಣಿಕರ ಕೈಯಲ್ಲೇ ಸಾರಿಗೆ ಸೇವೆ' ಎಂಬ ಪರಿಕಲ್ಪನೆಯೊಂದಿಗೆ ಕರ್ನಾಟಕದ ಸಾರಿಗೆ ವ್ಯವಸ್ಥೆ ಡಿಜಿಟಲ್ ಪಯಣಕ್ಕೆ ಮತ್ತೊಂದು ಹೆಜ್ಜೆ ಇಟ್ಟಿದೆ.

– ಭಾಗ್ಯ ಎಂ., ಮುಖ್ಯ ವರದಿಗಾರರು,
ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಇಲಾಖೆ,
ಬೆಂಗಳೂರು

## ಜಕ್ಕಲಿ ಗ್ರಾಮದಲ್ಲಿ ಗಣೇಶೋತ್ಸವದ ಸಂಭ್ರಮ

ವಿಜಯಸಾಕ್ಷಿ ಸುದ್ದಿ, ನರೇಗಲ್ಲ

ಜಕ್ಕಲಿ ಗ್ರಾಮದಲ್ಲಿ ಗಣೇಶ ಚತುರ್ಥಿಯ ಅಂಗವಾಗಿ ವಿವಿಧೆಡೆ ಭಕ್ತಿಭಾವದಿಂದ ಗಣೇಶ ಮೂರ್ತಿಗಳನ್ನು ಪ್ರತಿಷ್ಠಾಪಿಸಿ ವಿಶೇಷ ಪೂಜೆ-ಪುನಸ್ಕಾರಗಳನ್ನು ನೆರವೇರಿಸಲಾಯಿತು. ಗ್ರಾಮದ ವಿವಿಧೆಡೆ ಗಣೇಶ ಮೂರ್ತಿಗಳ ಪ್ರತಿಷ್ಠಾಪನೆಯೊಂದಿಗೆ ಜಕ್ಕಲಿಯಲ್ಲಿ ಗಣೇಶೋತ್ಸವದ ಸಂಭ್ರಮ ಮನೆಮಾಡಿದೆ.

ಗ್ರಾಮದ ವಿವಿಧ ಸ್ಥಳಗಳಲ್ಲಿ ಪ್ರತಿಷ್ಠಾಪಿಸಲಾದ ಗಣೇಶ ಮೂರ್ತಿಗಳು...








# ಸಾವಿನಲ್ಲೂ ಸಾರ್ಥಕತೆ ಮೆರೆದ ಸರೋಜಿನಿ ಹುಬ್ಬಳ್ಳಿ

ವಿಜಯಸಾಕ್ಷಿ ಸುದ್ದಿ, ಗದಗ

ಮರಣ ಅನಿವಾರ್ಯವಾದರೂ, ಸಾವಿನ ಬಳಿಕವೂ ಸಮಾಜಕ್ಕೆ ಉಪಯುಕ್ತವಾಗುವ ಮೂಲಕ ಬದುಕನ್ನು ಸಾರ್ಥಕಗೊಳಿಸಬಹುದು ಎಂಬ ಮಾನವೀಯ ಸಂದೇಶವನ್ನು ಗದಗಿನ ಸೋಮೇಶ್ವರ ದೇವಸ್ಥಾನದ ಬಳಿಯ ನಿವಾಸಿ ಶ್ರೀಮತಿ ಸರೋಜಿನಿ ಈರಣ್ಣ ಹುಬ್ಬಳ್ಳಿ (70) ಅವರ ಕುಟುಂಬ ಸಾರಿದೆ.



ಸರೋಜಿನಿ ಹುಬ್ಬಳ್ಳಿ ಅವರು ಗುರುವಾರ ಮುಂಜಾನೆ ನಿಧನರಾದರು. ಅವರಿಗೆ ಓರ್ವ ಪುತ್ರ ಹಾಗೂ ಐವರು ಪುತ್ರಿಯರಿದ್ದಾರೆ. ಕುಟುಂಬದ ಸದಸ್ಯರ ಅಗಲಿಕೆಯ ನೋವಿನ ನಡುವೆಯೂ ಮೃತರ ನೇತ್ರ ಹಾಗೂ ದೇಹದಾನಕ್ಕೆ ಕುಟುಂಬಸ್ಥರು ಸಮ್ಮತಿಸಿದರು.

ಮೃತರ ನೇತ್ರಗಳನ್ನು ಗದಗ ಜಿಲ್ಲಾ ಆಸ್ಪತ್ರೆಯಲ್ಲಿ ದಾನ ಮಾಡಲಾಯಿತು. ದಾನದ ಮೂಲಕ ಅಗತ್ಯವಿರುವವರಿಗೆ ದೃಷ್ಟಿಯ ಬೆಳಕು ದೊರೆಯುವ ಸಾಧ್ಯತೆ ಇದೆ.

ವೈದ್ಯಕೀಯ ವಿದ್ಯಾರ್ಥಿಗಳ ಶರೀರ ಮತ್ತು ಅಂಗರಚನಾ ಶಾಸ್ತ್ರದ ಅಧ್ಯಯನಕ್ಕೆ ಅನುಕೂಲವಾಗುವಂತೆ ಮೃತರ ಪಾರ್ಥಿವ ಶರೀರವನ್ನು ಧಾರವಾಡದ ಎಸ್‌ಡಿಎಂ ವೈದ್ಯಕೀಯ ಮಹಾವಿದ್ಯಾಲಯಕ್ಕೆ ದಾನ ಮಾಡಲಾಯಿತು.

ನೇತ್ರದಾನ ಹಾಗೂ ದೇಹದಾನದ ಮಹತ್ವವನ್ನು ಕುಟುಂಬದವರಿಗೆ ಮನವರಿಕೆ ಮಾಡಿಕೊಟ್ಟು, ಈ ಮಹತ್ವದ ನಿರ್ಧಾರಕ್ಕೆ ಪ್ರೇರೇಪಿಸುವಲ್ಲಿ ಗದಗ-ಬೆಟಗೇರಿ ಲಯನ್ಸ್ ಕ್ಲಬ್ ಪದಾಧಿಕಾರಿಗಳು ಪ್ರಮುಖ ಪಾತ್ರ ವಹಿಸಿದರು. ತಜ್ಞ ವೈದ್ಯರು ನೇತ್ರ ಹಾಗೂ ದೇಹದಾನಕ್ಕೆ ಅಗತ್ಯ ಕ್ರಮಗಳನ್ನು ಕೈಗೊಂಡರು.

ವೈಯಕ್ತಿಕ ದುಃಖದ ನಡುವೆಯೂ ಸಮಾಜದ ಒಳಿತನ್ನು ಗಮನದಲ್ಲಿಟ್ಟುಕೊಂಡು ಕುಟುಂಬವು ಕೈಗೊಂಡ ಈ ನಿರ್ಧಾರ ಮಾನವೀಯತೆ ಹಾಗೂ ದಾನಧರ್ಮಕ್ಕೆ ಮಾದರಿಯಾಗಿದೆ.

> ಒಬ್ಬರ ಸಾವಿನಿಂದ ಮತ್ತೊಬ್ಬರಿಗೆ ದೃಷ್ಟಿ ದೊರೆಯುವುದು, ವೈದ್ಯಕೀಯ ಕ್ಷೇತ್ರದ ಭವಿಷ್ಯದ ವೈದ್ಯರಿಗೆ ಅಧ್ಯಯನದ ಅವಕಾಶ ಸಿಗುವುದು-ಇಂತಹ ದಾನಗಳು ಸಾವಿಗೂ ಸಾರ್ಥಕ ಅರ್ಥ ನೀಡುತ್ತವೆ.
> – ಅಂಗರಾಜ ತೋಟದ, ಕಾರ್ಯದರ್ಶಿ, ಗದಗ-ಬೆಟಗೇರಿ ಲಯನ್ಸ್ ಕ್ಲಬ್

ಈ ಸಂದರ್ಭದಲ್ಲಿ ಕುಟುಂಬದ ಸದಸ್ಯರು, ಲಯನ್ಸ್ ಕ್ಲಬ್ ಅಧ್ಯಕ್ಷ ಪ್ರವೀಣ ವಾರಕರ, ಕಾರ್ಯದರ್ಶಿ ಲಿಂಗರಾಜ ತೋಟದ, ಖಜಾಂಚಿ ರೇಣುಕಪ್ರಸಾದ ಶಿಗ್ಲಿಮಠ, ರಮೇಶ ಶಿಗ್ಲಿ, ಮಂಜುನಾಥ ವೀರಲಿಂಗಯ್ಯನಮಠ, ಯಲ್ಲನಗೌಡ ದೇಸಾಯಿಗೌಡ್ರ, ಅಜ್ಜಣ್ಣ ದೇಸಾಯಿಗೌಡ್ರ, ರವಿ ಅಂಗಡಿ, ಮುತ್ತಣ್ಣ ದೇವಗಣ್ಣವರ ಸೇರಿದಂತೆ ಹಲವರು ಉಪಸ್ಥಿತರಿದ್ದರು.

# ವಿಶ್ವೇಶ್ವರಯ್ಯರ ಆದರ್ಶವೇ ದಾರಿದೀಪ



ವಿಜಯಸಾಕ್ಷಿ ಸುದ್ದಿ, ನರೇಗಲ್ಲ

ಸರ್ ಎಂ. ವಿಶ್ವೇಶ್ವರಯ್ಯ ಅವರ ಶಿಸ್ತು, ಸಮಯಪಾಲನೆ, ಪ್ರಾಮಾಣಿಕತೆ, ಕರ್ತವ್ಯನಿಷ್ಠೆ ಹಾಗೂ ದೂರದೃಷ್ಟಿಯ ಆದರ್ಶಗಳನ್ನು ಯುವಕರು ಬದುಕಿನಲ್ಲಿ ಅಳವಡಿಸಿಕೊಂಡರೆ ಉತ್ತಮ ಭವಿಷ್ಯ ರೂಪಿಸಿಕೊಳ್ಳಬಹುದು ಎಂದು ಶ್ರೀ ಕೊಟ್ಟೂರುಸ್ವಾಮಿ ಅನುದಾನಿತ ಕೈಗಾರಿಕಾ ತರಬೇತಿ ಸಂಸ್ಥೆಯ ಕಿರಿಯ ತರಬೇತಿ ಅಧಿಕಾರಿ ಶ್ರೀಧರ್ ಕಮ್ಮಾರ ಹೇಳಿದರು.

ಇಲ್ಲಿನ ಶ್ರೀ ಕೊಟ್ಟೂರುಸ್ವಾಮಿ ಅನುದಾನಿತ ಕೈಗಾರಿಕಾ ತರಬೇತಿ ಸಂಸ್ಥೆಯಲ್ಲಿ ಸರ್ ಎಂ. ವಿಶ್ವೇಶ್ವರಯ್ಯ ದಿನಾಚರಣೆ ಹಾಗೂ ಪ್ರಥಮ ವರ್ಷದ ತರಬೇತಿದಾರರ ಸ್ವಾಗತ ಸಮಾರಂಭ ನಡೆಯಿತು.

ಕಾರ್ಯಕ್ರಮದಲ್ಲಿ ಮಾತನಾಡಿದ ಶ್ರೀಧರ್ ಕಮ್ಮಾರ, ವಿಶ್ವೇಶ್ವರಯ್ಯ ಅವರ ಜೀವನ, ಸಾಧನೆ ಹಾಗೂ ದೇಶದ ಅಭಿವೃದ್ಧಿಗೆ ಅವರು ನೀಡಿದ ಕೊಡುಗೆಗಳ ಕುರಿತು ತರಬೇತಿದಾರರಿಗೆ ವಿವರಿಸಿದರು. ಕೌಶಲ್ಯ ತರಬೇತಿಯ ಜತೆಗೆ ಶಿಸ್ತು ಮತ್ತು ಕರ್ತವ್ಯಪ್ರಜ್ಞೆ ಬೆಳೆಸಿಕೊಳ್ಳಬೇಕು ಎಂದು ಸಲಹೆ ನೀಡಿದರು.

ಸಂಸ್ಥೆಯ ಪ್ರಾಚಾರ್ಯ ಬಸವರಾಜ ಜೋಳದ ಮಾತನಾಡಿ, ಲಿಂ. ಡಾ. ಅಭಿನವ ಅನ್ನದಾನ ಮಹಾಸ್ವಾಮಿಗಳ ಕನಸಿನ ಕೂಸಾಗಿರುವ ಸಂಸ್ಥೆಯಲ್ಲಿ ತರಬೇತಿ ಪಡೆಯುತ್ತಿರುವ ವಿದ್ಯಾರ್ಥಿಗಳು ಗುಣಮಟ್ಟದ ವೃತ್ತಿಪರ ತರಬೇತಿ, ಸೂಕ್ತ ಮಾರ್ಗದರ್ಶನ ಹಾಗೂ ಕೌಶಲ್ಯವನ್ನು ಪಡೆದುಕೊಂಡು ಉತ್ತಮ ಜೀವನ ರೂಪಿಸಿಕೊಳ್ಳಬೇಕು. ಕಲಿತ ಕೌಶಲ್ಯವನ್ನು ವೃತ್ತಿಜೀವನದಲ್ಲಿ ಸಮರ್ಪಕವಾಗಿ ಬಳಸಿಕೊಂಡು ಸಂಸ್ಥೆ ಹಾಗೂ ಪಾಲಕರಿಗೆ ಕೀರ್ತಿ ತರಬೇಕು ಎಂದರು.

ಸಿಬ್ಬಂದಿ ನಾಗರಾಜ ಗುಡದಾರಿ ವೃತ್ತಿಪರ ಶಿಕ್ಷಣದ ಮಹತ್ವ ಹಾಗೂ ತರಬೇತಿ ಅವಧಿಯಲ್ಲಿ ಶಿಸ್ತು, ಆಸಕ್ತಿ ಮತ್ತು ಪರಿಶ್ರಮದಿಂದ ಕಲಿಯುವ ಅಗತ್ಯವನ್ನು ತಿಳಿಸಿದರು.

ಡಿ.ಎ. ಪಾಟೀಲ, ಇಮಾಂಬಿ ಅತ್ತಾರ ಸೇರಿದಂತೆ ಸಂಸ್ಥೆಯ ಸಿಬ್ಬಂದಿ ಉಪಸ್ಥಿತರಿದ್ದರು. ಶ್ರೀಧರ ಕಮ್ಮಾರ ನಿರೂಪಿಸಿದರು. ನಾಗರಾಜ ಗುಡದಾರಿ ವಂದಿಸಿದರು.

# ಎಪಿಎಂಸಿಯಲ್ಲಿ ಅದ್ಧೂರಿ ಗಣೇಶ ಪೂಜೆ

ವಿಜಯಸಾಕ್ಷಿ ಸುದ್ದಿ, ಗದಗ

ನಗರದ ಗಾನಯೋಗಿ ಶ್ರೀ ಪಂಚಾಕ್ಷರ ಗವಾಯಿಗಳ ಕೃಷಿ ಉತ್ಪನ್ನ ಮಾರುಕಟ್ಟೆ ಪ್ರಾಂಗಣದಲ್ಲಿ ಶ್ರೀ ಗಜಾನನೋತ್ಸವ ಟ್ರಸ್ಟ್ ಕಮಿಟಿ ವತಿಯಿಂದ ಪ್ರತಿಷ್ಠಾಪಿಸಲಾಗಿರುವ ಗಣೇಶ ಮೂರ್ತಿಗೆ ನಾಲ್ಕನೇ ದಿನದ ಅಂಗವಾಗಿ ಒಣಮೆಣಸಿನಕಾಯಿ ದಲಾಲ ಹಾಗೂ ಖರೀದಿ ವರ್ತಕರ ವತಿಯಿಂದ ಗುರುವಾರ ಬೆಳಿಗ್ಗೆ ವಿಶೇಷ ಪೂಜೆ ನೆರವೇರಿಸಲಾಯಿತು.



ಒಣಮೆಣಸಿನಕಾಯಿ ದಲಾಲ ವರ್ತಕರ ಸಂಘದ ಅಧ್ಯಕ್ಷ ಪುಂಡಲೀಕಪ್ಪ ಕಂಬಿ, ಕಾರ್ಯದರ್ಶಿ ಅಶೋಕ ಗಡಾದ, ವಿಜಯಕುಮಾರ ದುಂಡಸಿ, ಅನಿತ್ ಲಕ್ಕುಂಡಿ, ಸಂತೋಷ ಬಳ್ಳಾರಿ, ರವಿ ಹಬೀಬ, ಬಸವರಾಜ ಅಣ್ಣಿಗೇರಿ, ವೀರಣ್ಣ ಜುಂಜೂರಿ, ಉಮೇಶಗೌಡ ಪಾಟೀಲ, ಮಧು ಕರಿಬಿಷ್ಠಿ ಹಾಗೂ ವಿನಾಯಕ ಗೋಜನೂರ ಸೇರಿದಂತೆ ದಲಾಲ ಮತ್ತು ಖರೀದಿ ವರ್ತಕರು ಪೂಜೆಯಲ್ಲಿ ಪಾಲ್ಗೊಂಡಿದ್ದರು.

ಶ್ರೀ ಗಜಾನನೋತ್ಸವ ಟ್ರಸ್ಟ್ ಕಮಿಟಿ ಅಧ್ಯಕ್ಷ ತಿಮ್ಮರೆಡ್ಡಿ ಎಚ್. ಕೋನರೆಡ್ಡಿ, ಗೌರವ ಅಧ್ಯಕ್ಷ ಪ್ರಮೋದ ಆರ್. ವಾರಕರ, ಕಾರ್ಯದರ್ಶಿ ರಾಜಶೇಖರ ಬಿ. ಮುಧೋಳ, ಉಪಾಧ್ಯಕ್ಷ ರಾಜು ಎನ್. ಮೂಲಿಮನಿ, ಸಹ ಕಾರ್ಯದರ್ಶಿ ಚಂದ್ರಕಾಂತ ಬಿ. ಸವದತ್ತಿ, ಖಜಾಂಚಿ ಮಹೇಶ ಜ. ಗಾಣಿಗೇರ, ವಿನಾಯಕ ಪಿ. ವಜ್ರೇಶ್ವರಿ, ವಿವೇಕಾನಂದ ಗುಡಿಮನಿ, ಕೊಟ್ರೇಶ ಈ. ಬಾಳಿಕಾಯಿ, ಗಿರೀಶ ವಿ. ಅಳವಂಡಿ, ದಯಾನಂದ ದುಂಡಪ್ಪನವರ ಹಾಗೂ ವಿನಯ ವಿ. ಕಾಡಪ್ಪನವರ ಸೇರಿದಂತೆ ಹಲವರು ಉಪಸ್ಥಿತರಿದ್ದರು.

## ಅಸೂಟಿಯಲ್ಲಿ ಫಾರ್ಮ್ ನಂ.6 ಅಭಿಯಾನ

# ಮನೆ ಬಾಗಿಲಿಗೇ ಉದ್ಯೋಗ ಅರ್ಜಿ



ವಿಜಯಸಾಕ್ಷಿ ಸುದ್ದಿ, ರೋಣ

ಗ್ರಾಮೀಣ ಕುಟುಂಬಗಳಿಗೆ ಸ್ಥಳೀಯವಾಗಿಯೇ ಉದ್ಯೋಗ ಕಲ್ಪಿಸುವ ಉದ್ದೇಶದಿಂದ ಅಸೂಟಿ ಗ್ರಾಮ ಪಂಚಾಯಿತಿ ವ್ಯಾಪ್ತಿಯಲ್ಲಿ ಫಾರ್ಮ್ ನಂ.6 ಉದ್ಯೋಗ ಬೇಡಿಕೆ ಅಭಿಯಾನ ನಡೆಸಲಾಯಿತು. ಪಿಡಿಒ ಹಾಗೂ ವಿಬಿಜಿ-ರಾಮ್-ಜಿ ಸಿಬ್ಬಂದಿ ಮನೆ ಮನೆಗೆ ತೆರಳಿ ಉದ್ಯೋಗದ ಅಗತ್ಯವಿರುವ ಕುಟುಂಬಗಳಿಂದ ಅರ್ಜಿಗಳನ್ನು ಸಂಗ್ರಹಿಸಿದರು.

ವಿಬಿಜಿ-ರಾಮ್-ಜಿ ಯೋಜನೆಯಡಿ ಉದ್ಯೋಗ ಪಡೆಯಲು ಇಚ್ಛಿಸುವ ಕುಟುಂಬಗಳು ಫಾರ್ಮ್ ನಂ.6 ಮೂಲಕ ಬೇಡಿಕೆ ಸಲ್ಲಿಸಬಹುದಾಗಿದೆ.

ಈ ಹಿನ್ನೆಲೆಯಲ್ಲಿ ಸಿಬ್ಬಂದಿ ಪ್ರತಿ ಕುಟುಂಬವನ್ನು ಸಂಪರ್ಕಿಸಿ ಉದ್ಯೋಗದ ಅಗತ್ಯ, ಕುಟುಂಬದ ವಿವರ ಹಾಗೂ ಕೆಲಸ ಮಾಡಲು ಇರುವ ಆಸಕ್ತಿಯ ಕುರಿತು ಮಾಹಿತಿ ಪಡೆದುಕೊಂಡರು. ಯೋಜನೆಯಡಿ ದೊರೆಯುವ ಉದ್ಯೋಗಾವಕಾಶ, ಅರ್ಜಿ ಸಲ್ಲಿಕೆ ವಿಧಾನ ಹಾಗೂ ಉದ್ಯೋಗ ನೀಡುವ ಪ್ರಕ್ರಿಯೆ ಕುರಿತು ಸ್ಥಳದಲ್ಲಿಯೇ ಮಾಹಿತಿ ನೀಡಿದರು.

ಪಂಚಾಯಿತಿಗೆ ತೆರಳಿ ಅರ್ಜಿ ಸಲ್ಲಿಸಲು ಸಾಧ್ಯವಾಗದ ಕುಟುಂಬಗಳಿಗೂ ಯೋಜನೆಯ ಪ್ರಯೋಜನ ತಲುಪಬೇಕು ಎಂಬ ಉದ್ದೇಶದಿಂದ ಮನೆ ಮನೆಗೆ ತೆರಳಿ ಅರ್ಜಿ ಸಂಗ್ರಹಿಸುವ ಕ್ರಮ ಕೈಗೊಳ್ಳಲಾಗಿದೆ.

ಸ್ವೀಕರಿಸಿದ ಅರ್ಜಿಗಳನ್ನು ಪರಿಶೀಲಿಸಿ ಅರ್ಹ ಕುಟುಂಬಗಳಿಗೆ ಯೋಜನೆಯಡಿ ಅನುಮೋದಿತ ಕಾಮಗಾರಿಗಳಲ್ಲಿ ಉದ್ಯೋಗ ಕಲ್ಪಿಸಲು ಕ್ರಮ ಕೈಗೊಳ್ಳಲಾಗುವುದು.

ಜಲಸಂರಕ್ಷಣೆ, ಗ್ರಾಮೀಣ ಮೂಲಸೌಕರ್ಯ ಹಾಗೂ ಜೀವನೋಪಾಯಕ್ಕೆ ಸಂಬಂಧಿಸಿದ ವಿವಿಧ ಕಾಮಗಾರಿಗಳಲ್ಲಿ ಸ್ಥಳೀಯ ಕಾರ್ಮಿಕರಿಗೆ ಉದ್ಯೋಗದ ಅವಕಾಶವಿದೆ. ದಿನಕ್ಕೆ ₹382 ಕೂಲಿ ಹಾಗೂ ವರ್ಷದಲ್ಲಿ 125 ದಿನಗಳವರೆಗೆ ಉದ್ಯೋಗದ ಅವಕಾಶ ಇರುವ ಹಿನ್ನೆಲೆಯಲ್ಲಿ ಗ್ರಾಮಸ್ಥರಿಂದ ಉತ್ತಮ ಸ್ಪಂದನೆ ವ್ಯಕ್ತವಾಗಿದೆ.

ಮಳೆ ಹಾಗೂ ಕೃಷಿ ಚಟುವಟಿಕೆಗಳ ನಡುವಿನ ಅವಧಿಯಲ್ಲಿ ಉದ್ಯೋಗದ ಕೊರತೆ ಎದುರಿಸುವ ಕುಟುಂಬಗಳಿಗೆ ಗ್ರಾಮದಲ್ಲಿಯೇ ಕೆಲಸ ದೊರೆಯುವಂತೆ ಮಾಡುವುದು ಅಭಿಯಾನದ ಉದ್ದೇಶವಾಗಿದೆ. ಉದ್ಯೋಗಕ್ಕಾಗಿ ಬೇರೆ ಊರುಗಳಿಗೆ ವಲಸೆ ಹೋಗುವ ಪರಿಸ್ಥಿತಿ ಕಡಿಮೆ ಮಾಡುವ ನಿಟ್ಟಿನಲ್ಲಿ ತಾಲೂಕು ಪಂಚಾಯಿತಿ ವತಿಯಿಂದ ಇಂತಹ ಅಭಿಯಾನವನ್ನು ತಾಲೂಕಿನಾದ್ಯಂತ ನಡೆಸಲಾಗುತ್ತಿದೆ.

ಅಸೂಟಿ ಗ್ರಾಮದಲ್ಲಿ ನಡೆದ ಅಭಿಯಾನದಲ್ಲಿ ಪಿಡಿಒ, ವಿಬಿಜಿ-ರಾಮ್-ಜಿ ಸಿಬ್ಬಂದಿ ಹಾಗೂ ಗ್ರಾಮ ಪಂಚಾಯಿತಿ ಸಿಬ್ಬಂದಿ ಭಾಗವಹಿಸಿ ವಿವಿಧ ಕುಟುಂಬಗಳಿಂದ ಉದ್ಯೋಗದ ಬೇಡಿಕೆ ಅರ್ಜಿಗಳನ್ನು ಸಂಗ್ರಹಿಸಿದರು.

## ಜಾಗ ಗುರುತಿಸಿದರೆ ಭವನ ನಿರ್ಮಾಣ; ವಿನಯ್ ಕುಲಕರ್ಣಿ

# ವಿಶ್ವಕರ್ಮ ಸಮಾಜಕ್ಕೆ ಸಮುದಾಯ ಭವನ

ವಿಜಯಸಾಕ್ಷಿ ಸುದ್ದಿ, ಧಾರವಾಡ

ವಿಶ್ವಕರ್ಮ ಸಮಾಜ ಶ್ರಮಜೀವಿ ಸಮುದಾಯವಾಗಿದ್ದು, ಭಗವಾನ್ ಶ್ರೀ ವಿಶ್ವಕರ್ಮರು ವಿಶ್ವ ವಾಸ್ತುಶಿಲ್ಪದ ಪಿತಾಮಹರಾಗಿದ್ದಾರೆ ಎಂದು ಧಾರವಾಡ ಗ್ರಾಮೀಣ ಶಾಸಕ ವಿನಯ ಕುಲಕರ್ಣಿ ಹೇಳಿದರು.



ಜಿಲ್ಲಾಡಳಿತ ಹಾಗೂ ಕನ್ನಡ ಮತ್ತು ಸಂಸ್ಕೃತಿ ಇಲಾಖೆ ಸಹಯೋಗದಲ್ಲಿ ಗುರುವಾರ ನಗರದ ಕರ್ನಾಟಕ ಕುಲಪುರೋಹಿತ ಆಲೂರು ವೆಂಕಟರಾವ್ ಸಾಂಸ್ಕೃತಿಕ ಭವನದಲ್ಲಿ ಆಯೋಜಿಸಿದ್ದ ವಿಶ್ವಕರ್ಮ ಜಯಂತಿ ಕಾರ್ಯಕ್ರಮದಲ್ಲಿ ವಿಶ್ವಕರ್ಮರ ಭಾವಚಿತ್ರಕ್ಕೆ ಪುಷ್ಪಾರ್ಚನೆ ಸಲ್ಲಿಸಿ ಅವರು ಮಾತನಾಡಿದರು.

ವಿಶ್ವಕರ್ಮ ಸಮಾಜದವರು ಸಮುದಾಯ ಭವನ ನಿರ್ಮಾಣಕ್ಕೆ ಸೂಕ್ತ ಸ್ಥಳ ಗುರುತಿಸಿ ನೀಡಿದರೆ, ಭವನ ನಿರ್ಮಾಣಕ್ಕೆ ಅಗತ್ಯ ಸಹಕಾರ ನೀಡುವುದಾಗಿ ಭರವಸೆ ನೀಡಿದರು. ಭವನದಲ್ಲಿ ಕರಕುಶಲ ತರಬೇತಿ ಕೇಂದ್ರ ಆರಂಭಿಸಿ, ಯುವಕರು ತಮ್ಮ ಸಾಂಪ್ರದಾಯಿಕ ಕಾಯಕವನ್ನು ಮುಂದುವರಿಸಲು ಅಗತ್ಯ ಕೌಶಲ್ಯ ಬೆಳೆಸಿಕೊಳ್ಳಬೇಕು ಎಂದು ಸಲಹೆ ನೀಡಿದರು.

ಸಮಾಜದ ಅಭಿವೃದ್ಧಿಗೆ ಅಗತ್ಯವಿರುವ ಎಲ್ಲ ರೀತಿಯ ಸಹಕಾರ ನೀಡುವುದಾಗಿ ಶಾಸಕ ವಿನಯ ಕುಲಕರ್ಣಿ ತಿಳಿಸಿದರು.

ಕಾರ್ಯಕ್ರಮದ ಅಧ್ಯಕ್ಷತೆ ವಹಿಸಿದ್ದ ಹುಬ್ಬಳ್ಳಿ-ಧಾರವಾಡ ಮಹಾನಗರ ಪಾಲಿಕೆ ಗ್ಯಾರಂಟಿ ಯೋಜನೆಗಳ ಅನುಷ್ಠಾನ ಸಮಿತಿ ಅಧ್ಯಕ್ಷ ಪ್ರಕಾಶ ಹಳಿಯಾಳ ಮಾತನಾಡಿದರು. ಆರ್. ಪ್ರಮೋದಸ್ವಾಮಿ ಹಾಗೂ ಬೆಳಗಾವಿ ಜಿಲ್ಲೆಯ ಕಿತ್ತೂರು ಸರ್ಕಾರಿ ಬಾಲಕಿಯರ ಪ್ರೌಢಶಾಲೆಯ ಶಿಕ್ಷಕಿ ಸರೋಜಾತಾಯಿ ಬಸವರಾಜ ಮಾರಿಹಾಳ ಅವರು ವಿಶ್ವಕರ್ಮರ ಕುರಿತು ವಿಶೇಷ ಉಪನ್ಯಾಸ ನೀಡಿದರು.

ಕನ್ನಡ ಮತ್ತು ಸಂಸ್ಕೃತಿ ಇಲಾಖೆಯ ಸಹಾಯಕ ನಿರ್ದೇಶಕ ಕುಮಾರ ಬೆಕ್ಕೇರಿ ಸ್ವಾಗತಿಸಿದರು.

ಕಾರ್ಯಕ್ರಮಕ್ಕೂ ಮುನ್ನ ಶ್ರೀ ಮೌನೇಶ್ವರ ದೇವಸ್ಥಾನದಿಂದ ಆಲೂರು ವೆಂಕಟರಾವ್ ಸಾಂಸ್ಕೃತಿಕ ಭವನದವರೆಗೆ ವಿವಿಧ ಕಲಾತಂಡಗಳೊಂದಿಗೆ ವಿಶ್ವಕರ್ಮರ ಮೂರ್ತಿಯ ಮೆರವಣಿಗೆ ನಡೆಯಿತು. ಡಾ.ಅರ್ಚನಾ ಪತ್ತಾರ (ಸುತಾರ) ಹಾಗೂ ತಂಡದಿಂದ ಸಂಗೀತ ಕಾರ್ಯಕ್ರಮ ಜರುಗಿತು. ಕಾರ್ಯಕ್ರಮದಲ್ಲಿ ರಾಬರ್ಟ್ ದದ್ದಾಪುರಿ, ಅರವಿಂದ ಏಗನಗೌಡರ, ಸಮಾಜದ ಮುಖಂಡರಾದ ಮಹಾರುದ್ರ ಬಡಿಗೇರ, ವಸಂತ ಅರ್ಕಾಚಾರ್, ಕಾಳಪ್ಪ ಬಡಿಗೇರ, ಸಂತೋಷ ಬಡಿಗೇರ, ನಿರಂಜನ ಬಡಿಗೇರ, ಜಿ.ಐ. ಪಟ್ಟಣಕೋಡಿ, ಸರೋಜಾ ರಾಮಪ್ಪ ಬಡಿಗೇರ ಸೇರಿದಂತೆ ಹಲವರು ಇದ್ದರು.

> ಯುವಕರು ಸಾಂಪ್ರದಾಯಿಕ ಕಾಯಕದ ಜತೆಗೆ ಆಧುನಿಕ ಕೌಶಲ್ಯವನ್ನೂ ಬೆಳೆಸಿಕೊಂಡು ಸ್ವಾವಲಂಬಿಗಳಾಗಬೇಕು. ಸಮುದಾಯ ಭವನಕ್ಕೆ ಸೂಕ್ತ ಸ್ಥಳ ಗುರುತಿಸಿದರೆ ಅದರ ನಿರ್ಮಾಣಕ್ಕೆ ಅಗತ್ಯ ಸಹಕಾರ ನೀಡಲಾಗುವುದು.
> – ವಿನಯ ಕುಲಕರ್ಣಿ, ಶಾಸಕ, ಧಾರವಾಡ ಗ್ರಾಮೀಣ

## ಸಣ್ಣ ಸುದ್ದಿಗಳು

### ನಿಧನ
### ಶಿವಾಯವ್ವ ಕಡೆತೋಟದ



ಗದಗ: ತಾಲೂಕಿನ ನರಸಾಪೂರ ಗ್ರಾಮದ ನಿವಾಸಿ ಶಿವಾಯವ್ವ ನಾಗಪ್ಪ ಕಡೆತೋಟದ (63) ಅವರು ಗುರುವಾರ ನಿಧನರಾದರು.

ಮೃತರು ಪುತ್ರಿ, ಅಳಿಯ ಸೇರಿದಂತೆ ಅಪಾರ ಬಂಧು-ಬಳಗವನ್ನು ಅಗಲಿದ್ದಾರೆ.

## ಮಹಿಳಾ ಕಾಲೇಜಿನಲ್ಲಿ ಕಲ್ಯಾಣ ಕರ್ನಾಟಕ ಉತ್ಸವ ಧ್ವಜಾರೋಹಣ

**ವಿಜಯಸಾಕ್ಷಿ ಸುದ್ದಿ, ಕೊಪ್ಪಳ**

ನಗರದ ಮಹಿಳೆಯರ ಸರಕಾರಿ ಪ್ರಥಮ ದರ್ಜೆ ಕಾಲೇಜಿನಲ್ಲಿ ಗುರುವಾರ ಕಲ್ಯಾಣ ಕರ್ನಾಟಕ ಉತ್ಸವ ದಿನಾಚರಣೆಯನ್ನು ಆಚರಿಸಲಾಯಿತು. ಈ ಅಂಗವಾಗಿ ಕಾಲೇಜಿನ ಪ್ರಾಚಾರ್ಯ ಡಾ. ಗಣಪತಿ ಲಮಾಣಿ ಅವರು ಧ್ವಜಾರೋಹಣ ನೆರವೇರಿಸಿದರು.

ಉತ್ಸವ ದಿನಾಚರಣೆಯ ಹಿನ್ನೆಲೆ ಹಾಗೂ ಕಲ್ಯಾಣ ಕರ್ನಾಟಕ ಜಿಲ್ಲೆಗಳ ಜನರ ಪ್ರಸ್ತುತ ಸ್ಥಿತಿಗತಿ ಕುರಿತು ಬೋಧಕರಾದ ಡಾ. ಶುಭ ಹಾಗೂ ಡಾ. ವಿಠೋಬಾ ಎಸ್. ಮಾತನಾಡಿ, ಈ ಭಾಗದ ಅಭಿವೃದ್ಧಿ ಹಾಗೂ ಜನರ ಬದುಕಿನ ಕುರಿತು ಚರ್ಚಿಸಿದರು.

ಈ ಸಂದರ್ಭದಲ್ಲಿ ಬೋಧಕರಾದ ರಾಜ್ಮಾ ಟಿಎಂಆರ್., ಲಲಿತಾ ಎನ್.ಕೆ., ಸುಮಿತ್ರಾ ಎಸ್.ವಿ., ಸುಮಯ್ಯ ಕೆ., ರಿಯಾಜ ಪರ್ವಿನ್, ಡಾ. ಬಸವರಾಜ ಡಿ., ಗಣೇಶ್ ಇಟಗಿ, ಸಮಿಉದ್ದೀನ್ ಖಾಜಿ, ಬಸವರಾಜ, ಮಂಜುನಾಥ, ಶಂಕರ್ ನಾಯಕ್ ಎಲ್., ವೀರೇಂದ್ರ ಕೆ., ಬಸವರಾಜ ಕರುಗಲ್, ಬೋಧಕೇತರ ಸಿಬ್ಬಂದಿ ಹಾಗೂ ವಿದ್ಯಾರ್ಥಿನಿಯರು ಉಪಸ್ಥಿತರಿದ್ದರು.

## ಸ್ವಯಂ ಉದ್ಯೋಗಕ್ಕೆ 10 ದಿನದ ಉದ್ಯಮಶೀಲತಾ ತರಬೇತಿ

**ವಿಜಯಸಾಕ್ಷಿ ಸುದ್ದಿ, ಗದಗ**

ಸ್ವಯಂ ಉದ್ಯೋಗ ಕೈಗೊಳ್ಳಲು ಆಸಕ್ತಿ ಹೊಂದಿರುವ ಪರಿಶಿಷ್ಟ ಜಾತಿ ಹಾಗೂ ಪರಿಶಿಷ್ಟ ಪಂಗಡದ ಪುರುಷರು ಮತ್ತು ಮಹಿಳೆಯರಿಗಾಗಿ 10 ದಿನಗಳ ಉದ್ಯಮಶೀಲತಾಭಿವೃದ್ಧಿ ತರಬೇತಿ ಕಾರ್ಯಕ್ರಮವನ್ನು ಇದೇ ತಿಂಗಳ ನಾಲ್ಕನೇ ವಾರದಲ್ಲಿ ಗದಗದಲ್ಲಿ ಆಯೋಜಿಸಲಾಗುವುದು.

ಕೌಶಲ್ಯಾಭಿವೃದ್ಧಿ, ಉದ್ಯಮಶೀಲತೆ ಹಾಗೂ ಜೀವನೋಪಾಯ ಇಲಾಖೆ ಪ್ರಾಯೋಜಕತ್ವದಲ್ಲಿ ಕರ್ನಾಟಕ ಉದ್ಯಮಶೀಲತಾಭಿವೃದ್ಧಿ ಕೇಂದ್ರ (ಸಿಡಾಕ್), ಧಾರವಾಡ ಹಾಗೂ ಗದಗ ಇವರ ಸಹಯೋಗದಲ್ಲಿ ತರಬೇತಿ ಕಾರ್ಯಕ್ರಮ ನಡೆಯಲಿದೆ.

ಹೆಚ್ಚಿನ ಮಾಹಿತಿಗಾಗಿ ಸಿಡಾಕ್ ಜಿಲ್ಲಾ ಕಚೇರಿ, ಜಿಲ್ಲಾ ಕೌಶಲ್ಯಾಭಿವೃದ್ಧಿ ಅಧಿಕಾರಿಗಳ ಕಚೇರಿ ಆವರಣ, ಕೊಠಡಿ ಸಂಖ್ಯೆ 106, ಒಂದನೇ ಮಹಡಿ, ಜಿಲ್ಲಾ ಆಡಳಿತ ಭವನ, ಗದಗ ಅಥವಾ ಮೊ. 77958 55847, 87227 59959 ಸಂಪರ್ಕಿಸಬಹುದು.

## ವಿಶ್ವ ಕೌಶಲ್ಯ ಸ್ಪರ್ಧೆಗೆ ಯುವಜನರಿಂದ ನೋಂದಾವಣೆ

**ವಿಜಯಸಾಕ್ಷಿ ಸುದ್ದಿ, ಗದಗ**

ಕೌಶಲ್ಯಾಭಿವೃದ್ಧಿ, ಉದ್ಯಮಶೀಲತೆ ಮತ್ತು ಜೀವನೋಪಾಯ ಇಲಾಖೆಯ ಬೆಂಗಳೂರು (ಕೆಎಸ್‌ಡಿಸಿ) ವತಿಯಿಂದ 'ಇಂಡಿಯಾ ಸ್ಕಿಲ್-2026' ಸ್ಪರ್ಧೆ ಆಯೋಜಿಸಲಾಗಿದೆ. 16ರಿಂದ 25 ವರ್ಷದೊಳಗಿನ ಯುವಕ-ಯುವತಿಯರು 63ಕ್ಕೂ ಹೆಚ್ಚು ವಿವಿಧ ಕೌಶಲ್ಯ ಸ್ಪರ್ಧೆಗಳಲ್ಲಿ ಭಾಗವಹಿಸಲು ಅವಕಾಶ ಕಲ್ಪಿಸಲಾಗಿದೆ.

ಸ್ಪರ್ಧೆಯನ್ನು ರಾಜ್ಯ ಹಾಗೂ ರಾಷ್ಟ್ರೀಯ ಮಟ್ಟದಲ್ಲಿ ಆಯೋಜಿಸಲಾಗುತ್ತಿದ್ದು, 2028ರಲ್ಲಿ ಜಪಾನ್‌ನ ಐಚಿ ನಗರದಲ್ಲಿ ನಡೆಯಲಿರುವ ವಿಶ್ವ ಕೌಶಲ್ಯ ಸ್ಪರ್ಧೆಗೆ ಭಾರತವನ್ನು ಪ್ರತಿನಿಧಿಸುವ ಅವಕಾಶವೂ ದೊರೆಯಲಿದೆ. 'ಇಂಡಿಯಾ ಸ್ಕಿಲ್-2026'ರಲ್ಲಿ ಪದಕ ಗೆಲ್ಲುವ ಮೂಲಕ ಮುಂದಿನ ಹಂತದ ಸ್ಪರ್ಧೆಗೆ ಅರ್ಹತೆ ಪಡೆಯಬಹುದಾಗಿದೆ. ಜಿಲ್ಲೆಯ ಆಸಕ್ತ ಯುವಕ-ಯುವತಿಯರು ಸೆ.22, 2026ರೊಳಗಾಗಿ ಲಾಗಿನ್ ಆಗಿ ನೋಂದಾಯಿಸಿಕೊಳ್ಳಬಹುದು ಎಂದು ಜಿಲ್ಲಾ ಕೌಶಲ್ಯಾಭಿವೃದ್ಧಿ ಅಧಿಕಾರಿಗಳು ತಿಳಿಸಿದ್ದಾರೆ. ಹೆಚ್ಚಿನ ಮಾಹಿತಿಗಾಗಿ 08372-295583 ಸಂಖ್ಯೆಗೆ ಸಂಪರ್ಕಿಸಬಹುದು.

## ಸಹಾಯಧನ ಪಡೆಯಲು ಮಣ್ಣು ಪರೀಕ್ಷೆ ಕಡ್ಡಾಯ

**ವಿಜಯಸಾಕ್ಷಿ ಸುದ್ದಿ, ಗದಗ**

ಕೃಷಿ ಯಾಂತ್ರೀಕರಣ, ಸೂಕ್ಷ್ಮ ನೀರಾವರಿ ಸೇರಿದಂತೆ ಕೃಷಿ ಇಲಾಖೆಯ ವಿವಿಧ ಯೋಜನೆಗಳಡಿ ಸಹಾಯಧನ ಪಡೆಯಲು ರೈತರು ತಮ್ಮ ಜಮೀನಿನ ಮಣ್ಣು ಪರೀಕ್ಷೆ ವರದಿ ಹೊಂದಿರುವುದು ಪ್ರಸಕ್ತ ಸಾಲಿನಿಂದ ಕಡ್ಡಾಯವಾಗಿದೆ. ಕೃಷಿ ಇಲಾಖೆಯ ಎ-ಖುಚಿಟಿ ಪೋರ್ಟಲ್ ಹಾಗೂ ರೈತ ಸಂಪರ್ಕ ಕೇಂದ್ರಗಳ ಮೂಲಕ ವಿವಿಧ ಸೌಲಭ್ಯ ಪಡೆಯಲು ಅರ್ಜಿ ಸಲ್ಲಿಸುವ ರೈತರು ತಮ್ಮ ಜಮೀನಿನ ಮಣ್ಣು ಪರೀಕ್ಷೆ ವರದಿಯನ್ನು ಕಡ್ಡಾಯವಾಗಿ ಲಗತ್ತಿಸಬೇಕು. ಭೂಮಿಯ ಫಲವತ್ತತೆ ಹೆಚ್ಚಿಸುವುದು ಹಾಗೂ ವೈಜ್ಞಾನಿಕ ಕೃಷಿಗೆ ಉತ್ತೇಜನ ನೀಡುವುದು ಈ ಕ್ರಮದ ಉದ್ದೇಶವಾಗಿದೆ. ಮಣ್ಣು ಪರೀಕ್ಷೆಯಿಂದ ಜಮೀನಿನಲ್ಲಿರುವ ಸಾರಜನಕ, ರಂಜಕ, ಪೊಟ್ಯಾಸಿಯಂ ಸೇರಿದಂತೆ ಪ್ರಮುಖ ಪೋಷಕಾಂಶಗಳ ಪ್ರಮಾಣ ತಿಳಿಯಲಿದೆ. ಇದರಿಂದ ಬೆಳೆಗಳಿಗೆ ಅಗತ್ಯವಿರುವ ರಸಗೊಬ್ಬರವನ್ನು ಸೂಕ್ತ ಪ್ರಮಾಣದಲ್ಲಿ ಬಳಸಲು ಸಾಧ್ಯವಾಗುವುದರಿಂದ ಅನಗತ್ಯ ವೆಚ್ಚ ಕಡಿಮೆಯಾಗಿ, ಬೆಳೆಗಳ ಇಳುವರಿ ಮತ್ತು ಗುಣಮಟ್ಟ ಹೆಚ್ಚಿಸಲು ಸಹಕಾರಿಯಾಗಲಿದೆ. ಮಣ್ಣಿನ ಗುಣಲಕ್ಷಣಗಳಿಗೆ ಅನುಗುಣವಾಗಿ ಸೂಕ್ತ ಬೆಳೆ ಹಾಗೂ ಅಗತ್ಯ ಪೋಷಕಾಂಶಗಳ ಕುರಿತು ಶಿಫಾರಸು ಪಡೆಯಬಹುದಾಗಿದೆ. ನಿಯಮಿತವಾಗಿ, ಅಂದರೆ ಪ್ರತಿ 2 ಅಥವಾ 3 ವರ್ಷಕ್ಕೊಮ್ಮೆ ಮಣ್ಣು ಪರೀಕ್ಷೆ ಮಾಡಿಸುವುದರಿಂದ ಮಣ್ಣಿನ ಆರೋಗ್ಯ ಮತ್ತು ಫಲವತ್ತತೆಯನ್ನು ದೀರ್ಘಕಾಲ ಕಾಪಾಡಿಕೊಳ್ಳಬಹುದು.

ಈ ಕುರಿತು ರೈತ ಸಂಪರ್ಕ ಕೇಂದ್ರಗಳ ಮೂಲಕ ಜಿಲ್ಲೆಯ ರೈತರಿಗೆ ಜಾಗೃತಿ ಮೂಡಿಸಲಾಗುತ್ತಿದ್ದು, ಮಣ್ಣು ಮಾದರಿ ಸಂಗ್ರಹಿಸುವ ವಿಧಾನ, ಪರೀಕ್ಷೆಯ ಹಂತಗಳು ಹಾಗೂ ಅಗತ್ಯ ಮುನ್ನೆಚ್ಚರಿಕೆಗಳ ಬಗ್ಗೆ ಮಾಹಿತಿ ನೀಡಲಾಗುತ್ತಿದೆ. ರೈತರು ತಮ್ಮ ವ್ಯಾಪ್ತಿಯ ರೈತ ಸಂಪರ್ಕ ಕೇಂದ್ರದಿಂದ ಮಾಹಿತಿ ಪಡೆಯಬಹುದಾಗಿದೆ. ಪ್ರಸಕ್ತ ಸಾಲಿನಿಂದ ಕೃಷಿ ಇಲಾಖೆಯ ಸಹಾಯಧನದ ಎಲ್ಲ ಯೋಜನೆಗಳಿಗೆ ಮಣ್ಣು ಪರೀಕ್ಷೆ ವರದಿ ಲಗತ್ತಿಸುವುದರ ಜೊತೆಗೆ ಮಣ್ಣಿನ ಆರೋಗ್ಯದ ಬಗ್ಗೆ ರೈತರು ಹೆಚ್ಚಿನ ಕಾಳಜಿ ವಹಿಸಬೇಕು ಎಂದು ಜಂಟಿ ಕೃಷಿ ನಿರ್ದೇಶಕಿ ಚೇತನಾ ಪಾಟೀಲ ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

### ಗುಣಮಟ್ಟದ ಶಿಕ್ಷಣ, ಸೌಲಭ್ಯಕ್ಕೆ ಆದ್ಯತೆ: ಮಿಥುನ್ ಪಾಟೀಲ

# ಸರ್ಕಾರಿ ಕಾಲೇಜುಗಳು ಖಾಸಗಿಗೆ ಕಮ್ಮಿ ಇಲ್ಲ

**ವಿಜಯಸಾಕ್ಷಿ ಸುದ್ದಿ, ನರೇಗಲ್ಲ**

ಸರ್ಕಾರಿ ಕಾಲೇಜುಗಳು ಎಂದರೆ ಸೌಲಭ್ಯಗಳ ಕೊರತೆ ಎಂಬ ಭಾವನೆ ದೂರವಾಗಬೇಕು. ಗುಣಮಟ್ಟದ ಶಿಕ್ಷಣ ಹಾಗೂ ಅಗತ್ಯ ಮೂಲಸೌಕರ್ಯ ಕಲ್ಪಿಸುವ ಮೂಲಕ ಖಾಸಗಿ ಶಿಕ್ಷಣ ಸಂಸ್ಥೆಗಳಿಗೆ ಕಮ್ಮಿಯಿಲ್ಲದಂತೆ ಸರ್ಕಾರಿ ಕಾಲೇಜುಗಳನ್ನು ರೂಪಿಸಲಾಗುವುದು ಎಂದು ರೋಣ ತಾಲೂಕು ಗ್ಯಾರಂಟಿ ಯೋಜನೆಗಳ ಅನುಷ್ಠಾನ ಸಮಿತಿ ಅಧ್ಯಕ್ಷ ಮಿಥುನ್ ಜಿ. ಪಾಟೀಲ ಹೇಳಿದರು.

ನರೇಗಲ್ಲ ಪಟ್ಟಣದ ಮರಿಯಪ್ಪ ಬಾಳಪ್ಪ ಕಳಕೊಣ್ಣವರ ಸರ್ಕಾರಿ ಪ್ರಥಮ ದರ್ಜೆ ಮಹಾವಿದ್ಯಾಲಯದಲ್ಲಿ ಕರ್ನಾಟಕ ರಾಜ್ಯ ಖನಿಜ ಅಭಿವೃದ್ಧಿ ನಿಗಮ ನಿಯಮಿತ (ಕೆಎಂಡಿಸಿ) ವತಿಯಿಂದ ಗುರುವಾರ ಆಯೋಜಿಸಿದ್ದ ವಿದ್ಯಾರ್ಥಿಗಳಿಗೆ ಉಚಿತ ಬ್ಯಾಗ್ ವಿತರಣೆ ಕಾರ್ಯಕ್ರಮ ಉದ್ಘಾಟಿಸಿ ಅವರು ಮಾತನಾಡಿದರು.

ನಮ್ಮ ಕ್ಷೇತ್ರದ ಶಾಸಕ ಹಾಗೂ ಕಾಲೇಜು ಅಭಿವೃದ್ಧಿ ಸಮಿತಿ ಅಧ್ಯಕ್ಷ ಜಿ.ಎಸ್. ಪಾಟೀಲ ಅವರು ಸರ್ಕಾರಿ ಕಾಲೇಜುಗಳ ಶೈಕ್ಷಣಿಕ ಹಾಗೂ ಸರ್ವಾಂಗೀಣ ಅಭಿವೃದ್ಧಿಗೆ ನಿರಂತರವಾಗಿ ಶ್ರಮಿಸುತ್ತಿದ್ದಾರೆ. ಅವರು ಕೆಎಂಡಿಸಿ ಅಧ್ಯಕ್ಷರಾಗಿದ್ದ ಸಂದರ್ಭದಲ್ಲಿ ಸಿಎಸ್‌ಆರ್ ಅನುದಾನದಡಿ ಹಲವು



ಜನಪರ ಯೋಜನೆಗಳನ್ನು ಜಾರಿಗೊಳಿಸಿದ್ದಾರೆ ಎಂದು ಮಿಥುನ್ ಪಾಟೀಲ ಹೇಳಿದರು.

ಕಾಲೇಜಿಗೆ ₹9 ಲಕ್ಷ ಮೌಲ್ಯದ ಅತ್ಯಾಧುನಿಕ ಕಂಪ್ಯೂಟರ್‌ಗಳನ್ನು ಒದಗಿಸಲಾಗಿದ್ದು, ಇದರ ಸದ್ಬಳಕೆಯಿಂದ 78ಕ್ಕೂ ಹೆಚ್ಚು ವಿದ್ಯಾರ್ಥಿಗಳು ಕ್ಯಾಂಪಸ್ ಸಂದರ್ಶನಗಳ ಮೂಲಕ ಉದ್ಯೋಗ ಪಡೆದುಕೊಂಡಿದ್ದಾರೆ.

ಗ್ರಾಮೀಣ ಯುವಜನರ ಭವಿಷ್ಯ ರೂಪಿಸುವ ನಿಟ್ಟಿನಲ್ಲಿ ಸಾವಿರಾರು ಸ್ಪರ್ಧಾರ್ಥಿಗಳಿಗೆ ಎರಡು ತಿಂಗಳ ಕಾಲ ಉಚಿತ ಸ್ಪರ್ಧಾತ್ಮಕ ಪರೀಕ್ಷಾ ತರಬೇತಿಯನ್ನೂ ನೀಡಲಾಗಿದೆ ಎಂದರು.

ರೋಣ ಮತಕ್ಷೇತ್ರದ ಮಹಿಳೆಯರಿಗೆ ಗರ್ಭಕೋಶದ ಕಾಯಿಲೆ ತಡೆಗಟ್ಟುವ ಉಚಿತ ಲಸಿಕೆ ವಿತರಿಸುವ ಮೂಲಕ ಮಹಿಳೆಯರ ಆರೋಗ್ಯ ರಕ್ಷಣೆಯಲ್ಲೂ ಕ್ರಮ ಕೈಗೊಳ್ಳಲಾಗಿದೆ ಎಂದು ತಿಳಿಸಿದರು.

ಸಾಯಿಬಾಬಾ ದೇವಸ್ಥಾನದ ಮಾರ್ಗದಿಂದ ಕಾಲೇಜಿನವರೆಗೆ ಸಂಪರ್ಕ ಕಲ್ಪಿಸುವ ರಸ್ತೆ ಅಭಿವೃದ್ಧಿಗೆ ಈಗಾಗಲೇ ₹3 ಕೋಟಿ ಅನುದಾನ ಬಿಡುಗಡೆಯಾಗಿದೆ. ವಿದ್ಯಾರ್ಥಿಗಳ ಸಂಖ್ಯೆ ಹೆಚ್ಚುತ್ತಿರುವ ಹಿನ್ನೆಲೆಯಲ್ಲಿ ಮುಂದಿನ ದಿನಗಳಲ್ಲಿ ಹೆಚ್ಚುವರಿ ಕಂಪ್ಯೂಟರ್‌ಗಳ ವ್ಯವಸ್ಥೆ ಕಲ್ಪಿಸಲಾಗುವುದು. ಕಾಲೇಜಿನ ಕುಡಿಯುವ ನೀರಿನ ಸಮಸ್ಯೆಗೂ ಶಾಶ್ವತ ಪರಿಹಾರ ಒದಗಿಸಲಾಗುವುದು ಎಂದು ಮಿಥುನ್ ಜಿ. ಪಾಟೀಲ ಭರವಸೆ ನೀಡಿದರು.

ಕಾರ್ಯಕ್ರಮದ ಅಧ್ಯಕ್ಷತೆ ವಹಿಸಿದ್ದ ಪ್ರಾಂಶುಪಾಲರಾದ ಡಾ. ಕಸ್ತೂರೆವ್ವ ದಳವಾಯಿ ಮಾತನಾಡಿ, ಕಾಲೇಜು ಅಭಿವೃದ್ಧಿ ಸಮಿತಿ ಅಧ್ಯಕ್ಷರೂ ಆಗಿರುವ ಶಾಸಕ ಜಿ.ಎಸ್. ಪಾಟೀಲರು ಕಾಲೇಜಿನ ಮೂಲಸೌಕರ್ಯ ಹಾಗೂ ಶೈಕ್ಷಣಿಕ ಅಗತ್ಯಗಳಿಗೆ ನಿರಂತರವಾಗಿ ಸ್ಪಂದಿಸುತ್ತಿದ್ದಾರೆ. ವಿದ್ಯಾರ್ಥಿಗಳು ಉತ್ತಮ ಶೈಕ್ಷಣಿಕ ಸಾಧನೆ ಮಾಡುವ ಮೂಲಕ ಈ ಸಹಕಾರಕ್ಕೆ ಕೃತಜ್ಞತೆ ಸಲ್ಲಿಸಬೇಕು ಎಂದರು.

ಕಾರ್ಯಕ್ರಮದಲ್ಲಿ 300 ಪದವಿ ವಿದ್ಯಾರ್ಥಿಗಳಿಗೆ ಉಚಿತ ಬ್ಯಾಗ್‌ಗಳನ್ನು ವಿತರಿಸಲಾಯಿತು.

ಇದೇ ಸಂದರ್ಭದಲ್ಲಿ ಮಿಥುನ್ ಜಿ. ಪಾಟೀಲ ಅವರನ್ನು ಕಾಲೇಜಿನ ವತಿಯಿಂದ ಸನ್ಮಾನಿಸಲಾಯಿತು. ಬಳಿಕ ಸಮೀಪದ ಸರ್ಕಾರಿ ಕಾಲೇಜಿನಲ್ಲೂ ವಿದ್ಯಾರ್ಥಿಗಳಿಗೆ ಬ್ಯಾಗ್ ವಿತರಿಸಲಾಯಿತು.

ವೇದಿಕೆಯಲ್ಲಿ ಗಜೇಂದ್ರಗಡ ತಾಲೂಕು ಗ್ಯಾರಂಟಿ ಯೋಜನೆಗಳ ಅನುಷ್ಠಾನ ಸಮಿತಿ ಅಧ್ಯಕ್ಷ ಶರಣಪ್ಪ ಬೆಟಗೇರಿ, ಕಾಲೇಜು ಅಭಿವೃದ್ಧಿ ಸಮಿತಿ ಸದಸ್ಯರಾದ ಎಂ.ಎಸ್. ಧಡೇಸೂರಮಠ, ಅಲ್ಲಾಬಕ್ಷಿ ನದಾಫ್ ಇದ್ದರು.

ಕುಮಾರಸ್ವಾಮಿ ಕೋರಧಾನ್ಯಮಠ, ಸಂತೋಷ ಹನಮಸಾಗರ, ಮೈಲಾರಪ್ಪ ವೀ. ಚಳ್ಳಮರದ, ಮುತ್ತಪ್ಪ ನೂಲ್ಕಿ, ಕಳಕನಗೌಡ ಪೊಲೀಸ್‌ಪಾಟೀಲ, ಶೇಖಪ್ಪ ಕೆಂಗಾರ, ಈರಪ್ಪ ಜೋಗಿ, ಖಾದರಬಾಷಾ ಹೂಲಗೇರಿ, ಶರಣು ಗೋಧಿ ಸೇರಿದಂತೆ ಕಾಲೇಜಿನ ವಿವಿಧ ವಿಭಾಗಗಳ ಮುಖ್ಯಸ್ಥರು, ಬೋಧಕ-ಬೋಧಕೇತರ ಸಿಬ್ಬಂದಿ ಹಾಗೂ ವಿದ್ಯಾರ್ಥಿಗಳು ಪಾಲ್ಗೊಂಡಿದ್ದರು.

> ಸರ್ಕಾರಿ ಕಾಲೇಜುಗಳಲ್ಲಿ ಓದುವ ಯಾವುದೇ ವಿದ್ಯಾರ್ಥಿಗೂ ಸೌಲಭ್ಯಗಳ ಕೊರತೆ ಎದುರಾಗಬಾರದು. ಗುಣಮಟ್ಟದ ಶಿಕ್ಷಣದೊಂದಿಗೆ ಅಗತ್ಯ ಮೂಲಸೌಕರ್ಯ ಕಲ್ಪಿಸಿ, ಗ್ರಾಮೀಣ ಪ್ರತಿಭೆಗಳಿಗೆ ಉತ್ತಮ ಅವಕಾಶ ನೀಡುವುದು ನಮ್ಮ ಉದ್ದೇಶ.
>
> – ಮಿಥುನ್ ಜಿ. ಪಾಟೀಲ, ಅಧ್ಯಕ್ಷರು, ರೋಣ ತಾಲೂಕು ಗ್ಯಾರಂಟಿ ಯೋಜನೆಗಳ ಅನುಷ್ಠಾನ ಸಮಿತಿ

### ಕಂಪ್ಯೂಟರ್ ತಂತ್ರಜ್ಞರು ಸಂಘಟಿತರಾಗಿ ಗುಣಮಟ್ಟದ ಸೇವೆ ನೀಡಲಿ

# ತಂತ್ರಜ್ಞಾನದ ಜೊತೆ ವೃತ್ತಿ ಮೌಲ್ಯವೂ ಹೆಚ್ಚಲಿ




**ವಿಜಯಸಾಕ್ಷಿ ಸುದ್ದಿ, ಗದಗ**

ಕಂಪ್ಯೂಟರ್ ಕ್ಷೇತ್ರದಲ್ಲಿ ಕಾರ್ಯನಿರ್ವಹಿಸುತ್ತಿರುವ ತಂತ್ರಜ್ಞರು ಹಾಗೂ ಇಂಜಿನಿಯರ್‌ಗಳು ಪರಸ್ಪರ ಸಹಕಾರ ಮತ್ತು ಸಂಘಟಿತ ಪ್ರಯತ್ನದ ಮೂಲಕ ತಮ್ಮ ವೃತ್ತಿಯ ಮೌಲ್ಯವನ್ನು ಹೆಚ್ಚಿಸಿಕೊಳ್ಳಬೇಕು ಎಂದು ಗದಗ ಡಿಸ್ಟ್ರಿಕ್ಟ್ ಇನ್ಫೋಟೆಕ್ ಅಸೋಸಿಯೇಷನ್ ಅಧ್ಯಕ್ಷ ರಫೀಕ್ ಅಹ್ಮದ್ ಎ. ಅಣ್ಣಿಗೇರಿ ಹೇಳಿದರು.

ಗದಗದ ಅಸೋಸಿಯೇಷನ್ ಕಾರ್ಯಾಲಯದಲ್ಲಿ ಬುಧವಾರ ಆಯೋಜಿಸಿದ್ದ ಇಂಜಿನಿಯರ್ ದಿನಾಚರಣೆ ಕಾರ್ಯಕ್ರಮದ ಅಧ್ಯಕ್ಷತೆ ವಹಿಸಿ ಅವರು ಮಾತನಾಡಿದರು.

ಕಂಪ್ಯೂಟರ್ ತಂತ್ರಜ್ಞರ ನಡುವೆ ಸಹಕಾರ, ಶಿಸ್ತು ಹಾಗೂ ವೃತ್ತಿಪರತೆ ಬೆಳೆದರೆ ಕ್ಷೇತ್ರವನ್ನು ಮತ್ತಷ್ಟು ಬಲಪಡಿಸಬಹುದು. ಎಲ್ಲರೂ ತಮ್ಮ ಪ್ರತಿಭೆ ಹಾಗೂ ಸಾಮರ್ಥ್ಯವನ್ನು ಒಗ್ಗೂಡಿಸಿ ಉತ್ತಮ ಸೇವೆ ನೀಡುವುದರ ಜೊತೆಗೆ ವೃತ್ತಿಯಲ್ಲಿ ಉತ್ತಮ ಆದಾಯ ಗಳಿಸುವಂತಾಗಬೇಕು ಎಂದರು.

ತಂತ್ರಜ್ಞರು ಗ್ರಾಹಕರಿಗೆ ತೃಪ್ತಿಯಾಗುವ ರೀತಿಯಲ್ಲಿ ಗುಣಮಟ್ಟದ ಸೇವೆ ಒದಗಿಸಬೇಕು. ತಾಂತ್ರಿಕ ಸಮಸ್ಯೆಗಳನ್ನು ತ್ವರಿತವಾಗಿ ಇತ್ಯರ್ಥಪಡಿಸುವ ಮೂಲಕ ಗ್ರಾಹಕರ ವಿಶ್ವಾಸ ಗಳಿಸಬೇಕು.

ಸಂಘಟನೆಯಲ್ಲಿ ಬಲವಿದ್ದು, ಶಿಸ್ತು ಮತ್ತು ಸಂಘಟನೆಯ ಚೌಕಟ್ಟಿನಲ್ಲಿ ಗ್ರಾಹಕರಿಗೆ ಏಕರೂಪದ ಸೇವಾ ಶುಲ್ಕ ನಿಗದಿಪಡಿಸಲು ಅಸೋಸಿಯೇಷನ್ ಮುಂದಾಗಿದೆ. ಇದಕ್ಕೆ ಎಲ್ಲ ಸದಸ್ಯರು ಸಹಕರಿಸಬೇಕು ಎಂದು ಮನವಿ ಮಾಡಿದರು.

ಮುಖ್ಯ ಅತಿಥಿಯಾಗಿ ಆಗಮಿಸಿದ್ದ ಹಿರಿಯ ಕಂಪ್ಯೂಟರ್ ಇಂಜಿನಿಯರ್ ಶ್ರೀನಾಥ ಪಾಟೀಲ ಮಾತನಾಡಿ, ಆನ್‌ಲೈನ್ ವ್ಯಾಪಾರದ ಬೆಳವಣಿಗೆಯಿಂದ ಸ್ಥಳೀಯ ಕಂಪ್ಯೂಟರ್ ಹಾಗೂ ಎಲೆಕ್ಟ್ರಾನಿಕ್ಸ್ ಉದ್ಯಮಕ್ಕೆ ಸವಾಲು ಎದುರಾಗಿದೆ. ಇಂತಹ ಸಂದರ್ಭದಲ್ಲಿ ಸ್ಥಳೀಯ ವ್ಯಾಪಾರಿಗಳು ತಮ್ಮ ಪ್ರಮುಖ ಶಕ್ತಿಯಾಗಿರುವ ತಾಂತ್ರಿಕ ಜ್ಞಾನ ಮತ್ತು ತ್ವರಿತ ಸೇವೆಯನ್ನು ಪರಿಣಾಮಕಾರಿಯಾಗಿ ಬಳಸಿಕೊಳ್ಳಬೇಕು ಎಂದರು.

ಉಪಾಧ್ಯಕ್ಷ ಮಹಾಂತೇಶ ಹುಬ್ಬಳ್ಳಿಮಠ ಪ್ರಾರ್ಥಿಸಿದರು. ಕಾರ್ಯದರ್ಶಿ ಅರುಣ ಹಡಪದ ಸ್ವಾಗತಿಸಿದರು. ಜಂಟಿ ಕಾರ್ಯದರ್ಶಿ ಜುಬೇರ ಖಾಜಿ ಪ್ರಾಸ್ತಾವಿಕವಾಗಿ ಮಾತನಾಡಿದರು. ಖಜಾಂಚಿ ಕೃಷ್ಣಾ ಜಾಧವ ನಿರೂಪಿಸಿದರು. ಸಹ ಖಜಾಂಚಿ ಸಂಜೀವ ನಾವಳ್ಳಿ ವಂದಿಸಿದರು.

ವಿಜಯ ಲಿಂಗದಾಳಮಠ, ವಿನಾಯಕ ಹಬೀಬ, ಪ್ರವೀಣ ಮಳ್ಳಿ, ಅಜರುದ್ದೀನ್ ಮುಲ್ಲಾ, ಪ್ರವೀಣಗೌಡ ಪಾಟೀಲ, ಸಾಗರ ಸೇರಿದಂತೆ ಅಸೋಸಿಯೇಷನ್‌ನ ಸರ್ವ ಸದಸ್ಯರು ಪಾಲ್ಗೊಂಡಿದ್ದರು.

## ನಿರುದ್ಯೋಗ ದಿನ ಆಚರಿಸಿದ ಯುವ ಕಾಂಗ್ರೆಸ್

**ವಿಜಯಸಾಕ್ಷಿ ಸುದ್ದಿ, ಗದಗ**

ಪ್ರಧಾನಮಂತ್ರಿ ನರೇಂದ್ರ ಮೋದಿ ಅವರ ಹುಟ್ಟುಹಬ್ಬದ ಅಂಗವಾಗಿ ಗದಗ-ಬೆಟಗೇರಿ ವಿಧಾನಸಭಾ ಯುವ ಕಾಂಗ್ರೆಸ್ ಸಮಿತಿ ವತಿಯಿಂದ 'ನಿರುದ್ಯೋಗ ದಿನಾಚರಣೆ' ನಡೆಸಿ ಕೇಂದ್ರ ಸರ್ಕಾರದ ವಿರುದ್ಧ ಆಕ್ರೋಶ ವ್ಯಕ್ತಪಡಿಸಲಾಯಿತು.

ಯುವಕರಿಗೆ ಉದ್ಯೋಗ ನೀಡುವ ಭರವಸೆ ನೀಡಿ ಅಧಿಕಾರಕ್ಕೆ ಬಂದ ಪ್ರಧಾನಿ ನರೇಂದ್ರ ಮೋದಿ ಅವರು, ಇದೀಗ ದೇಶದ ಯುವಕರಿಗೆ ನಿರುದ್ಯೋಗದ 'ಗಿಫ್ಟ್' ನೀಡಿದ್ದಾರೆ ಎಂದು ಗದಗ-ಬೆಟಗೇರಿ ಯುವ ಕಾಂಗ್ರೆಸ್ ಅಧ್ಯಕ್ಷ ಅನ್ವರ ಕೆ. ನದಾಫ್ ಟೀಕಿಸಿದರು.

ಗದಗದಲ್ಲಿ ನಡೆದ ಕಾರ್ಯಕ್ರಮದಲ್ಲಿ ಮಾತನಾಡಿದ ಅವರು, ಉದ್ಯೋಗದ ನಿರೀಕ್ಷೆಯಲ್ಲಿರುವ ಯುವಕರ ಸಂಖ್ಯೆ ಹೆಚ್ಚಾಗುತ್ತಿದ್ದರೂ ಅವರ ಸಮಸ್ಯೆಗಳಿಗೆ ಕೇಂದ್ರ ಸರ್ಕಾರ ಸೂಕ್ತ ಸ್ಪಂದನೆ ನೀಡುತ್ತಿಲ್ಲ ಎಂದು ಆರೋಪಿಸಿದರು. ಯುವಕರಿಗೆ ಉದ್ಯೋಗಾವಕಾಶ ಕಲ್ಪಿಸುವ ನಿಟ್ಟಿನಲ್ಲಿ ಸರ್ಕಾರ ಪರಿಣಾಮಕಾರಿ ಕ್ರಮ ಕೈಗೊಳ್ಳಬೇಕು ಎಂದು ಆಗ್ರಹಿಸಿದರು.

ಕಾರ್ಯಕ್ರಮದಲ್ಲಿ ಯುವ ಕಾಂಗ್ರೆಸ್ ಅಧ್ಯಕ್ಷ ಮುತ್ತುರಾಜ ಮುಳವಾಡ, ಮುಳಗುಂದ ಬ್ಲಾಕ್ ಯುವ ಕಾಂಗ್ರೆಸ್ ಅಧ್ಯಕ್ಷ ಅಜ್ಜನ ಹುಗ್ಗೆನ್ನವರ, ಜಿಲ್ಲಾ ಯುವ ಕಾಂಗ್ರೆಸ್ ಉಪಾಧ್ಯಕ್ಷೆ ವಾಣಿ ಹಿರೇಮಠ, ಪ್ರಧಾನ ಕಾರ್ಯದರ್ಶಿ ಫಾರೂಕ್ ಬಾರಿಗಿಡದ, ಜಿಲ್ಲಾ ಕಾಂಗ್ರೆಸ್ ಅಲ್ಪಸಂಖ್ಯಾತರ ಘಟಕದ ಅಧ್ಯಕ್ಷ ಉಮರ ಫಾರೂಕ್ ಹುಬ್ಬಳ್ಳಿ, ಪ್ರಧಾನ ಕಾರ್ಯದರ್ಶಿ ಸಯ್ಯದ್ ಕೊಪ್ಪಳ ಸೇರಿದಂತೆ ಹಲವು ಮುಖಂಡರು ಹಾಗೂ ಕಾರ್ಯಕರ್ತರು ಭಾಗವಹಿಸಿದ್ದರು.

ಗದಗ ವಿಧಾನಸಭಾ ಕ್ಷೇತ್ರದ ಪದಾಧಿಕಾರಿಗಳಾದ ಶಾರುಖ್ ಅಹಮದ್ ಹುಯಿಲಗೋಳ, ವಿನಾಯಕ ಆಲೂರ, ಮೋಹನ್ ದೊಡಕುಂಡಿ, ಗದಗ-ಬೆಟಗೇರಿ ಯುವ ಕಾಂಗ್ರೆಸ್ ಉಪಾಧ್ಯಕ್ಷರಾದ ಕಿರಣ್ ಮಾಕಾಪೂರ, ಅಭಿಷೇಕ್ ಅಬ್ಬಿಸ್, ರವಿ ಹಾದಿಮನಿ, ಪ್ರವೀಣ್ ಜಂತ್ಲಿ, ದಾದುಸಾಬ ಮುಂಡರಗಿ, ಶಾಬಾಜ್ ಮುಲ್ಲಾ, ಸೇವಾದಳ ಅಧ್ಯಕ್ಷ ಮೊಹಮ್ಮದ್ ಬೆಟಗೇರಿ, ಮದರಸಾಬ ಹಮದನ್ನವರ, ವಿನಾಯಕ ಬಳ್ಳಾರಿ, ವಾಸಿಂ ಖಾಜಿ ಸೇರಿದಂತೆ ಅನೇಕರು ಉಪಸ್ಥಿತರಿದ್ದರು.

ಗದಗ-ಬೆಟಗೇರಿ ನಗರ ಎನ್‌ಎಸ್‌ಯುಐ ಅಧ್ಯಕ್ಷ ಸಂಗಮೇಶ ಕೆರಕಲಮಟ್ಟಿ, ಸಾಮಾಜಿಕ ಜಾಲತಾಣ ಅಧ್ಯಕ್ಷ ಮಾಂತೇಶ್ ಮಡಿವಾಳರ, ಪ್ರಧಾನ ಕಾರ್ಯದರ್ಶಿ ಗಣೇಶ ಕಟಗಿ ಸೇರಿದಂತೆ ಪಕ್ಷದ ವಿವಿಧ ಘಟಕಗಳ ಪದಾಧಿಕಾರಿಗಳು ಹಾಗೂ ಕಾರ್ಯಕರ್ತರು ಕಾರ್ಯಕ್ರಮದಲ್ಲಿ ಪಾಲ್ಗೊಂಡಿದ್ದರು.



### ಆರೋಗ್ಯ ತಪಾಸಣೆ, ರಕ್ತದಾನ ಶಿಬಿರಕ್ಕೆ ಉತ್ತಮ ಸ್ಪಂದನೆ

# ಗಣೇಶೋತ್ಸವದಲ್ಲಿ ರಕ್ತದಾನಕ್ಕೆ ತಾಪಂ ಮುನ್ನುಡಿ



**ವಿಜಯಸಾಕ್ಷಿ ಸುದ್ದಿ, ಮುಂಡರಗಿ**

ಗಣೇಶೋತ್ಸವದ ಸಂಭ್ರಮವನ್ನು ಸಮಾಜಮುಖಿ ಕಾರ್ಯದೊಂದಿಗೆ ಬೆಸೆದು ಉಚಿತ ಆರೋಗ್ಯ ತಪಾಸಣೆ ಹಾಗೂ ರಕ್ತದಾನ ಶಿಬಿರ ಆಯೋಜಿಸಿರುವ ಮುಂಡರಗಿ ತಾಲೂಕು ಪಂಚಾಯಿತಿಯ ಕಾರ್ಯ ಶ್ಲಾಘನೀಯ ಎಂದು ಜಿಲ್ಲಾ ಪಂಚಾಯಿತಿ ಉಪ ಕಾರ್ಯದರ್ಶಿ ಸಿ.ಆರ್. ಮುಂಡರಗಿ ಹೇಳಿದರು.

ಗಣೇಶೋತ್ಸವ-2026ರ ಅಂಗವಾಗಿ ಮುಂಡರಗಿ ತಾಲೂಕು ಪಂಚಾಯಿತಿ ಆವರಣದಲ್ಲಿ ತಾಲೂಕು ಆಸ್ಪತ್ರೆ ಹಾಗೂ ಗದಗದ ಬಸವೇಶ್ವರ ರಕ್ತಕೇಂದ್ರದ ಸಹಯೋಗದಲ್ಲಿ ಗುರುವಾರ ಆಯೋಜಿಸಿದ್ದ ಶಿಬಿರ ಉದ್ಘಾಟಿಸಿ ಅವರು ಮಾತನಾಡಿದರು. ಆರೋಗ್ಯವಂತರು ನಿಯಮಿತವಾಗಿ ರಕ್ತದಾನ ಮಾಡುವ ಮೂಲಕ ಅಗತ್ಯವಿರುವವರಿಗೆ ನೆರವಾಗಬೇಕು. ರಕ್ತದಾನದ ಕುರಿತು ಜನರಲ್ಲಿ ಅರಿವು ಮೂಡಿಸಿ, ಸ್ವಯಂಪ್ರೇರಿತರಾಗಿ ರಕ್ತದಾನ ಮಾಡುವ ಮನೋಭಾವ ಬೆಳೆಸಿಕೊಳ್ಳಬೇಕು ಎಂದರು.

ತಾಲೂಕು ಗ್ಯಾರಂಟಿ ಸಮಿತಿ ಅಧ್ಯಕ್ಷ ಡಿ.ಡಿ. ಮೋರ ನಾಳ ಮಾತನಾಡಿ, ತುರ್ತು ಸಂದರ್ಭದಲ್ಲಿ ರಕ್ತದ ಅವಶ್ಯಕತೆ ಇರುವವರಿಗೆ ರಕ್ತದಾನ ಮಾಡುವ ಮೂಲಕ ಅಮೂಲ್ಯ ಜೀವ ಉಳಿಸಲು ಸಾಧ್ಯ. ಪ್ರತಿಯೊಬ್ಬರೂ ರಕ್ತದಾನದ ಮಹತ್ವ ಅರಿತು ಶಿಬಿರಗಳಲ್ಲಿ ಪಾಲ್ಗೊಳ್ಳಬೇಕು ಎಂದರು.

ತಾಲೂಕು ಪಂಚಾಯಿತಿ ಕಾರ್ಯನಿರ್ವಾಹಕ ಅಧಿಕಾರಿ ವಿಜಯಕುಮಾರ ಬೆಣ್ಣೆ ಮಾತನಾಡಿ, ತಾಲೂಕು ಪಂಚಾಯಿತಿ ವತಿಯಿಂದ ಪ್ರತಿವರ್ಷ ಗಣೇಶೋತ್ಸವದ ಸಂದರ್ಭದಲ್ಲಿ ಆರೋಗ್ಯ ತಪಾಸಣೆ ಹಾಗೂ ರಕ್ತದಾನ ಶಿಬಿರ ಆಯೋಜಿಸಿ ಆರೋಗ್ಯ ಜಾಗೃತಿ ಮೂಡಿಸಲಾಗುತ್ತಿದೆ. ಅಪಘಾತ ಸೇರಿದಂತೆ ತುರ್ತು ಸಂದರ್ಭಗಳಲ್ಲಿ ರಕ್ತದ ಕೊರತೆಯಿಂದ ಜೀವಹಾನಿಯಾಗದಂತೆ ರಕ್ತದಾನಕ್ಕೆ ಸಾರ್ವಜನಿಕರು ಮುಂದಾಗಬೇಕು ಎಂದು ಮನವಿ ಮಾಡಿದರು.

ಗ್ಯಾರಂಟಿ ಸಮಿತಿ ಸದಸ್ಯರಾದ ವಿಶ್ವನಾಥ ಪಾಟೀಲ, ಪುಲಕೇಶಿಗೌಡ ಪಾಟೀಲ, ರಾಜೇಸಾಬ ಬೆಟಗೇರಿ ಹಾಗೂ ಕೆಡಿಪಿ ಸಮಿತಿ ಸದಸ್ಯ ಎಂ.ಯು. ಮಕಾಂದಾರ ಮಾತನಾಡಿದರು.

ಶಿಬಿರದಲ್ಲಿ ನೇತ್ರ ತಪಾಸಣೆ, ಇಸಿಜಿ, ಎನ್‌ಸಿಡಿ, ಕ್ಷಯರೋಗ, ಮಧುಮೇಹ, ರಕ್ತದೊತ್ತಡ ಸೇರಿದಂತೆ ವಿವಿಧ ಆರೋಗ್ಯ ತಪಾಸಣೆಗಳನ್ನು ನಡೆಸಲಾಯಿತು. ನೂರಾರು ಜನರು ಆರೋಗ್ಯ ತಪಾಸಣೆಗೆ ಒಳಗಾದರು.

ಸಹಾಯಕ ನಿರ್ದೇಶಕರಾದ ವಿಶ್ವನಾಥ ಹೊಸಮನಿ, ಪ್ರವೀಣ ಗೋಣೆಮ್ಮನವರ, ತಾಲೂಕು ವೈದ್ಯಾಧಿಕಾರಿ ಡಾ. ಕೀರ್ತಿಹಾಸ ಎಚ್.ಪಿ., ಫಿಜಿಶಿಯನ್ ಲಕ್ಷ್ಮಣ ಪೂಜಾರ, ತಾಲೂಕು ಸರಕಾರಿ ನೌಕರರ ಸಂಘದ ಅಧ್ಯಕ್ಷ ನಾಗರಾಜ ಹಳ್ಳಿಕೇರಿ, ಜಿಲ್ಲಾ ಉಪಾಧ್ಯಕ್ಷ ಮಹೇಶ ಅಲ್ಲಿಪೂರ, ಪಿಡಿಒ ಸಂಘದ ಜಿಲ್ಲಾಧ್ಯಕ್ಷ ರಿಯಾಜ ಖತೀಬ ಸೇರಿದಂತೆ ತಾಲೂಕು ಪಂಚಾಯಿತಿ, ವಿಬಿಜಿ-ರಾಮ್-ಜಿ, ಆರೋಗ್ಯ ಇಲಾಖೆ ಹಾಗೂ ವಿವಿಧ ಗ್ರಾಮ ಪಂಚಾಯಿತಿಗಳ ಸಿಬ್ಬಂದಿ ಉಪಸ್ಥಿತರಿದ್ದರು.

> ಗಣೇಶೋತ್ಸವದಂತಹ ಸಾರ್ವಜನಿಕ ಆಚರಣೆಯನ್ನು ಆರೋಗ್ಯ ಜಾಗೃತಿ ಹಾಗೂ ರಕ್ತದಾನದಂತಹ ಜೀವ ಉಳಿಸುವ ಸೇವೆಯೊಂದಿಗೆ ಜೋಡಿಸಿರುವುದು ಸಮಾಜಕ್ಕೆ ಉತ್ತಮ ಸಂದೇಶ. ಇಂತಹ ಸೇವಾ ಚಟುವಟಿಕೆಗಳು ನಿರಂತರವಾಗಿ ನಡೆಯಬೇಕು.
>
> – ಸಿ.ಆರ್. ಮುಂಡರಗಿ, ಉಪ ಕಾರ್ಯದರ್ಶಿ, ಜಿಲ್ಲಾ ಪಂಚಾಯಿತಿ

## ಗುಳೆ ತಪ್ಪಿಸಿ ಊರಲ್ಲೇ ಕೆಲಸ ಪಡೆಯಿರಿ



**ವಿಜಯಸಾಕ್ಷಿ ಸುದ್ದಿ, ಶಿರಹಟ್ಟಿ**

ಗ್ರಾಮೀಣ ಪ್ರದೇಶದ ಕೂಲಿಕಾರರು ಗುಳೆ ಹೋಗುವುದನ್ನು ತಪ್ಪಿಸಿ, ತಮ್ಮ ಗ್ರಾಮದಲ್ಲಿಯೇ ಉದ್ಯೋಗ ಪಡೆಯಲು ವಿಬಿಜಿ-ರಾಮ್-ಜಿ ಯೋಜನೆಯ ಸದುಪಯೋಗ ಪಡೆದುಕೊಳ್ಳಬೇಕು ಎಂದು ಅಧಿಕಾರಿಗಳು ಕರೆ ನೀಡಿದರು.

ತಾಲೂಕಿನ ಕೋಗನೂರು ಗ್ರಾಮದ ಸಮುದಾಯ ಕಾಮಗಾರಿ ಸ್ಥಳದಲ್ಲಿ ಗುರುವಾರ ವಿಬಿಜಿ-ರಾಮ್-ಜಿ ಯೋಜನೆಯಡಿ ನಡೆದ ಐಇಸಿ ಚಟುವಟಿಕೆ ಕಾರ್ಯಕ್ರಮದಲ್ಲಿ ಕೂಲಿಕಾರರಿಗೆ ಯೋಜನೆಯ ಕುರಿತು ಮಾಹಿತಿ ನೀಡಲಾಯಿತು.

ಯೋಜನೆಯಡಿ ಅರ್ಹ ಗ್ರಾಮೀಣ ಕುಟುಂಬಗಳಿಗೆ 125 ದಿನಗಳವರೆಗೆ ಉದ್ಯೋಗದ ಅವಕಾಶವಿದ್ದು, ಕಾಮಗಾರಿಗಳಲ್ಲಿ ನಿಯಮಾನುಸಾರ ಉತ್ತಮವಾಗಿ ಕೆಲಸ ನಿರ್ವಹಿಸಿದರೆ ನಿರಂತರವಾಗಿ ಉದ್ಯೋಗ ಪಡೆಯಲು ಅವಕಾಶವಿದೆ. ವೈಯಕ್ತಿಕ ಕಾಮಗಾರಿಗಳ ಸೌಲಭ್ಯಗಳನ್ನೂ ಅರ್ಹರು ಪಡೆದುಕೊಳ್ಳಬೇಕು ಎಂದು ತಿಳಿಸಲಾಯಿತು.

'ವಿಕಸಿತ ಭಾರತ ರೋಜಗಾರ್' ಹಾಗೂ ಅಜೀವಿಕ ಮಿಷನ್-ಗ್ರಾಮೀಣ ಯೋಜನೆಯ ಮೂಲಕ ಗ್ರಾಮೀಣ ಕುಟುಂಬಗಳಿಗೆ ಉದ್ಯೋಗ ಭದ್ರತೆ ಹಾಗೂ ಜೀವನೋಪಾಯಕ್ಕೆ ನೆರವು ದೊರೆಯಲಿದ್ದು, ಯೋಜನೆಯ ಸದುಪಯೋಗ ಪಡೆಯುವಂತೆ ಗ್ರಾಮಸ್ಥರಿಗೆ ಮಾಹಿತಿ ನೀಡಲಾಯಿತು.

ಸರ್ಕಾರ ಹಾಗೂ ಜಿಲ್ಲಾ ಪಂಚಾಯಿತಿ ನಿರ್ದೇಶನದಂತೆ ತಾಲೂಕಿನಾದ್ಯಂತ ಜಾಬ್ ಕಾರ್ಡ್ ಮೇಳ ಆಯೋಜಿಸಲಾಗುತ್ತಿದೆ. ಮೇಳದಲ್ಲಿ ಹೊಸ ಜಾಬ್ ಕಾರ್ಡ್ ಮಾಡಿಸುವುದು, ತಿದ್ದುಪಡಿ ಹಾಗೂ ಇ-ಕೆವೈಸಿ ನವೀಕರಣಕ್ಕೆ ಅವಕಾಶವಿದೆ ಎಂದು ತಿಳಿಸಲಾಯಿತು.

ಮಹಿಳಾ ಸಂಘಗಳು ಹಾಗೂ ಗ್ರಾಮೀಣ ಉದ್ಯೋಗಿಗಳಿಗೆ ಲಭ್ಯವಿರುವ ವಿವಿಧ ಆರ್ಥಿಕ ನೆರವು ಮತ್ತು ವೈಯಕ್ತಿಕ ಕಾಮಗಾರಿಗಳ ಕುರಿತು ಸಹ ಅರಿವು ಮೂಡಿಸಲಾಯಿತು. ಈ ಸಂದರ್ಭದಲ್ಲಿ ಪಂಚಾಯಿತಿ ಅಭಿವೃದ್ಧಿ ಅಧಿಕಾರಿಗಳು, ತಾಂತ್ರಿಕ ಸಂಯೋಜಕರು, ತಾಂತ್ರಿಕ ಸಹಾಯಕರು, ಪಂಚಾಯಿತಿ ಸಿಬ್ಬಂದಿ, ಕಾಯಕ ಬಂಧುಗಳು ಹಾಗೂ ಕೂಲಿಕಾರರು ಉಪಸ್ಥಿತರಿದ್ದರು.

ಸಣ್ಣ ಸುದ್ದಿಗಳು

### ಗಣೇಶೋತ್ಸವದ ಸಾಂಸ್ಕೃತಿಕ ಸಂಭ್ರಮಕ್ಕೆ ಕಲಾವಿದರ ಹಾಸ್ಯಭರಿತ ಅಭಿನಯ

# 'ಹೌದ್ದ ಹುಲಿಯಾ'ಗೆ ನಗೆಗಡಲಲ್ಲಿ ತೇಲಿದ ಪ್ರೇಕ್ಷಕರು



**ವಿಜಯಸಾಕ್ಷಿ ಸುದ್ದಿ, ಗದಗ**

ನಗರದ ಗಾನಯೋಗಿ ಶ್ರೀ ಪಂ. ಪಂಚಾಕ್ಷರ ಗವಾಯಿಗಳ ಕೃಷಿ ಉತ್ಪನ್ನ ಮಾರುಕಟ್ಟೆ ಪ್ರಾಂಗಣದ (ಎಪಿಎಂಸಿ) ಶ್ರೀ ಗಜಾನನೋತ್ಸವ ಟ್ರಸ್ಟ್ ಕಮಿಟಿ ವತಿಯಿಂದ ಗಣೇಶೋತ್ಸವದ ಅಂಗವಾಗಿ ಬುಧವಾರ ರಾತ್ರಿ ಕೆ.ಎಚ್. ಪಾಟೀಲ ಸಭಾಭವನದಲ್ಲಿ ಆಯೋಜಿಸಿದ್ದ 'ಹೌದ್ದ ಹುಲಿಯಾ' ಸಾಮಾಜಿಕ ಹಾಸ್ಯ ನಾಟಕ ಭರ್ಜರಿ ಯಶಸ್ಸು ಕಂಡಿತು.

ಹರೀಶ ಹಿರಿಯೂರ ಹಾಗೂ ಮಂಡಲಗೇರಿ ತಂಡದ ಕಲಾವಿದರು ಅಭಿನಯಿಸಿದ ನಾಟಕವು ಉತ್ತರ ಕರ್ನಾಟಕದ ಜಾನಪದ ಸೊಗಡು, ಸ್ಥಳೀಯ ಭಾಷೆಯ ಹಾಸ್ಯಮಯ ಸಂಭಾಷಣೆ ಹಾಗೂ ಸಾಮಾಜಿಕ ಸಂದೇಶಗಳ ಮೂಲಕ ಪ್ರೇಕ್ಷಕರನ್ನು ನಗೆಗಡಲಲ್ಲಿ ತೇಲಿಸಿತು.

'ಕಾಮಿಡಿ ಕಿಲಾಡಿ ಸೀಜನ್–4' ಹಾಗೂ ಚಾಂಪಿಯನ್‌ಶಿಪ್ ವಿಜೇತ ಹರೀಶ ಹಿರಿಯೂರ ಹೆಳವನ ಪಾತ್ರದಲ್ಲಿ, ಲಕ್ಯಾ ಹಾಸ್ಯ ಪಾತ್ರದಲ್ಲಿ ಹಾಗೂ ಪ್ರಿಯಾ ಹಿರಿಯೂರ ಲಕ್ಕಿ ಪಾತ್ರದಲ್ಲಿ ಗಮನ ಸೆಳೆದರು. ಪಾಪು ಕಲ್ಲೂರ ರಾಮಾಂಜನ ಪಾತ್ರದಲ್ಲಿ ಹಾಗೂ ಕನಕಲಕ್ಷ್ಮೀ ಕಲ್ಲೂರ ತಾಯವ್ವನ ಪಾತ್ರದಲ್ಲಿ ಬಡತನ, ಸ್ವಾಭಿಮಾನ ಮತ್ತು ದಾಂಪತ್ಯ ಬದುಕಿನ ಸನ್ನಿವೇಶಗಳನ್ನು ಮನಮುಟ್ಟುವಂತೆ ಕಟ್ಟಿಕೊಟ್ಟರು.

ಕಳನಾಯಕ ವಜ್ರಬಂಡಿ ಪಾತ್ರದಲ್ಲಿ ಸಂಕೇತ ಮಂಗಳೂರು ಅವರು ಅಧಿಕಾರ ಹಾಗೂ ಶ್ರೀಮಂತಿಕೆಯ ಅಮಲಿನಲ್ಲಿ ಅಧರ್ಮದ ಹಾದಿ ಹಿಡಿದ ವ್ಯಕ್ತಿ ಹೇಗೆ ಅವನತಿಯತ್ತ ಸಾಗುತ್ತಾನೆ ಎಂಬುದನ್ನು ಪರಿಣಾಮಕಾರಿಯಾಗಿ ಅಭಿನಯಿಸಿದರು. ರಿಯಾಜ್ ಕರ್ಜಗಿ ಹುಲಿಯಾ ಪಾತ್ರದಲ್ಲಿ, ಅರುಣ ಮುದೋಳ ಕನಕಾದ್ರಿ ಪಾತ್ರದಲ್ಲಿ, ಮೇಘರಾಜ ರಜ–ತಾದ್ರಿ ಪಾತ್ರದಲ್ಲಿ ಹಾಗೂ ತ್ರಿವೇಣಿ ಗೋಮಾತೆ ಪಾತ್ರದಲ್ಲಿ ಅಭಿನಯಿಸಿದರು.

ರಾಘು ಸಿಂಧೆ ಕೀಬೋರ್ಡ್ ಹಾಗೂ ಮುತ್ತು ಕಪನಾಳ ರಿದಮ್ ಪ್ಯಾಡ್ ಮೂಲಕ ಸಂಗೀತದ ಸಾಥ್ ನೀಡಿದರು.

ನಾಟಕ ವೀಕ್ಷಿಸಲು ಎಪಿಎಂಸಿ ವರ್ತಕರು, ರೈತರು ಹಾಗೂ ನಗರದ ನೂರಾರು ಕಲಾಭಿಮಾನಿಗಳು ಕೆ.ಎಚ್. ಪಾಟೀಲ ಸಭಾಭವನದಲ್ಲಿ ಹೆಚ್ಚಿನ ಸಂಖ್ಯೆಯಲ್ಲಿ ಸೇರಿದ್ದರು. ಕಲಾವಿದರ ಹಾಸ್ಯಭರಿತ ಅಭಿನಯಕ್ಕೆ ಪ್ರೇಕ್ಷಕರು ಕರತಾಡನದ ಮೂಲಕ ಮೆಚ್ಚುಗೆ ವ್ಯಕ್ತಪಡಿಸಿದರು.

ಗಜಾನನೋತ್ಸವ ಟ್ರಸ್ಟ್ ಕಮಿಟಿ ಕಾರ್ಯಕ್ರಮವನ್ನು ಅಚ್ಚುಕಟ್ಟಾಗಿ ಆಯೋಜಿಸಿ, ಆಗಮಿಸಿದವರಿಗೆ ಊಟದ ವ್ಯವಸ್ಥೆಯನ್ನೂ ಕಲ್ಪಿಸಿತ್ತು. ನಾಟಕದ ಬಳಿಕ ಭಾಗವಹಿಸಿದ್ದ ಕಲಾವಿದರನ್ನು ಟ್ರಸ್ಟ್ ವತಿಯಿಂದ ಗೌರವಿಸಿ ಸನ್ಮಾನಿಸಲಾಯಿತು.

ಈ ಸಂದರ್ಭದಲ್ಲಿ ಶ್ರೀ ಗಜಾನನೋತ್ಸವ ಟ್ರಸ್ಟ್ ಕಮಿಟಿ ಅಧ್ಯಕ್ಷ ತಿಮ್ಮರೆಡ್ಡಿ ಹೆಚ್. ಕೋನರೆಡ್ಡಿ, ಗೌರವ ಅಧ್ಯಕ್ಷ ಪ್ರಮೋದ ಆರ್. ವಾರಕರ, ಕಾರ್ಯದರ್ಶಿ ರಾಜಶೇಖರ ಬಿ. ಮುಧೋಳ, ಉಪಾಧ್ಯಕ್ಷ ರಾಜು ಎನ್. ಮೂಲಿಮನಿ, ಸಹ ಕಾರ್ಯದರ್ಶಿ ಚಂದ್ರಕಾಂತ ಬಿ. ಸವದತ್ತಿ, ಖಜಾಂಚಿ ಮಹೇಶ ಜ. ಗಾಣಿಗೇರ, ವಿನಾಯಕ ಪಿ. ವಜೇಶ್ವರಿ, ವಿವೇಕಾನಂದ ಗುಡಿಮನಿ, ಕೊಟ್ರೇಶ ಈ. ಬಾಳಿಕಾಯಿ, ಗಿರೀಶ ವಿ. ಅಳವಂಡಿ, ದಯಾನಂದ ದುಂಡಪ್ಪನವರ, ವಿನಯ ವಿ. ಕಾಡಪ್ಪನವರ ಸೇರಿದಂತೆ ದಲಾಲ ವರ್ತಕರು, ಖರೀದಿ ವರ್ತಕರು ಹಾಗೂ ಮತ್ತಿತರರು ಉಪಸ್ಥಿತ–ರಿದ್ದರು.

## ಕಸಾಪ ದತ್ತಿ ಉಪನ್ಯಾಸ ಇಂದು

**ವಿಜಯಸಾಕ್ಷಿ ಸುದ್ದಿ, ಗದಗ**

ಜಿಲ್ಲಾ ಕನ್ನಡ ಸಾಹಿತ್ಯ ಪರಿಷತ್ತಿನ ವತಿಯಿಂದ ಪ್ರೊ. ಕು.ಶಿ. ಹರಿದಾಸಭಟ್ ಅವರ ಸಂಸ್ಮರಣೆಯಲ್ಲಿ ದತ್ತಿ ಉಪನ್ಯಾಸ ಕಾರ್ಯಕ್ರಮವನ್ನು ಸೆ.19ರಂದು ಸಂಜೆ 6.30ಕ್ಕೆ ತೋಂಟದ ಸಿದ್ಧಲಿಂಗಶ್ರೀಗಳ ಕನ್ನಡ ಭವನದಲ್ಲಿರುವ ಕಸಾಪ ಕಾರ್ಯಾಲಯದಲ್ಲಿ ಆಯೋಜಿಸಲಾಗಿದೆ.

ಜಿಲ್ಲಾ ಕಸಾಪ ಅಧ್ಯಕ್ಷ ವಿವೇಕಾನಂದಗೌಡ ಪಾಟೀಲ ಅಧ್ಯಕ್ಷತೆ ವಹಿಸುವರು. ಸಾಹಿತಿ ಹಾಗೂ ವಿಶ್ರಾಂತ ಪ್ರಾಚಾರ್ಯ ಎನ್. ಎಂ. ಅಂಬಲಿ ಅವರು 'ಜನಪದ ಸಾಹಿತ್ಯದಲ್ಲಿ ಹಾಸ್ಯ' ವಿಷಯದ ಕುರಿತು ಉಪನ್ಯಾಸ ನೀಡುವರು. ಕಾರ್ಯದರ್ಶಿ ಡಾ. ದತ್ತಪ್ರಸನ್ನ ಪಾಟೀಲ ಅವರು ಕು.ಶಿ. ಹರಿದಾಸಭಟ್ ಅವರ ಸಂಸ್ಮರಣೆ ನಡೆಸುವರು.

ದತ್ತಿ ದಾನಿಗಳಾದ ಅನಂತಮೋಹನಭಟ್ ಹಾಗೂ ಜಯದೇವಭಟ್ ಉಪಸ್ಥಿತರಿರುವರು. ಪರಿಷತ್ತಿನ ಸದಸ್ಯರು, ಸಾಹಿತ್ಯಾಭಿಮಾನಿಗಳು ಹಾಗೂ ಸಹೃದಯರು ಹೆಚ್ಚಿನ ಸಂಖ್ಯೆಯಲ್ಲಿ ಪಾಲ್ಗೊಳ್ಳುವಂತೆ ಕಿಶೋರಬಾಬು ನಾಗರಕಟ್ಟಿ, ಡಾ. ದತ್ತಪ್ರಸನ್ನ ಪಾಟೀಲ ಹಾಗೂ ಡಿ.ಎಸ್. ಬಾಪುರಿ ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ದೇವಾಂಗ ಸಹಕಾರ ಸಂಘದ ವಾರ್ಷಿಕ ಸಭೆ ನಾಳೆ

**ವಿಜಯಸಾಕ್ಷಿ ಸುದ್ದಿ, ಬೆಟಗೇರಿ**

ದೇವಾಂಗ ಸಮಾಜ ಹಾಗೂ ನೇಕಾರರ ವಿವಿಧೋದ್ದೇಶಗಳ ಸಹಕಾರ ಸಂಘದ 15ನೇ ವಾರ್ಷಿಕ ಸರ್ವಸಾಧಾರಣ ಸಭೆ ಸೆ.20ರಂದು ಬೆಳಿಗ್ಗೆ 10 ಗಂಟೆಗೆ ನಗರದ ಶ್ರೀ ಹಳೆ ಬನಶಂಕ–ರಿದೇವಿ ದೇವಸ್ಥಾನದ ಆವರಣದಲ್ಲಿ ನಡೆಯಲಿದೆ.

ಸಂಘದ ಅಧ್ಯಕ್ಷ ಪ್ರಕಾಶ ಹತ್ತಿಕಾಳ ಅಧ್ಯಕ್ಷತೆ ವಹಿಸುವರು. ಸಭೆಯಲ್ಲಿ 2025–26ನೇ ಸಾಲಿನ ವಾರ್ಷಿಕ ವರದಿ, ಜಮಾ–ಖರ್ಚು, ಉತ್ಪಾದನೆ, ವ್ಯವಹಾರ, ಲಾಭ–ಹಾನಿ ಅಂದಾಜು ಪತ್ರಿಕೆ ಸೇರಿದಂತೆ ವಿವಿಧ ವಿಷಯಗಳ ಕುರಿತು ಚರ್ಚೆ ನಡೆಯಲಿದೆ.

ಆಡಳಿತ ಮಂಡಳಿ ಹಾಗೂ ಸಲಹಾ ಮಂಡಳಿ ಸದಸ್ಯರು, ದೇವಾಂಗ ಸಮಾಜ ಬಾಂಧವರು, ಸಂಘದ ಸರ್ವ ಸದಸ್ಯರು ಮತ್ತು ಹಿತೈಷಿಗಳು ಸಭೆಗೆ ಹೆಚ್ಚಿನ ಸಂಖ್ಯೆಯಲ್ಲಿ ಆಗಮಿಸಿ ಯಶಸ್ವಿಗೊಳಿಸಬೇಕು ಎಂದು ಸಂಘದ ಕಾರ್ಯದರ್ಶಿ ದಶರಥರಾಜ ಕೊಳ್ಳಿ ಪ್ರಕಟಣೆಯಲ್ಲಿ ವಿನಂತಿಸಿದ್ದಾರೆ.

### ದಸರಾ ಕ್ರೀಡಾಕೂಟದಲ್ಲಿ ಉತ್ಸಾಹದಿಂದ ಪಾಲ್ಗೊಳ್ಳಿ: ಬಿ.ಬಿ. ಅಸೂಟಿ

# ಕ್ರೀಡಾಂಗಣದಲ್ಲಿ ಯುವಶಕ್ತಿ ಮಿಂಚಲಿ

**ವಿಜಯಸಾಕ್ಷಿ ಸುದ್ದಿ, ಗದಗ**

ದಸರಾ ಕ್ರೀಡಾಕೂಟದಲ್ಲಿ ಯುವಕರು ಹೆಚ್ಚಿನ ಸಂಖ್ಯೆಯಲ್ಲಿ ಪಾಲ್ಗೊಂಡು ಕ್ರೀಡಾಸಕ್ತಿಯನ್ನು ಬೆಳೆಸಿಕೊಳ್ಳಬೇಕು. ಕ್ರೀಡೆಯಿಂದ ದೈಹಿಕ ಹಾಗೂ ಮಾನಸಿಕ ಆರೋಗ್ಯ ಸುಧಾರಿಸುವುದರ ಜೊತೆಗೆ ಆತ್ಮವಿಶ್ವಾಸ, ಶಿಸ್ತು ಮತ್ತು ತಂಡದ ಮನೋಭಾವ ಬೆಳೆಸಿಕೊಳ್ಳಲು ಸಾಧ್ಯ ಎಂದು ಗ್ಯಾರಂಟಿ ಯೋಜನೆಗಳ ಅನುಷ್ಠಾನ ಪ್ರಾಧಿಕಾರದ ಜಿಲ್ಲಾಧ್ಯಕ್ಷ ಬಿ.ಬಿ. ಅಸೂಟಿ ಹೇಳಿದರು.



ತಾಲೂಕು ಆಡಳಿತ, ತಾಲೂಕು ಪಂಚಾಯತ್ ಹಾಗೂ ಯುವ ಸಬಲೀಕರಣ ಮತ್ತು ಕ್ರೀಡಾ ಇಲಾಖೆ ಸಂಯುಕ್ತ ಆಶ್ರಯದಲ್ಲಿ ನಗರದ ಕೆ. ಎಚ್. ಪಾಟೀಲ ಜಿಲ್ಲಾ ಕ್ರೀಡಾಂಗಣದಲ್ಲಿ ಶುಕ್ರವಾರ ಆಯೋಜಿಸಿದ್ದ ಗದಗ ತಾಲೂಕು ಮಟ್ಟದ ದಸರಾ ಕ್ರೀಡಾಕೂಟಕ್ಕೆ ಚಾಲನೆ ನೀಡಿ ಅವರು ಮಾತನಾಡಿದರು.

ಕ್ರೀಡೆಯ ಮಹತ್ವ ಹಾಗೂ ಅದರಿಂದ ದೊರೆಯುವ ಪ್ರಯೋಜನಗಳನ್ನು ಅರಿತು, ದೈನಂದಿನ ಜೀವನದಲ್ಲಿ ಕ್ರೀಡೆಯಲ್ಲಿ ಸಕ್ರಿಯವಾಗಿ ಪಾಲ್ಗೊಳ್ಳಬೇಕು. ದಸರಾ ಹಬ್ಬದ ಅಂಗವಾಗಿ ನಡೆಯುತ್ತಿರುವ ಕ್ರೀಡಾಕೂಟದಲ್ಲಿ ಹಬ್ಬದ ಸಂಭ್ರಮ, ಉತ್ಸಾಹ ಹಾಗೂ ಸೌಹಾರ್ದತೆಯ ವಾತಾವರಣ ಮೂಡಿಬರಬೇಕು ಎಂದರು.

ಗದಗ ತಾಲೂಕಿನ ಕ್ರೀಡಾಪಟುಗಳು ತಾಲೂಕು ಹಾಗೂ ಜಿಲ್ಲಾ ಮಟ್ಟದಲ್ಲಿ ಉತ್ತಮ ಸಾಧನೆ ಮಾಡುವುದರೊಂದಿಗೆ ರಾಜ್ಯಮಟ್ಟದ ದಸರಾ ಕ್ರೀಡಾಕೂಟಗಳಲ್ಲಿಯೂ ಪಾಲ್ಗೊಂಡು ತಮ್ಮ ಪ್ರತಿಭೆ ಪ್ರದರ್ಶಿಸಬೇಕು. ರಾಜ್ಯಮಟ್ಟದಲ್ಲಿ ಸಾಧನೆಗೈದು ಗದಗ ಜಿಲ್ಲೆ ಹಾಗೂ ತಾಲೂಕಿಗೆ ಕೀರ್ತಿ ತರಬೇಕು ಎಂದು ಬಿ.ಬಿ. ಅಸೂಟಿ ಆಶಿಸಿದರು.

ಸೆ.18 ಮತ್ತು 19ರಂದು ನಡೆಯಲಿರುವ ಕ್ರೀಡಾಕೂಟದಲ್ಲಿ ತಾಲೂಕಿನ ವಿವಿಧ ಭಾಗಗಳ ಕ್ರೀಡಾಪಟುಗಳು ಭಾಗವಹಿಸುತ್ತಿದ್ದು, ವಿವಿಧ ಕ್ರೀಡಾ ಸ್ಪರ್ಧೆಗಳು ನಡೆಯಲಿವೆ.

ಕಾರ್ಯಕ್ರಮದಲ್ಲಿ ತಾಲೂಕು ಮಟ್ಟದ ಗ್ಯಾರಂಟಿ ಯೋಜನೆಗಳ ಅನುಷ್ಠಾನ ಪ್ರಾಧಿಕಾರದ ಅಧ್ಯಕ್ಷ ಅಶೋಕ್ ಮಂದಾಲಿ, ರಾಷ್ಟ್ರ ಪ್ರಶಸ್ತಿ ಪುರಸ್ಕೃತ ನಿವೃತ್ತ ಶಿಕ್ಷಕ ಎಸ್.ಎನ್. ಬಳ್ಳಾರಿ, ಯುವ ಸಬಲೀಕರಣ ಹಾಗೂ ಕ್ರೀಡಾ ಇಲಾಖೆಯ ಸಹಾಯಕ ನಿರ್ದೇಶಕ ಡಾ. ಶರಣು ಗೋಗೇರಿ ಸೇರಿದಂತೆ ಅಧಿಕಾರಿಗಳು, ಕ್ರೀಡಾಪಟುಗಳು ಹಾಗೂ ಕ್ರೀಡಾಭಿಮಾನಿಗಳು ಉಪಸ್ಥಿತರಿದ್ದರು.

> ಕ್ರೀಡೆಯಲ್ಲಿ ಸೋಲು-ಗೆಲುವಿಗಿಂತ ಕ್ರೀಡಾ ಸ್ಫೂರ್ತಿಯಿಂದ ಭಾಗವಹಿಸುವುದು ಮುಖ್ಯ. ಪ್ರತಿಯೊಬ್ಬರೂ ಯಾವುದಾದರೊಂದು ಕ್ರೀಡೆಯಲ್ಲಿ ಸಕ್ರಿಯವಾಗಿ ತೊಡಗಿಸಿಕೊಳ್ಳುವ ಅಭ್ಯಾಸ ಬೆಳೆಸಿಕೊಳ್ಳಬೇಕು.
>
> – ಬಿ.ಬಿ. ಅಸೂಟಿ, ಜಿಲ್ಲಾಧ್ಯಕ್ಷರು, ಗ್ಯಾರಂಟಿ ಯೋಜನೆಗಳ ಅನುಷ್ಠಾನ ಪ್ರಾಧಿಕಾರ

**ಎರಡು ದಿನಗಳ ಕ್ರೀಡಾಹಬ್ಬ:** ಸೆ. 18 ಮತ್ತು 19ರಂದು ವಿವಿಧ ರೋಚಕ ಕ್ರೀಡಾ ಸ್ಪರ್ಧೆಗಳ ಆಯೋಜನೆ.

**ಗ್ರಾಮೀಣ ಪ್ರತಿಭೆಗಳಿಗೆ ವೇದಿಕೆ:** ತಾಲೂಕಿನ ಮೂಲೆ-ಮೂಲೆಗಳಿಂದ ಆಗಮಿಸಿರುವ ಕ್ರೀಡಾಪಟುಗಳಿಗೆ ತಮ್ಮ ಸಾಮರ್ಥ್ಯ ಪ್ರದರ್ಶಿಸಲು ಮುಕ್ತ ಅವಕಾಶ.

**ಸೌಹಾರ್ದತೆಯ ಸಂಕೇತ:** ದಸರಾ ಹಬ್ಬದ ಹಿನ್ನೆಲೆಯಲ್ಲಿ ಕ್ರೀಡೆಯ ಮೂಲಕ ಯುವಜನತೆಯಲ್ಲಿ ಬಾಂಧವ್ಯ ಬೆಸೆಯುವ ಪ್ರಯತ್ನ.

## ಹಾರ್ವೆಸ್ಟರ್ ಹಬ್‌ಗೆ ಅರ್ಜಿ ಆಹ್ವಾನ

**ವಿಜಯಸಾಕ್ಷಿ ಸುದ್ದಿ, ಗದಗ**

ಕೃಷಿ ಯಂತ್ರೋಪಕರಣಗಳನ್ನು ಬಾಡಿಗೆ ಆಧಾರದಲ್ಲಿ ರೈತರಿಗೆ ವಿತರಿಸುವ ಉದ್ದೇಶದಿಂದ ಗದಗ ಜಿಲ್ಲೆಯಲ್ಲಿ ಸಾಮಾನ್ಯ ವರ್ಗದ ವೈಯಕ್ತಿಕ ಫಲಾನುಭವಿಗೆ ಒಂದು ಸಕ್ಕರೆಕಬ್ಬು ಹಾರ್ವೆಸ್ಟರ್ ಹಬ್ ಹಾಗೂ ಒಂದು ಕಂಬೈನ್ಡ್ ಹಾರ್ವೆಸ್ಟರ್ ಹಬ್ ಸ್ಥಾಪಿಸಲು ಕ್ರಿಯಾ ಯೋಜನೆಗೆ ಅನುಮೋದನೆ ದೊರೆತಿದೆ.

ಆಸಕ್ತ ರೈತರು ನಿಗದಿತ ನಮೂನೆಯಲ್ಲಿ ಅಗತ್ಯ ದಾಖಲೆಗಳೊಂದಿಗೆ ಸೆ.30ರೊಳಗಾಗಿ ತಮ್ಮ ಆಯಾ ತಾಲ್ಲೂಕಿನ ಸಹಾಯಕ ಕೃಷಿ ನಿರ್ದೇಶಕರ ಕಚೇರಿಗೆ ಅರ್ಜಿ ಸಲ್ಲಿಸಬೇಕು. ಸ್ವೀಕೃತ ಅರ್ಜಿಗಳನ್ನು ಪರಿಶೀಲಿಸಿ ಜಿಲ್ಲಾಮಟ್ಟದ ಉಪಕರಣ ಸಮಿತಿಗೆ ಸಲ್ಲಿಸಲಾಗುವುದು. ಒಂದಕ್ಕಿಂತ ಹೆಚ್ಚು ಅರ್ಜಿಗಳು ಬಂದಲ್ಲಿ ಲಾಟರಿ ಮೂಲಕ ಫಲಾನುಭವಿಯನ್ನು ಆಯ್ಕೆ ಮಾಡಲಾಗುವುದು.

ಆಯ್ಕೆಯಾದ ಫಲಾನುಭವಿಗೆ ಕೃಷಿ ಯಂತ್ರೋಪಕರಣಗಳನ್ನು ದಾಸ್ತಾನು ಮಾಡಲು ಜಂಟಿ ಕೃಷಿ ನಿರ್ದೇಶಕರ ಕಚೇರಿಯಿಂದ ಕಾರ್ಯಾದೇಶ ನೀಡಲಾಗುವುದು. ನಂತರ ಸಂಬಂಧಿಸಿದ ರೈತ ಸಂಪರ್ಕ ಕೇಂದ್ರ, ತಾಲ್ಲೂಕು ಸಹಾಯಕ ಕೃಷಿ ನಿರ್ದೇಶಕರು ಹಾಗೂ ಉಪ ಕೃಷಿ ನಿರ್ದೇಶಕರು ಯಂತ್ರೋಪಕರಣಗಳನ್ನು ಪರಿಶೀಲಿಸಿದ ಬಳಿಕ ನಿಯಮಾನುಸಾರ ಸಹಾಯಧನವನ್ನು ಸಂಬಂಧಿಸಿದ ಸಾಲದ ಬ್ಯಾಂಕ್ ಖಾತೆಗೆ ಕ್ರೆಡಿಟ್ ಲಿಂಕ್ಡ್ ಬ್ಯಾಕ್ ಎಂಡೆಡ್ ಸಬ್ಸಿಡಿ ಮೂಲಕ ಜಮಾ ಮಾಡಲಾಗುವುದು ಎಂದು ಜಂಟಿ ಕೃಷಿ ನಿರ್ದೇಶಕರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

ಅರ್ಜಿಯೊಂದಿಗೆ ಪಹಣಿ ಪ್ರತಿ, ಆಧಾರ್ ಕಾರ್ಡ್ ಪ್ರತಿ, ಬ್ಯಾಂಕ್ ಪಾಸ್‌ಬುಕ್ ಪ್ರತಿ ಹಾಗೂ ಎಫ್‌ಐಡಿ ಸಂಖ್ಯೆ. ಅಲ್ಲದೆ, ರೂ.100ರ ಛಾಪಾ ಕಾಗದದ ಮೇಲೆ ಹಬ್‌ನ್ನು ಪರಭಾರೆ ಮಾಡುವುದಿಲ್ಲ ಎಂಬ ನೋಟರಿ ಮಾಡಿಸಿದ ಮುಚ್ಚಳಿಕೆ ಪತ್ರ ಹಾಗೂ ಸಂಬಂಧಿಸಿದ ಬ್ಯಾಂಕ್‌ನಿಂದ ತಾತ್ವಿಕ ಸಾಲ ಮಂಜೂರಾತಿ ಪತ್ರ ಸಲ್ಲಿಸುವುದು ಕಡ್ಡಾಯವಾಗಿದೆ.

ಹೆಚ್ಚಿನ ಮಾಹಿತಿಗಾಗಿ ಸಂಬಂಧಿಸಿದ ತಾಲ್ಲೂಕು ಸಹಾಯಕ ಕೃಷಿ ನಿರ್ದೇಶಕರ ಕಚೇರಿ, ಉಪ ಕೃಷಿ ನಿರ್ದೇಶಕರ ಕಚೇರಿ ಅಥವಾ ಜಂಟಿ ಕೃಷಿ ನಿರ್ದೇಶಕರ ಕಚೇರಿಯನ್ನು ಸಂಪರ್ಕಿಸಬಹುದು.

### ಇಂದು ಶಿವಸಂಗಮ ಸಹಕಾರಿ ಸಂಘದ ವಾರ್ಷಿಕ ಸಭೆ

**ವಿಜಯಸಾಕ್ಷಿ ಸುದ್ದಿ, ಗದಗ**


ಗದುಗಿನ ಶಿವಸಂಗಮ ವಿವಿಧೋದ್ದೇಶಗಳ ಸೌಹಾರ್ದ ಸಹಕಾರಿ ಸಂಘ ನಿಯಮಿತದ 12ನೇ ವಾರ್ಷಿಕ ಸರ್ವಸಾಧಾರಣ ಸಭೆ ಸೆ.19ರಂದು ಶನಿವಾರ ಬೆಳಿಗ್ಗೆ 10.30ಕ್ಕೆ ನಗರದ ಹಳೆ ಕೋರ್ಟ್ ಬಳಿಯ ಲಯನ್ಸ್ ಭವನದಲ್ಲಿ ನಡೆಯಲಿದೆ. ಸಂಘದ ಸರ್ವ ಸದಸ್ಯರು ಹಾಗೂ ಷೇರುದಾರರು ಸಕಾಲಕ್ಕೆ ಆಗಮಿಸಿ ಸಲಹೆ–ಸೂಚನೆಗಳನ್ನು ನೀಡಿ ಸಭೆಯನ್ನು ಯಶಸ್ವಿಗೊಳಿಸಬೇಕು ಎಂದು ವ್ಯವಸ್ಥಾಪಕ ಎಂ.ಎಂ. ಬಡಿಗೇರ ವಿನಂತಿಸಿದ್ದಾರೆ.

### 23ಕ್ಕೆ ಸುವಿಧಾ ಸಹಕಾರಿ ಸಂಘದ ವಾರ್ಷಿಕ ಸಭೆ

**ವಿಜಯಸಾಕ್ಷಿ ಸುದ್ದಿ, ಗದಗ**

ಗದುಗಿನ ಸುವಿಧಾ ಪತ್ತಿನ ಸೌಹಾರ್ದ ಸಹಕಾರಿ ಸಂಘ ನಿಯಮಿತದ 12ನೇ ವಾರ್ಷಿಕ ಸರ್ವಸಾಧಾರಣ ಸಭೆ ಸೆ.23ರಂದು ಬುಧವಾರ ಸಂಜೆ 4.30ಕ್ಕೆ ನಗರದ ಮುಳಗುಂದ ನಾಕಾ ಬಳಿಯ ಸಂಘದ ಕಾರ್ಯಾಲಯದಲ್ಲಿ ನಡೆಯಲಿದೆ. ಅಧ್ಯಕ್ಷ ಬಿ.ವಿ. ಸಂಕನೂರ ಸಭೆಯ ಅಧ್ಯಕ್ಷತೆ ವಹಿಸುವರು. ಸದಸ್ಯರು, ಷೇರುದಾರರು ಸಕಾಲಕ್ಕೆ ಆಗಮಿಸಿ ಸಲಹೆ–ಸೂಚನೆಗಳನ್ನು ನೀಡಿ ಸಭೆಯನ್ನು ಯಶಸ್ವಿಗೊಳಿಸಬೇಕು ಎಂದು ವ್ಯವಸ್ಥಾಪಕರು ವಿನಂತಿಸಿದ್ದಾರೆ.

## ಮಹಾರಾಣಾ ಪ್ರತಾಪಸಿಂಹ ಸಂಸ್ಥೆಯಲ್ಲಿ ಗಜಾನನೋತ್ಸವ



**ವಿಜಯಸಾಕ್ಷಿ ಸುದ್ದಿ, ಬೆಟಗೇರಿ**

ಇಲ್ಲಿನ ಶ್ರೀ ಮಹಾರಾಣಾ ಪ್ರತಾಪಸಿಂಹ ಶಿಕ್ಷಣ ಸಂಸ್ಥೆಯಲ್ಲಿ ಐದು ದಿನಗಳ ಕಾಲ ಗಜಾನನೋತ್ಸವವನ್ನು ಶ್ರದ್ಧಾ–ಭಕ್ತಿಯಿಂದ ಆಚರಿಸಲಾಯಿತು. ಸೆ.14ರಂದು ಜೋಡು ಗಣೇಶ ಮೂರ್ತಿಗಳ ಪ್ರತಿಷ್ಠಾಪನೆ ನೆರವೇ–ರಿಸಲಾಯಿತು. ಬಳಿಕ ಐದು ದಿನಗಳ ಕಾಲ ವಿದ್ಯಾರ್ಥಿಗಳು, ಶಿಕ್ಷಕ–ಶಿಕ್ಷಕಿಯರು ಹಾಗೂ ಸಿಬ್ಬಂದಿ ಶ್ರದ್ಧಾಭಕ್ತಿಯಿಂದ ಪೂಜೆ ಸಲ್ಲಿಸಿದರು. ಸೆ.18ರಂದು ವಿವಿಧ ಧಾರ್ಮಿಕ ವಿಧಿವಿಧಾನಗಳೊಂದಿಗೆ ಗಣೇಶ ಮೂರ್ತಿಗಳ ವಿಸರ್ಜನೆ ನೆರವೇರಿಸಲಾಯಿತು.

ಈ ಸಂದರ್ಭದಲ್ಲಿ ಸಂಸ್ಥೆಯ ಸಂಸ್ಥಾಪಕ ಗಣೇಶಸಿಂಗ್ ಬ್ಯಾಳಿ, ಪ್ರಾಚಾರ್ಯ ಎಸ್. ಎಂ. ಉಳ್ಳಾಗಡ್ಡಿ, ಮುಖ್ಯಾಧ್ಯಾಪಕ ಎಸ್. ಎಸ್. ಬಡಿಗೇರ ಸೇರಿದಂತೆ ಸಮಸ್ತ ಸಿಬ್ಬಂದಿ ಹಾಗೂ ವಿದ್ಯಾರ್ಥಿ–ವಿದ್ಯಾರ್ಥಿನಿಯರು ಉಪಸ್ಥಿತರಿದ್ದರು.

## ಬೆರಳಚ್ಚು ಪರೀಕ್ಷೆಯಲ್ಲಿ ಶೇ.94.12 ಫಲಿತಾಂಶ



**ವಿಜಯಸಾಕ್ಷಿ ಸುದ್ದಿ, ಗದಗ**

ಕರ್ನಾಟಕ ಶಾಲಾ ಪರೀಕ್ಷಾ ಮತ್ತು ಮೌಲ್ಯ ನಿರ್ಣಯ ಮಂಡಳಿ, ಬೆಂಗಳೂರು ವತಿಯಿಂದ ಜುಲೈ 2026ರಲ್ಲಿ ನಡೆಸಿದ ಬೆರಳಚ್ಚು ವಾರ್ಷಿಕ ಪರೀಕ್ಷೆಯಲ್ಲಿ ಗದಗ–ಬೆಟಗೇರಿ ನಗರದ ಆದರ್ಶ ವಾಣಿಜ್ಯ ವಿದ್ಯಾಶಾಲೆ ಶೇ.94.12ರಷ್ಟು ಫಲಿತಾಂಶ ದಾಖಲಿಸಿ ಗಮನಾರ್ಹ ಸಾಧನೆ ಮಾಡಿದೆ.

ಇಂಗ್ಲಿಷ್ ಬೆರಳಚ್ಚು ಪ್ರೌಢ ದರ್ಜೆ ವಿಭಾಗದಲ್ಲಿ ಕಿಶನ್ ಕಿಶೋರ್ ಐಲಿ ಶೇ.88, ಕಿರಣ್ ಕುಮಾರ್ ಅಸುಂಡಿ ಶೇ.82.50 ಹಾಗೂ ವಿಜಯ್ ಕುಮಾರ್ ಗೋಟೂರು ಶೇ.82 ಅಂಕ ಗಳಿಸಿದ್ದಾರೆ.

ಇಂಗ್ಲಿಷ್ ಬೆರಳಚ್ಚು ಪ್ರಥಮ ದರ್ಜೆ ವಿಭಾಗದಲ್ಲಿ ರಾಕೇಶ್ ದೇವಪ್ಪ ಗೆದ್ದನವರ ಶೇ.91 ಹಾಗೂ ಕುಮಾರಿ ಆರತಿ ಶ್ಯಾವಿ ಶೇ.85 ಅಂಕ ಪಡೆದಿದ್ದಾರೆ.

ಕನ್ನಡ ಬೆರಳಚ್ಚು ಪ್ರೌಢ ದರ್ಜೆ ವಿಭಾಗದಲ್ಲಿ ಕಿಶನ್ ಕುಮಾರ್ ಐಲಿ ಶೇ.85.50, ಕಿರಣ್ ಕುಮಾರ್ ಅಸುಂಡಿ ಶೇ.78 ಹಾಗೂ ವಿಜಯ್ ಕುಮಾರ್ ಗೋಟೂರು ಶೇ.75 ಅಂಕ ಗಳಿಸಿದ್ದಾರೆ.

ಕನ್ನಡ ಬೆರಳಚ್ಚು ಪ್ರಥಮ ದರ್ಜೆ ವಿಭಾಗದಲ್ಲಿ ರತ್ನಾಬಾಯಿ ಶೇ.86.50, ರಾಕೇಶ್ ದೇವಪ್ಪ ಗೆದ್ದನವರ ಶೇ.85, ಕುಮಾರಿ ದೀಪ ಮಾದಗುಂಡಿ ಶೇ.83 ಹಾಗೂ ಕುಮಾರಿ ಆರತಿ ಶ್ಯಾವಿ ಶೇ.80.50 ಅಂಕ ಗಳಿಸಿ ಉತ್ತಮ ಸಾಧನೆ ಮಾಡಿದ್ದಾರೆ.

ಪರೀಕ್ಷೆಯಲ್ಲಿ ಉತ್ತಮ ಸಾಧನೆ ಮಾಡಿದ ಎಲ್ಲ ವಿದ್ಯಾರ್ಥಿಗಳನ್ನು ಸಂಸ್ಥೆಯ ಮುಖ್ಯಸ್ಥ ಎ.ಎಸ್. ಮಕಾನದಾರ ಅಭಿನಂದಿಸಿ, ವಿದ್ಯಾರ್ಥಿಗಳ ಸಾಧನೆಗೆ ಸಂತಸ ವ್ಯಕ್ತಪಡಿಸಿದ್ದಾರೆ.

## ಇ–ಕೆವೈಸಿಗೆ ಅನಗತ್ಯ ದಾಖಲೆ ಕೇಳದಿರಿ: ಸ್ಲಂ ಸಮಿತಿ



**ವಿಜಯಸಾಕ್ಷಿ ಸುದ್ದಿ, ಗದಗ**

ಪಡಿತರ ಚೀಟಿಗೆ ಇ–ಕೆವೈಸಿ ಮಾಡಿಸಲು ಬರುತ್ತಿರುವ ಜನರಿಗೆ ಅನಗತ್ಯ ದಾಖಲೆಗಳನ್ನು ಕೇಳಿ ತೊಂದರೆ ನೀಡಲಾಗುತ್ತಿದೆ ಎಂದು ಆರೋಪಿಸಿ, ಸ್ಲಂ ಜನಾಂದೋಲನ–ಕರ್ನಾಟಕ ಹಾಗೂ ಗದಗ ಜಿಲ್ಲಾ ಸ್ಲಂ ಸಮಿತಿ ಪದಾಧಿಕಾರಿಗಳು ಆಹಾರ ಇಲಾಖೆಯ ಉಪನಿರ್ದೇಶಕರಿಗೆ ಮನವಿ ಸಲ್ಲಿಸಿದರು.

ರಾಜ್ಯ ಸರ್ಕಾರದ ಸೂಚನೆಯಂತೆ ಪಡಿತರದಾರರ ಇ–ಕೆವೈಸಿ ಪ್ರಕ್ರಿಯೆ ನಡೆಯುತ್ತಿದ್ದು, ಗದಗ–ಬೆಟಗೇರಿ ನಗರದ ಪಡಿತರ ಅಂಗಡಿಗಳ ಮುಂದೆ ಜನರು ಸರದಿ ಸಾಲಿನಲ್ಲಿ ನಿಲ್ಲುವಂತಾಗಿದೆ. ಇದರ ನಡುವೆ ಕೆಲ ಪಡಿತರ ಅಂಗಡಿಕಾರರು ಜಾತಿ ಮತ್ತು ಆದಾಯ ಪ್ರಮಾಣಪತ್ರ, ಗ್ಯಾಸ್ ಬಿಲ್ ಸೇರಿದಂತೆ ವಿವಿಧ ದಾಖಲೆಗಳನ್ನು ಕೇಳುತ್ತಿರುವುದರಿಂದ ಬಡ ಹಾಗೂ ಮಧ್ಯಮ ವರ್ಗದ ಕುಟುಂಬಗಳಿಗೆ ತೊಂದರೆಯಾಗುತ್ತಿದೆ ಎಂದು ಸಮಿತಿ ಆರೋಪಿಸಿದೆ.

ಸ್ಲಂ ಸಮಿತಿ ಅಧ್ಯಕ್ಷ ಇಮ್ತಿಯಾಜ್ ಆರ್. ಮಾನ್ವಿ ಮಾತನಾಡಿ, ಸರ್ವರ್ ಸಮಸ್ಯೆಯಿಂದಲೂ ಜನರು ಗಂಟೆಗಟ್ಟಲೆ ಕಾಯುವ ಪರಿಸ್ಥಿತಿ ನಿರ್ಮಾಣವಾಗಿದೆ. ಇ–ಕೆವೈಸಿ ಹೆಸರಿನಲ್ಲಿ ಸಂಬಂಧವಿಲ್ಲದ ದಾಖಲೆಗಳನ್ನು ಕೇಳಿ ಜನರಿಗೆ ತೊಂದರೆ ನೀಡಬಾರದು. ಸರ್ಕಾರದ ನಿರ್ದೇಶನದಂತೆ ಅಗತ್ಯ ಪ್ರಕ್ರಿಯೆ ಸರಳವಾಗಿ ಪೂರ್ಣಗೊಳಿಸಲು ಕ್ರಮ ಕೈಗೊಳ್ಳಬೇಕು ಎಂದು ಆಗ್ರಹಿಸಿದರು.

ಎಲ್ಲ ಪಡಿತರ ಅಂಗಡಿಗಳಲ್ಲಿ ಇ–ಕೆವೈಸಿ ಸಂಬಂಧಿತ ಮಾಹಿತಿ ಹಾಗೂ ಅಗತ್ಯ ದಾಖಲೆಗಳ ವಿವರವನ್ನು ಸಾರ್ವಜನಿಕ–ರಿಗೆ ಕಾಣುವಂತೆ ಗೋಡೆಗಳ ಮೇಲೆ ಪ್ರಕಟಿಸಬೇಕು. ವಿನಾಕಾರಣ ಹೆಚ್ಚುವರಿ ದಾಖಲೆಗಳನ್ನು ಕೇಳುವ ಅಂಗಡಿಕಾರರ ವಿರುದ್ಧ ಕ್ರಮ ಕೈಗೊಳ್ಳಬೇಕು. ಸರ್ವರ್ ಸಮಸ್ಯೆ ನಿವಾರಿಸಿ, ಎಲ್ಲ ಅಂಗಡಿಗಳಲ್ಲೂ ಸುಗಮವಾಗಿ ಇ–ಕೆವೈಸಿ ಮಾಡುವ ವ್ಯವಸ್ಥೆ ಕಲ್ಪಿಸಬೇಕು ಎಂದು ಒತ್ತಾಯಿಸಿದರು. ಇ–ಕೆವೈಸಿ ನೆಪದಲ್ಲಿ ಬಿಪಿಎಲ್ ಕುಟುಂಬಗಳಿಗೆ ತೊಂದರೆ ಮುಂದುವ–ರಿದರೆ ಆಹಾರ ಇಲಾಖೆ ಕಚೇರಿ ಎದುರು ಪ್ರತಿಭಟನೆ ನಡೆಸಲಾಗುವುದು ಎಂದು ಮನವಿ ಮೂಲಕ ಎಚ್ಚರಿಸಿದರು.

ಮನವಿ ಸ್ವೀಕರಿಸಿದ ಆಹಾರ ಇಲಾಖೆಯ ಉಪನಿರ್ದೇಶಕರು, ಪಡಿತರ ಅಂಗಡಿಕಾರರು ಹಾಗೂ ಇಲಾಖೆ ಅಧಿಕಾರಿಗಳ ಸಭೆ ನಡೆಸಿ, ಜನ–ರಿಗೆ ತೊಂದರೆಯಾಗದಂತೆ ಇ–ಕೆವೈಸಿ ಪ್ರಕ್ರಿಯೆ ಕೈಗೊಳ್ಳಲು ಸೂಚಿಸಲಾಗುವುದು. ವಿನಾಕಾರಣ ದಾಖಲೆಗಳನ್ನು ಕೇಳದಂತೆ ಕ್ರಮವಹಿಸಲಾಗುವುದು ಎಂದು ತಿಳಿಸಿದರು. ಈ ಸಂದರ್ಭದಲ್ಲಿ ಸ್ಲಂ ಸಮಿತಿ ಮುಖಂಡ ಎಂ.ಬಿ. ನದಾಫ, ವಕೀಲರು, ಮಹಿಳಾ ಸಮಿತಿ ಸಂಚಾಲಕಿ ಪರವೀನಬಾನು ಹವಾಲ್ದಾರ, ಇಬ್ರಾಹಿಂ ಮುಲ್ಲಾ, ಶರಣಪ್ಪ ಸೂಡಿ, ಮೆಹಬೂಬಸಾಬ ಬಳ್ಳಾರಿ, ಮಕ್ತುಮಸಾಬ ಮುಲ್ಲಾನವರ, ನಜಮುನಿಸಾ ಮುರಗೋಡ, ನಾಗರತ್ನ ಬನಗಾರ, ಜಂದಿಸಾಬ ಢಾಲಾಯತ, ರವಿ ಗೋಸಾವಿ, ಶಂಕ್ರಪ್ಪ ರೋಣದ, ಹುಸೇನ ಮುಲ್ಲಾನವರ ಸೇರಿದಂತೆ ಹಲವರು ಉಪಸ್ಥಿತರಿದ್ದರು.

## ಎಪಿಎಂಸಿಯಲ್ಲಿ ಮುತ್ತೈದೆಯರಿಗೆ ಉಡಿತುಂಬಿ ಗಣೇಶೋತ್ಸವ ಸಂಭ್ರಮ



**ವಿಜಯಸಾಕ್ಷಿ ಸುದ್ದಿ, ಗದಗ**

ನಗರದ ಶ್ರೀ ಗಾನಯೋಗಿ ಪಂಡಿತ ಪಂಚಾಕ್ಷರ ಗವಾಯಿಗಳ ಕೃಷಿ ಉತ್ಪನ್ನ ಮಾರುಕಟ್ಟೆ ಪ್ರಾಂಗಣ (ಎಪಿಎಂಸಿ)ದಲ್ಲಿ ಶ್ರೀ ಗಜಾನನೋತ್ಸವ ಟ್ರಸ್ಟ್ ಕಮಿಟಿ ವತಿಯಿಂದ ಗಣೇಶೋತ್ಸವದ ಅಂಗವಾಗಿ ಗುರುವಾರ ವಿವಿಧ ಧಾರ್ಮಿಕ ಹಾಗೂ ಸಾಂಸ್ಕೃತಿಕ ಕಾರ್ಯಕ್ರಮಗಳು ವಿಜೃಂಭಣೆಯಿಂದ ಜರುಗಿದವು.

ಧಾರ್ಮಿಕ ಕಾರ್ಯಕ್ರಮದ ಅಂಗವಾಗಿ ಶ್ರೀ ಗಣೇಶನಿಗೆ 1008 ಮೋದಕಗಳ ಪೂಜೆಯನ್ನು ಶಂಭುಲಿಂಗಯ್ಯಸ್ವಾಮಿ ಹಿರೇಮಠ ನೆರವೇರಿಸಿದರು. ಭಕ್ತರು ಅರ್ಪಿಸಿದ ಮೋದಕಗಳನ್ನು ಸಾಂಪ್ರದಾಯಿಕ ಪೂಜಾ ವಿಧಿವಿಧಾನಗಳೊಂದಿಗೆ ಗಣೇಶನಿಗೆ ನೈವೇದ್ಯವಾಗಿ ಸಮರ್ಪಿಸಲಾಯಿತು. ಬಳಿಕ ಮಹಾಮಂಗಳಾರತಿ ನೆರವೇರಿಸಿ, ನೆರೆದಿದ್ದ ನೂರಾರು ಭಕ್ತರಿಗೆ ಪ್ರಸಾದ ವಿತರಿಸಲಾಯಿತು.

ಇದೇ ಸಂದರ್ಭದಲ್ಲಿ 251 ಮುತ್ತೈದೆಯರಿಗೆ ಉಡಿತುಂಬುವ ಕಾರ್ಯಕ್ರಮ ಶ್ರದ್ಧಾ–ಭಕ್ತಿಯಿಂದ ನಡೆಯಿತು. ಅರಿಶಿನ, ಕುಂಕುಮ, ಬಳೆ, ಹೂವು ಹಾಗೂ ಫಲ–ತಾಂಬೂಲಗಳೊಂದಿಗೆ ಮುತ್ತೈದೆಯರಿಗೆ ಉಡಿತುಂಬಿ ಗೌರವಿಸಲಾಯಿತು.

ಇದಕ್ಕೂ ಮುನ್ನ ಸನಾತನ ಧರ್ಮದ ಸಂಪ್ರದಾಯದಂತೆ ಗೋ ಪೂಜೆ ನೆರವೇ–ರಿಸಲಾಯಿತು. ಅಲಂಕೃತ ಗೋವುಗಳಿಗೆ ವಿಶೇಷ ಪೂಜೆ ಸಲ್ಲಿಸುವ ಮೂಲಕ ಗ್ರಾಮೀಣ ಹಾಗೂ ಕೃಷಿ ಸಂಸ್ಕೃತಿಯ ಮಹತ್ವವನ್ನು ಸಾರಲಾಯಿತು.

ಈ ಸಂದರ್ಭದಲ್ಲಿ ಚನ್ನಯ್ಯ ಹಿರೇಮಠ, ಬಸಣ್ಣ ನವಲಗುಂದ, ಪರಪ್ಪ ಗುಡಿಸಾಗರ, ಸೋಮನಾಥ ಖಟವಟೆ, ವಿಜಯ ಗುಡಿಸಾಗರ, ಮಂಜುನಾಥ ಮಲ್ಲರಡ್ಡಿ, ವಿರೇಶ ಕೀರ್ತಿ, ಶಂಕರ ಜಕ್ಕಣ್ಣವರ, ಕುಮಾರಸ್ವಾಮಿ ಹಿರೇಮಠ, ಎಸ್.ವಿ. ಮುದೇನಗುಡಿ, ನಿಖೀಲ ದನ್ನೂರಮಠ, ಬಸವರಾಜ ಹರ್ತಿ, ಸುವರ್ಣ ದಾನಪ್ಪಗೌಡ್ರ ಹಾಗೂ ಗೌತಮ ಗಡ್ಡಿ ಅವರನ್ನು ಸನ್ಮಾನಿಸಲಾಯಿತು.

ಟ್ರಸ್ಟ್ ಕಮಿಟಿ ಅಧ್ಯಕ್ಷ ತಿಮ್ಮರೆಡ್ಡಿ ಕೋನರೆಡ್ಡಿ, ಗೌರವ ಅಧ್ಯಕ್ಷ ಪ್ರಮೋದ ಆರ್. ವಾರಕರ, ಕಾರ್ಯದರ್ಶಿ ರಾಜಶೇಖರ ಬಿ. ಮುಧೋಳ, ಉಪಾಧ್ಯಕ್ಷ ರಾಜು ಎನ್. ಮೂಲೀಮನಿ, ಸಹಕಾರ್ಯದರ್ಶಿ ಚಂದ್ರಕಾಂತ ಬಿ. ಸವದತ್ತಿ, ಖಜಾಂಚಿ ಮಹೇಶ ಜಿ. ಗಾಣಿಗೇರ, ವಿನಾಯಕ ಪಿ. ವಜೇಶ್ವರಿ, ವಿವೇಕಾನಂದ ಗುಡಿಮನಿ, ಕೊಟ್ರೇಶ ಈ. ಬಾಳಿಕಾಯಿ, ಗಿರೀಶ ವಿ. ಅಳವಂಡಿ, ದಯಾನಂದ ದುಂಡಪ್ಪನವರ ಹಾಗೂ ವಿನಯ ವಿ. ಕಾಡಪ್ಪನವರ ಸೇ–ರಿದಂತೆ ಎಪಿಎಂಸಿ ವರ್ತಕರು, ರೈತರು ಹಾಗೂ ಸುತ್ತಮುತ್ತಲಿನ ನೂರಾರು ಸಾರ್ವಜನಿಕರು ಭಾಗವಹಿಸಿದ್ದರು.

VIJAYA SAKSHI KANNADA DAILY MORNING Editor, Printer, Publisher, & Owned by : Hussainsab M. Shareefanavar, H.No. 130/154, Balaji Nagar, Near Ring Road, Gadag-582103, Dist : Gadag- Karnataka
Printed at : Sai Printing Press, Near Joda Maruti Temple, Gadag-582101, Dist : Gadag- Karnataka